ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 165
15-12-2025 ಸೋಮವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 165

# ನಾಡು ಕಂಡ ವಿಸ್ಮಯ ವ್ಯಕ್ತಿತ್ವದ ಶಾಮನೂರು ಯುಗಾಂತ್ಯ

**ದಾವಣಗೆರೆ:** ಕಾಂಗ್ರೆಸ್‌ನ ಹಿರಿಯ ಶಾಸಕ, ಅಖಿಲ ಭಾರತ ವೀರಶೈವ ಮಹಾ ಸಭೆಯ ರಾಷ್ಟ್ರೀಯ ಅಧ್ಯಕ್ಷರಾದ ಶಾಮನೂರು ಶಿವಶಂಕರಪ್ಪ (94) ನಿಧನರಾಗಿದ್ದಾರೆ. ಕಳೆದ ಹಲವು ದಿನಗಳಿಂದ ಅನಾರೋಗ್ಯದಿಂದಾಗಿ ಆಸ್ಪತ್ರೆಗೆ ದಾಖಲಾಗಿದ್ದರು. ಆದ್ರೆ, ಚಿಕಿತ್ಸೆ ಫಲಕಾರಿಯಾಗದೇ ಇಂದು ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ.

94 ವರ್ಷದ ಶಾಮನೂರು ಶಿವಶಂಕರಪ್ಪ ಅವರಿಗೆ 94 ವಯಸ್ಸಾಗಿದ್ದು, ಭಾರತದಲ್ಲೇ ಹಿರಿಯ ಶಾಸಕ ಎನ್ನುವ ಹೆಗ್ಗಳಿಕೆಗೆ ಪಾತ್ರರಾಗಿದ್ದರು. ಆದ್ರೆ, ವಯೋಸಹಜ ಅನಾರೋಗ್ಯದ ಹಿನ್ನೆಲೆ ಕಳೆ ದಿನಗಳಿಂದ ಬೆಂಗಳೂರಿನ ಸ್ಪರ್ಶ ಆಸ್ಪತ್ರೆಗೆ ದಾಖಲಾಗಿಸಲಾಗಿತ್ತು. ಆಗಲೇ ಬೇರೆ ಬೇರೆ ಸುದ್ದಿ ಹರಿದಾಡಿದ್ದರಿಂದ ಈ ಬಗ್ಗೆ ಪುತ್ರ, ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಅವರು ಪ್ರತಿಕ್ರಿಯಿಸಿ ತಮ್ಮ ತಂದೆ ಚೆನ್ನಾಗಿದ್ದಾರೆ. ಗುರು ಹಿರಿಯರ ಆಶೀರ್ವಾದದಿಂದ ಇನ್ನೊಂದು ವಾರದಲ್ಲೇ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಲಿದ್ದಾರೆ ಎಂದು ಹೇಳಿದ್ದರು. ಆದ್ರೆ, ದುರದೃಷ್ಟವಶಾತ್ ಚಿಕಿತ್ಸೆ ಫಲಕಾರಿಯಾಗದೇ ಇಂದು ನಿಧನರಾಗಿದ್ದಾರೆ.

ದಶಕಗಳ ಕಾಲ ಸಕ್ರಿಯ ರಾಜಕಾರಣದಲ್ಲಿದ್ದ ಶಾಮನೂರು ಶಿವಶಂಕರಪ್ಪ ಅವರು ಆರು ಬಾರಿ ಶಾಸಕರಾಗಿ ಹಾಗೂ ಒಂದು ಬಾರಿ ಸಂಸದರಾಗಿ ಆಯ್ಕೆಯಾಗಿದ್ದರು. ರಾಜ್ಯದ ವಿವಿಧ ಸರ್ಕಾರಗಳಲ್ಲಿ ಪ್ರಮುಖ ಖಾತೆಗಳನ್ನು ನಿಭಾಯಿಸುವ ಮೂಲಕ



ಸಚಿವರಾಗಿಯೂ ಸೇವೆ ಸಲ್ಲಿಸಿದ್ದಾರೆ.


ಶಾಮನೂರು ಶಿವಶಂಕರಪ್ಪ ಅವರ ಪುತ್ರ ಎಸ್.ಎಸ್. ಮಲ್ಲಿಕಾರ್ಜುನ ತೋಟಗಾರಿಕೆ ಸಚಿವರಾಗಿದ್ದು ಅವರ ಸೊಸೆ ಪ್ರಭಾ ಮಲ್ಲಿಕಾರ್ಜುನ ಸಂಸದರಾಗಿದ್ದಾರೆ. 1931ರ ಜೂನ್ 16ರಂದು ದಾವಣಗೆರೆಯಲ್ಲಿ ಜನಿಸಿದ್ದ ಶಾಮನೂರು ಶಿವಶಂಕರಪ್ಪ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ವಿಧಾನಸಭೆಯ ಸದಸ್ಯರಾಗಿದ್ದು, ಅವರು ಭಾರತದಲ್ಲಿ ರಾಜ್ಯ ವಿಧಾನಸಭೆಯ ಅತ್ಯಂತ ಹಿರಿಯ ಸದಸ್ಯರಾಗಿದ್ದರು.

ಶಾಮನೂರು ಶಿವಶಂಕರಪ್ಪ ಅವರು ವಿಧಾನಸಭೆಗೆ ಆರು ಸಲ ಶಾಸಕರಾಗಿ, ಒಮ್ಮೆ ಸಂಸದರಾಗಿ ಆಯ್ಕೆಯಾಗಿದ್ದಾರೆ. 1997ರಲ್ಲಿ ದಾವಣಗೆರೆ ಲೋಕಸಭೆ ಮಧ್ಯಂತರ ಚುನಾವಣೆಯಲ್ಲಿ ಸೋಲು ಕಂಡಿದ್ದರು. ಐದು ದೇಶಕದ ರಾಜಕೀಯ ಜೀವನದಲ್ಲಿ ಒಂದು ಬಾರಿ ಸೋಲನ್ನಪ್ಪಿದ್ದಾರೆ. 1994, 2004, 2008, 2013, 2018, 2023 ರಲ್ಲಿ ಶಾಸಕರಾಗಿ ಆಯ್ಕೆಯಾಗಿದ್ದರು.

ರಾಜಕೀಯ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ದಶಕಗಳ ಕಾಲ ಸೇವೆ ಸಲ್ಲಿಸಿದ್ದ ಶಾಮನೂರು ಶಿವಶಂಕರಪ್ಪ ಅವರು ಹಲವು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದರು. ಸಚಿವರಾಗಿಯೂ ಕಾರ್ಯನಿರ್ವಹಿಸಿ, ದಾವಣಗೆರೆ ಜಿಲ್ಲೆಯ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ್ದರು. ಲಿಂಗಾಯತ ಸಮಾಜದ ಸಂಘಟನೆ ಮತ್ತು ಏಕತೆಗೆ ಅವರು ಅಪಾರ ಸೇವೆ ಸಲ್ಲಿಸಿದ್ದರು.

ಲಿಂಗಾಯತ ನಾಯಕರಲ್ಲೇ ಮುಂಚೂಣಿ ಹೋರಾಟಗಾರ ಹಾಗೂ ಕರ್ನಾಟಕದಲ್ಲಿ ಲಿಂಗಾಯತ ಸಮುದಾಯ ಮತ್ತು ವೀರಶೈವ ಸಮುದಾಯವನ್ನು ಒಗ್ಗೂಡಿಸಲು ಶ್ರಮ ವಹಿಸಿದ್ದ ಶಾಮನೂರು ಶಿವಶಂಕರಪ್ಪ ಅವರ ಅಗಲಿಕೆ ಅವರ ಬೆಂಬಲಿಗರಿಗೆ ಹಾಗೂ ಅಭಿಮಾನಿಗಳಿಗೆ ನೋವು ಮತ್ತು ಆಘಾತ ತಂದಿದೆ. ಕಾಂಗ್ರೆಸ್ ಪಕ್ಷವೇ ಶಾಮನೂರು ಶಿವಶಂಕರಪ್ಪ ಅವರ ರಾಜಕೀಯ ಅಖಾಡವಾಗಿದ್ದರೂ, ಪ್ರತಿಯೊಂದು ಪಕ್ಷದಲ್ಲೂ ಸ್ನೇಹಿತರನ್ನು ಹೊಂದಿದ್ದರು. ಆದರೆ ಇಂದು ದಿಢೀರ್ ಶಾಮನೂರು ಶಿವಶಂಕರಪ್ಪ ಅವರ ಅಗಲಿಕೆ ಸುದ್ದಿ ಭಾರಿ ದೊಡ್ಡ ನೋವು ಹಾಗೂ ದುಖಃವನ್ನು ಅಭಿಮಾನಿಗಳಿಗೆ ತರಿಸಿದೆ.

## ಕಂಡಕಂಡಲ್ಲಿ ಕಾಮಚೇಷ್ಟೆ: ರೊಚ್ಚಿಗೆದ್ದ ಮಹಿಳೆಯರಿಂದ ಕಾಮುಕನಿಗೆ ಬಿತ್ತು ಧರ್ಮದೇಟು



**ಹುಬ್ಬಳ್ಳಿ:** ಸಾರ್ವಜನಿಕವಾಗಿ ಅಸಭ್ಯ ವರ್ತನೆ ತೋರುವವರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗತೊಡಗಿದೆ. ಇಂಥಹದ್ದೇ ಘಟನೆ ಹುಬ್ಬಳ್ಳಿಯ ಈಶ್ವರ ನಗರದಲ್ಲಿ ವರದಿಯಾಗಿದೆ. ಕಂಡಕಂಡಲ್ಲಿ ಕಾಮಚೇಷ್ಟೇ ಮಾಡುತ್ತಿದ್ದ ವ್ಯಕ್ತಿಯೋರ್ವನಿಗೆ ಮಹಿಳೆಯರು ಹಿಗ್ಗಾ-ಮುಗ್ಗಾ ಥಳಿಸಿದ್ದಾರೆ.

ನಿನ್ನೆ ಸಂಜೆ ಬಡಾವಣೆಗೆ ಆಗಮಿಸಿದ್ದ ವ್ಯಕ್ತಿ, ಬಡಾವಣೆಯ ಮಹಿಳೆಯರಿಗೆ ಚುಡಾಯಿಸುತ್ತಿದ್ದ, ಅಸಭ್ಯವಾಗಿ ವರ್ತಿಸುತ್ತಿದ್ದ. ಇದನ್ನು ಗಮನಿಸಿದ ಸ್ಥಳೀಯರು, ವಿಕೃತ ಕಾಮಿಯನ್ನು ಕಂಬಕ್ಕೆ ಕಟ್ಟಿ, ಚಪ್ಪಲಿಯಿಂದ ಹಿಗ್ಗಾಮುಗ್ಗಾ ಥಳಿಸಿದ್ದಾರೆ.

## ಆರೋಗ್ಯ ಭದ್ರತೆ ಮತ್ತು ರಾಷ್ಟ್ರೀಯ ಭದ್ರತಾ ಸೆಸ್ ಮಸೂದೆ-2025 ಕುರಿತು ಧ್ವನಿ ಎತ್ತಿದ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್

**ದಾವಣಗೆರೆ :** ಆರೋಗ್ಯ ಭದ್ರತೆ ಮತ್ತು ರಾಷ್ಟ್ರೀಯ ಭದ್ರತಾ ಸೆಸ್ ಮಸೂದೆ-2025 ಕುರಿತು ನವದೆಹಲಿಯ ಸಂಸತ್ ಅಧಿವೇಶನದ ಚರ್ಚೆ ವೇಳೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಮಾತನಾಡಿದ್ದಾರೆ.

ಇಂದಿಗೂ ಗ್ರಾಮೀಣ ಭಾರತದ ಮಹಿಳೆಯರು ಸರಳ ಲಸಿಕೆಗಾಗಿ ಸುಡುವ ಬಿಸಿಲಿನಲ್ಲೇ ಮೈಲುಗಳಷ್ಟು ದೂರ ನಡೆಯುತ್ತಾಳೆ. ದಿನಗೂಲಿ ಕೆಲಸಗಾರರು ಇನ್ನೂ ಆಸ್ಪತ್ರೆ ಹಾಸಿಗೆಗಾಗಿ ಸಾಲದ ಸುಳಿಗೆ ಸಿಲುಕುತ್ತಿದ್ದಾರೆ. ಆರೋಗ್ಯವು ಲೆಕ್ಕಪತ್ರದ ದಾಖಲೆಯಲ್ಲ.ಅದು ಮಾನವ ಘನತೆ. ಭಾರತದಲ್ಲಿ ಆರೋಗ್ಯ ರಕ್ಷಣೆಯನ್ನು ಮೂಲಭೂತವಾಗಿ ಕಊಆ ಗಳು, ಅಊಆ ಗಳು, ಜಿಲ್ಲಾ ಆಸ್ಪತ್ರೆಗಳು, ತುರ್ತು ಆರೈಕೆಗಳಿಂದ ತಲುಪಿಸಲಾಗುತ್ತದೆ. ಸಮತೋಲನವು ಅಲಂಕಾರಿಕವಲ್ಲ,ಇದು ನಮ್ಮ ಆರೋಗ್ಯ ವ್ಯವಸ್ಥೆಯ ಎಂಜಿನ್ ಮತ್ತು ಯಾವುದೇ



ರಾಷ್ಟ್ರೀಯ ಭದ್ರತಾ ರಚನೆಯು ಹಣಕಾಸಿನ ಸಂಯುಕ್ತ ವ್ಯವಸ್ಥೆಯ ದುರ್ಬಲ ಅಡಿಪಾಯದ ಮೇಲೆ ನಿಲ್ಲಲು ಸಾಧ್ಯವಿಲ್ಲ ಎಂದು ಹೇಳಿದರು.

ಈ ಮಸೂದೆಯು ಪಾನ್ ಮಸಾಲಾ ಮತ್ತು ತಂಬಾಕು ಉತ್ಪನ್ನಗಳನ್ನು ತಯಾರಿಸಲು ಬಳಸುವ ಯಂತ್ರಗಳು ಮತ್ತು ಪ್ರಕ್ರಿಯೆಗಳ ಮೇಲೆ ಹೊಸ ಸೆಸ್ ವಿಧಿಸುವುದನ್ನು ಪ್ರಸ್ತಾಪಿಸುತ್ತದೆ. ಉದ್ದೇಶವು ಒಳ್ಳೆಯದಾಗಿ ಕಾಣಿಸಬಹುದು,ಆದರೆ ಜನ ಪ್ರತಿನಿಧಿಯಾಗಿ ನಮ್ಮ ಕರ್ತವ್ಯವೆಂದರೆ ಅದನ್ನು ಸಮಗ್ರವಾಗಿ ಪರಿಶೀಲಿಸುವುದಾಗಿದೆ.

ಈ ಮಸೂದೆ ಆರೋಗ್ಯ ಮತ್ತು ರಾಷ್ಟ್ರೀಯ ಭದ್ರತೆಯನ್ನು ಒಂದೇ ಸೆಸ್ ಆಗಿ ಸೇರಿಸಿದೆ ಮೊದಲನೆಯದಾಗಿ ಈ ಸೆಸ್ ವಿಭಜಿಸಬಹುದಾದ ನಿಧಿಯ ಹೊರಗಿದೆ. ಬಹುತೇಕ ಸಂಪೂರ್ಣ ಸಾರ್ವಜನಿಕ ಆರೋಗ್ಯ ಯಂತ್ರೋಪಕರಣಗಳನ್ನು ನಡೆಸುವ ರಾಜ್ಯಗಳು ಏನನ್ನೂ ಪಡೆಯುವುದಿಲ್ಲ.

ಹಿಂದಿನ ಸೆಸ್‌ಗಳು ಬಳಕೆಯಾಗದೆ ಅಥವಾ ವರ್ಗಾಯಿಸದೆ ಉಳಿದಿವೆ. ರದ್ದಾಗದ ನಿಧಿ, ಸ್ವತಂತ್ರ ಲೆಕ್ಕಪರಿಶೋಧನೆಗಳು ಅಥವಾ ಕಡ್ಡಾಯ ವರದಿ ಮಾಡುವಿಕೆ ಇಲ್ಲದೆ, ಈ ಮಸೂದೆಯು ಮತ್ತೊಂದು ಅಪಾರದರ್ಶಕ ಆದಾಯದ ಸ್ಟ್ರೀಮ್ ಆಗುವ ಅಪಾಯವಿದೆ. ಇದು ಒಂದು ಅಪವಾದವಲ್ಲ ಆದರೆ ಸಾಮಾನ್ಯವಾಗಿ ನಡೆದು ಬರುತ್ತಿರುವ ಪ್ರಕ್ರಿಯೆಯಾಗಿದೆ. ಸೆಸ್‌ಗಳು ಈಗ ಕೇಂದ್ರ ತೆರಿಗೆಗಳ 14.8% ಅನ್ನು ರೂಪಿಸುತ್ತವೆ, ಇದು 9.5% (2013-2014) ರಿಂದ ಹೆಚ್ಚಾಗಿದೆ ಎಂದರು.

ಶಿಕ್ಷಣ ಸೆಸ್‌ನಿಂದ ರೂ. 94,036 ಕೋಟಿ, ವಿವಿಧ ಸೆಸ್‌ಗಳಲ್ಲಿ ರೂ. 3.69 ಲಕ್ಷ ಕೋಟಿ, ಅವುಗಳ ಗೊತ್ತುಪಡಿಸಿದ ನಿಧಿಗಳಿಗೆ ಎಂದಿಗೂ ವರ್ಗಾಯಿಸಲಾಗಿಲ್ಲ. ಇದು ಅಸ್ಪಷ್ಟವಾಗಿದೆ .

ಹೆಚ್ಚುವರಿಯಾಗಿ, ಮಸೂದೆಯು ಎರಡು ಸಂಬಂಧವಿಲ್ಲದ ಉದ್ದೇಶಗಳನ್ನು ಆರೋಗ್ಯ ಮತ್ತು ರಾಷ್ಟ್ರೀಯ ಭದ್ರತೆಯನ್ನು ಒಂದೇ ಸೆಸ್‌ಗೆ ವಿಲೀನಗೊಳಿಸುತ್ತದೆ. ಇದು ಸ್ಪಷ್ಟತೆಯನ್ನು ದುರ್ಬಲಗೊಳಿಸುತ್ತದೆ ಮತ್ತು ಎರಡು ಸಂಪೂರ್ಣವಾಗಿ ವಿಭಿನ್ನ ವಲಯಗಳಲ್ಲಿ ಲೆಕ್ಕಪರಿಶೋಧನೆಯನ್ನು ಹೆಚ್ಚು ಕಷ್ಟಕರವಾಗಿಸುತ್ತದೆ. ಸಹಕಾರಿ ಒಕ್ಕೂಟ ವ್ಯವಸ್ಥೆಯನ್ನು ಬಲಪಡಿಸುವ ಬದಲು, ಈ ಮಸೂದೆಯು ಉಖಖಿ ಚೌಕಟ್ಟಿನ ಹೊರಗೆ ಒಂದು ಸಮಾನಾಂತರ ವ್ಯವಸ್ಥೆ ಸೃಷ್ಟಿಸುತ್ತದೆ.

14 ನೇ ಮತ್ತು 15 ನೇ ಹಣಕಾಸು ಆಯೋಗಗಳು ರಾಜ್ಯಗಳ ಪಾಲನ್ನು 41% ಕ್ಕಿಂತ ಹೆಚ್ಚಿಸುವಂತೆ ಒತ್ತಾಯಿಸಿದಾಗ ನಿಖರವಾಗಿ ಅದೇ ಎಚ್ಚರಿಕೆ ನೀಡಿವೆ. ಆ

## ಕ್ರೀಡೆಗಳು ಶಿಸ್ತು, ಒಗ್ಗಟ್ಟು,ಆತ್ಮವಿಶ್ವಾಸ ಹೆಚ್ಚಿಸಲು ಸಹಕಾರಿ : ನ್ಯಾ. ರಾಜೇಶ್ವರಿ

**ಚಿಕ್ಕಮಗಳೂರು:** ದೇಶವಾಸಿಗಳ ರಕ್ಷಣೆ ಹಾಗೂ ಸುರಕ್ಷತೆಗೆ ಸದಾ ಸಮಯ ಮೀಸಲಿಡುವ ಪೊಲೀಸ್ ಸಿಬ್ಬಂದಿಗೆ ಕ್ರೀಡಾಕೂಟಗಳು ಶಿಸ್ತು, ಸಂಯಮ, ಒಗ್ಗಟ್ಟು, ಆತ್ಮವಿಶ್ವಾಸವನ್ನು ಹೆಚ್ಚಿಸಲು ಸಹಕಾರಿಯಾಗಿದೆ ಎಂದು ಜಿಲ್ಲಾ ಪ್ರಧಾನ ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್ ಹೆಗ್ಡೆ ತಿಳಿಸಿದರು.

ಅವರು ಇಂದು ರಾಮನಹಳ್ಳಿಯ ಜಿಲ್ಲಾ ಸಶಸ್ತ್ರ ಮೀಸಲು ಪಡೆ ಆಟದ ಮೈದಾನದಲ್ಲಿ ಜಿಲ್ಲಾ ಪೊಲೀಸ್ ಇಲಾಖೆ ಏರ್ಪಡಿಸಿದ್ದ ವಾರ್ಷಿಕ ಜಿಲ್ಲಾಮಟ್ಟದ ಪೊಲೀಸ್ ಕ್ರೀಡಾಕೂಟವನ್ನು ಪಾರಿವಾಳ, ತ್ರಿವರ್ಣ ಬಲೂನ್ ಹಾರಿಬಿಡುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಒತ್ತಡದ ಕರ್ತವ್ಯದ ಜೊತೆಗೆ ಸಮಾಜದ ರಕ್ಷಣೆ ಮಾಡುವಲ್ಲಿ ಪೊಲೀಸರ ಪಾತ್ರ ಬಹಳ ಮಹತ್ವ ದ್ದಾಗಿದೆ. ಕ್ರೀಡೆಗಳಲ್ಲಿ ಭಾಗವಹಿ ಸುವುದರಿಂದ ಶಿಸ್ತು, ಅತ್ಮಸ್ಥೈರ್ಯ ತುಂಬುತ್ತದೆ ಹಾಗೂ ದೇಹ ಮಾನಸಿಕ ಸದೃಢಗೊಳ್ಳುತ್ತದೆ ಎಂದರು.

ಕ್ರೀಡೆಗಳಲ್ಲಿ ಸೋಲು-ಗೆಲುವು ಸಹಜ, ಕ್ರೀಡಾಕೂಟಗಳಲ್ಲಿ ಸ್ಪರ್ಧಾ ಮನೋಭಾವದಿಂದ ಭಾಗವಹಿಸಿ ದಾಗ ಮಾತ್ರ ಸಮಚಿತ್ತದೊಂದಿಗೆ ಸಮಾನತೆ, ಗೌರವ ಭಾವನೆ ಬೆಳೆಯುತ್ತದೆ



ಎಂದು ಸಲಹೆ ನೀಡಿದರು.

ಸಮಾಜದ ಭದ್ರತೆಗಾಗಿ ಸೇವಾ ಕರ್ತವ್ಯನಿರತ ಪೊಲೀಸರು ಮಾನಸಿಕ ಒತ್ತಡಗಳ ನಿವಾರಣೆಗೆ ಕ್ರೀಡೆಗಳಲ್ಲಿ ಭಾಗವಹಿಸುವುದು ಅಗತ್ಯ ಎಂದ ಅವರು, ಕ್ರೀಡೆಯಿಂದ ಒತ್ತಡಗಳು ನಿವಾರಣೆಯಾಗುತ್ತವೆ ಎಂದು ಹೇಳಿದರು. ಕ್ರೀಡಾಕೂಟಕ್ಕೆ ಹೆಚ್ಚಿನ ಮಹತ್ವ ಇದ್ದು, ನನಗೂ ಶಾಲಾ-ಕಾಲೇಜುಗಳಲ್ಲಿ ವ್ಯಾಸಂಗ ಮಾಡುವಾಗ ಕ್ರೀಡೆಗಳಲ್ಲಿ ಭಾಗವಹಿಸಿ ಬಹುಮಾನ ಪಡೆದುಕೊಂಡಿದ್ದೆ ಎಂದು ಸ್ಮರಿಸಿದ ಅವರು, ಇತ್ತೀಚೆಗೆ ಕೆಲಸದ ಒತ್ತಡದಿಂದಾಗಿ ಕ್ರೀಡಾಕೂಟದಲ್ಲಿ ಭಾಗವಹಿಸಲು ಸಾಧ್ಯವಾಗುತ್ತಿಲ್ಲ ಎಂದು ವಿಷಾಧಿಸಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಪೊಲೀಸ್ ಮುಖ್ಯಾಧಿಕಾರಿ ಡಾ. ವಿಕ್ರಮ ಅಮಟೆ ಮಾತನಾಡಿ, ಪೊಲೀಸರು ಒಂದು ತಂಡವಾಗಿ ಎಚ್ಚರಿಕೆಯಿಂದ ಸಾರ್ವಜನಿಕರ ರಕ್ಷಣೆಗೆ ಮುಂದಾಗಬೇಕು, ಜಿಲ್ಲೆಯಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಪೊಲೀಸರ ಕರ್ತವ್ಯ ಇರಬೇಕು ಎಂಬ ಉದ್ದೇಶದಿಂದ ಈ ಕ್ರೀಡಾಕೂಟವನ್ನು ಆಯೋಜನೆ ಮಾಡಿದ್ದೇವೆ ಎಂದರು.

ಕ್ರೀಡಾಕೂಟದಲ್ಲಿ ಅಧಿಕಾರಿಗಳು ಪೇದೆ ಎಂಬ ಬೇಧ ಭಾವವಿಲ್ಲದೆ ಎಲ್ಲರೂ ಸಮಾನಾಗಿ ತಾರತಮ್ಯವಿಲ್ಲದೆ ಕ್ರೀಡಾ ಮನೋಭಾವದಿಂದ ಭಾಗವಹಿಸುವ ಮೂಲಕ ಈ ಕ್ರೀಡಾಕೂಟ ಯಶಸ್ವಿಯಾಗಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ನಗರಸಭಾಧ್ಯಕ್ಷೆ ಶೀಲಾದಿನೇಶ್, ಉಪಾಧ್ಯಕ್ಷೆ ಲಲಿತಾನಾಯ್ಕ್, ಹಿರಿಯ ಕ್ರೀಡಾಪಟು ನರೇಂದ್ರ ಪೈ ಮತ್ತಿತರರು ಉಪಸ್ಥಿತರಿದ್ದರು. ವೈಯಕ್ತಿಕ ಚಾಂಪಿಯನ್ ಆದ ಪ್ರಸನ್ನ.ಜಿ.ಕೆ ಅವರು ಕ್ರೀಡಾ ಜ್ಯೋತಿಯನ್ನು ಅತಿಥಿಗಳ ಬಳಿಗೆ ತಂದರು.

## ಭಾಷಣದಿಂದ ಧರ್ಮ ಉಳಿಯಲ್ಲ, ಆಚರಣೆಯಿಂದ ಧರ್ಮ ಉಳಿಯಲು ಸಾಧ್ಯ

**ಹಾವೇರಿ:** ಭಾಷಣದಿಂದ ಧರ್ಮ ಉಳಿಯಲ್ಲ, ಆಚರಣೆಯಿಂದ ಧರ್ಮ ಉಳಿಯಲು ಸಾಧ್ಯ. ಮಹಿಳೆಯರು ತಮ್ಮ ಸಂತಾನ ಹಾಗೂ ಪರಿವಾರದ ರಕ್ಷಣೆ ಮಾಡುವಂತೆ ಧರ್ಮದ ರಕ್ಷಣೆ ಹಾಗೂ ಕಾಳಜಿ ವಹಿಸಬೇಕು. ಎಂದು ಚರ್ಯಾಶಿರೋಮಣಿ ಮುನಿಶ್ರೀ 108 ವಿದಿತಸಾಗರ ಮಹಾರಾಜರು ನುಡಿದರು.

ನಗರದ ರಜನಿ ಸಭಾಂಗಣದಲ್ಲಿ ಬೃಹತ್ ಸಿದ್ಧಚಕ್ರ ಮಹಾಮಂಡಲ ವಿಧಾನ ಮಹೋತ್ಸವದ ಮೂರನೇ ದಿನವಾದ ರವಿವಾರ ಜರುಗಿದ ಜೈನ ಧಾರ್ಮಿಕ ಸಮಾವೇಶದ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಮೊದಲು ಭಾರತ ದೇಶದಾದ್ಯಂತ ಜೈನರು ಇದ್ದರು. ಮೂರರಿಂದ ನಾಲ್ಕು ಕಿ.ಮೀ.ಗೆ ಒಂದು ಜೈನ ಮಂದಿರಗಳು ಇರುತ್ತಿದ್ದವು. ಇಂದು ಧರ್ಮದ ಪಾಲನೆ ಇಲ್ಲದ ಕಾರಣ ಜೈನ ಧರ್ಮ ನಶಿಸುತ್ತಿದೆ. ಮೊದಲು ನಮ್ಮ ಮಕ್ಕಳಿಗೆ ಧರ್ಮದ ಅರಿವು ಮೂಡಿಸಬೇಕು.



ಎಲ್ಲರೂ ಸಂಘಟಿತರಾಗಿ ಜ್ಞಾನದ ಅರಿವು ಮೂಡಿಸಬೇಕು. ಎಲ್ಲರೂ ಒಗ್ಗಟ್ಟಾಗಿ ಧರ್ಮದ ಕೆಲಸ ಮಾಡಿದಾಗ ಸಮಾಜ, ಧರ್ಮ ಉಳಿಯಬಹುದು ಎಂದರು.


ಯುವ ಸಮ್ಮೇಳನ, ಮಹಿಳಾ ಸಮ್ಮೇಳನ ಹೀಗೆ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಎಲ್ಲರಿಗೂ ಧರ್ಮದ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ಎಲ್ಲರೂ ಈ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಧರ್ಮದ ಲಾಭ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.ಶಾಸಕರು ಹಾಗೂ ವಿಧಾನಸಭೆ ಉಪಾಧ್ಯಕ್ಷ ರುದ್ರಪ್ಪ ಲಮಾಣಿ ಅವರು ಮಾತನಾಡಿ, ಪ್ರಪಂಚದಲ್ಲೇ ಜೈನ ಧರ್ಮ ಶ್ರೇಷ್ಠವಾಗಿದೆ. 'ಜೀವಿಸು ಜೀವಿಸಲು ಬಿಡು' ಎಂಬ ತತ್ವವನ್ನು ಅರಿತುಕೊಂಡರೆ ಸಾಕು. ನಾವು ಬರುವಾಗ ಏನು ತರಲ್ಲ, ಹೋಗುವಾಗ ಏನು ತೆಗೆದುಕೊಂಡು ಹೋಗಲ್ಲ. ಇದನ್ನು ಜೈನ ಧರ್ಮ ಅರ್ಥಮಾಡಿಸುತ್ತದೆ ಎಂದು ಹೇಳಿದರು.

ನಾನು ಮುಜರಾಯಿ ಸಚಿವನಾಗಿದ್ದಾಗ ಶ್ರವಣಬೆಳಗೊಳದ ಭಗವಾನ ಗೊಮ್ಮಟೇಶ್ವರ ಮಸ್ತಕಾಭಿಷೇಕ ಜರುಗಿತು. ನಾನು ಭಗವಂತರಿಗೆ ಅಭಿಷೇಕ ಮಾಡಿದ್ದು ನನ್ನ ಸೌಭಾಗ್ಯ. ಇದನ್ನು ಜೀವನದಲ್ಲಿ ಮರೆಯಲ್ಲ. ಹಾವೇರಿಯಲ್ಲಿ ರೂ. ಒಂದು ಕೋಟಿ ವೆಚ್ಚದಲ್ಲಿ ಜೈನ ಸಮುದಾಯ ಭವನಕ್ಕೆ ಅಡಿಗಲ್ಲು ಹಾಕಲಾಗಿದೆ. ಹೆಚ್ಚಿನ ಅನುದಾನದ ಅವಶ್ಯಕತೆ ಇದ್ದಲ್ಲಿ ಅದನ್ನು ಮಂಜೂರು ಮಾಡಲಾಗುವುದು ಎಂದು ಭರವಸೆ ನೀಡಿದರು.

ಉದ್ಘಾಟನೆ ನೆರವೇರಿಸಿದ ಜಿ.ಪಂ.ಮಾಜಿ ಅಧ್ಯಕ್ಷ ಕೊಟ್ರೇಶಪ್ಪ ಬಸೇಗಣ್ಣಿ ಅವರು ಮಾತನಾಡಿ, ಆರಾಧನೆಯಲ್ಲಿ ಪ್ರತಿ ದಿನ ಒಂದು ಸಮಾವೇಶ ಹಮ್ಮಿಕೊಂಡಿದ್ದು ಶ್ಲಾಘನೀಯವಾಗಿದೆ. ಜೈನ ಧರ್ಮದವರ ಶಿಸ್ತು ಮತ್ತು ಸಂಘಟನೆ ಇತರರಿಗೆ ಮಾದರಿಯಾಗಿದೆ. ಜೈನ ಸಮುದಾಯ ಭವನ ನಿರ್ಮಾಣಕ್ಕೆ ಅಗತ್ಯ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

## ಸಿದ್ದುಗೆ ಗೌರವವಿದ್ದರೆ ರಾಜಕೀಯ ಬಿಡಲಿ: ಆರ್.ಅಶೋಕ್ ಹೇಳಿಕೆ

**ಬೆಂಗಳೂರು:** ವಿಧಾನ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಅವರಿಗೆ



ಕಾಮನ್ ಸೆನ್ಸ್ ಇಲ್ಲ ಎಂದು ಶಾಸಕ ಬಾಲಕೃಷ್ಣ ಹೇಳಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಗೌರವವಿದ್ದರೆ ರಾಜಕೀಯ ಬಿಟ್ಟು ಮನೆಗೆ ಹೋಗಲಿ ಎಂದು ವಿಧಾನಸಭೆ ವಿರೋದ ಪಕ್ಷದ ನಾಯಕ ಆರ್. ಅಶೋಕ ಹೇಳಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಪುತ್ರನಿಗೆ ಈ ರೀತಿ ಟೀಕೆ ಮಾಡುತ್ತಾರೆ ಅಂದರೆ ಹೇಗೆ. ಸಿದ್ದರಾಮಯ್ಯ ಗೌರವಯುತವಾಗಿ ರಾಜೀನಾಮೆ ಕೊಟ್ಟು ಹೋಗಲಿ ಎಂದಿದ್ದಾರೆ

ಈ ಕುರಿತು ಮಾಹಿತಿ ಹಂಚಿಕೊಂಡಿರುವ ಅವರು ನಾಯಕತ್ವ ಬಗ್ಗೆ ಮಾತನಾಡಲು ಕಾಂಗ್ರೆಸ್ ನಾಯಕರು ದೆಹಲಿಗೆ ಹೋಗಿದ್ದು ಸುಮ್ಮನೆ ನೆಪ ಮಾತ್ರಕ್ಕೆ ವೋಟ್ ಚೋರಿ ಅಭಿಯಾನಕ್ಕೆ ಹೋಗಿದ್ದಾರೆ. ಮುಖ್ಯಮಂತ್ರಿ ಸ್ಥಾನದಿಂದ ಸಿದ್ದರಾಮಯ್ಯ ಅವರನ್ನು ಕೆಳಗಿಳಿಸಲು ಹೋಗಿರುವುದು ಎಂದು ತಿಳಿಸಿದ್ದಾರೆ.

## ಮತಗಳ್ಳತನ: ಕೇಂದ್ರ ಸರ್ಕಾರ,ಚುನಾವಣಾ ಆಯೋಗದ ವಿರುದ್ಧ ಕಾಂಗ್ರೆಸ್ ಸಮರ

**ನವದೆಹಲಿ:** ಕರ್ನಾಟಕ ಸೇರಿದಂತೆ ದೇಶದ ಹಲವು ರಾಜ್ಯಗಳಲ್ಲಿ ನಡೆದಿರುವ ಮತಗಳ್ಳತನ ವಿರುದ್ಧ ಹೋರಾಟ ನಡೆಸುತ್ತಿರುವ ಪ್ರತಿಪಕ್ಷ ಕಾಂಗ್ರೆಸ್ ಇಂದು ದೆಹಲಿಯಲ್ಲಿ ಕೇಂದ್ರ ಸರ್ಕಾರ ಹಾಗೂ ಕೇಂದ್ರ ಚುನಾವಣಾ ಆಯೋಗದ ವಿರುದ್ಧ ಸಮರ ಸಾರುವ ಮೂಲಕ ಬೃಹತ್ ಪ್ರತಿಭಟನೆ ನಡೆಸಿ, ಶಕ್ತಿ ಪ್ರದರ್ಶನ ನಡೆಸಿತು.

ಪ್ರತಿಭಟನೆಗೂ ಮುನ್ನ ಕಾಂಗ್ರೆಸ್ ಮುಖಂಡರು ನವದೆಹಲಿಯ ಇಂದಿರಾ ಕಾಂಗ್ರೆಸ್ ಭವನಕ್ಕೆ ತೆರಳಿದ್ ಬಳಿಕ ಬಸ್‌ಗಳಲ್ಲಿ, ದೆಹಲಿಯ ರಾಮಲೀಲಾ ಮೈದಾನಕ್ಕೆ ಆಗಮಿಸಿದರು. ಈ ವೇಳೆ ಕಾರ್ಯಕರ್ತರು ಪಕ್ಷ ನೀಡಿದ್ದ ಟೀ ಶರ್ಟ್‌ಗಳನ್ನು ಧರಿಸಿ ಕೇಂದ್ರ ಚುನಾವಣಾ ಆಯೋಗ ಮತ್ತು ಎನ್‌ಡಿಎ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತ ಪಡಿಸಿದರು.

ರಾಮಲೀಲ ಮೈದಾನದಲ್ಲಿ ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಪ್ರಿಯಾಂಕ ಗಾಂಧಿ ವಾದ್ರಾ ಸೇರಿದಂತೆ ಇತರ ನಾಯಕರ ಕಟೌಟ್‌ಗಳು ಕಾಂಗ್ರೆಸ್ ಧ್ವಜಗಳು ರಾರಾಜಿಸಿದವು.

ದೆಹಲಿಯ ರಾಮಲೀಲ ಮೈದಾನದಲ್ಲಿ ನಡೆದ ಈ ಪ್ರತಿಭಟನೆಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ, ಪ್ರಿಯಾಂಕ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಇತರ ರಾಜ್ಯಗಳ ಮುಖಂಡರು ಪಾಲ್ಗೊಂಡು ಮತಗಳ್ಳತನದ ವಿರುದ್ಧ ಅಭಿಯಾನ ನಡೆಸಿದರು.

ಈ ರಾಹುಲ್ ಗಾಂಧಿ ನೇತೃತ್ವದಲ್ಲಿ ನಡೆದ ಈ ಬೃಹತ್ ಪ್ರತಿಭಟನೆಯಲ್ಲಿ ಮತದಾರರ ಹಕ್ಕಿನ ರಕ್ಷಣೆಗಾಗಿ ಮತ್ತು ಜನರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಈ ಹೋರಾಟ ನಡೆಸಲಾಯಿತು. ಚಳಿಗಾಲದ ಸಂಸತ್ ಅಧಿವೇಶನದಲ್ಲಿ ಮತಪಟ್ಟಿ ಪರಿಷ್ಕರಣೆ ಕುರಿತು, ಪ್ರತಿಪಕ್ಷಗಳು ಹಾಗೂ ಆಡಳಿತ ರೂಢ ಹಾಗೂ ಎನ್‌ಡಿಎ ಆರೋಪ-ಪ್ರತ್ಯಾರೋಪಗಳು ನಡೆದ ಬೆನ್ನಲ್ಲೇ ಕಾಂಗ್ರೆಸ್ ಮತಗಳ್ಳತನದ ವಿರುದ್ಧ ಹೋರಾಟವನ್ನು ತೀವ್ರಗೊಳಿಸಿದೆ.

ಕಾಂಗ್ರೆಸ್ ನಾಯಕ ಭೂಪೇಶ್ ಬಘೇಲ್ ಪ್ರತಿಕ್ರಿಯೆ ನೀಡಿ ಮತಗಳ್ಳತನ ಮಾಡಿ ಅಧಿಕಾರಕ್ಕೆ ಬರಲಾಗಿದೆ.



ಈ ಮತಗಳವು ಖಂಡಿಸಿ ಕಾಂಗ್ರೆಸ್ ಬೃಹತ್ ಪ್ರತಿಭಟನೆ ನಡೆಸಿದೆ ಎಂದು ಹೇಳಿದರು.

ಈ ಹಿಂದೆ ಮತಗಳ್ಳತನದ ವಿರುದ್ಧ ದಾಖಲೆಗಳನ್ನು ಬಿಡುಗಡೆ ಮಾಡಿದ ರಾಹುಲ್ ಗಾಂಧಿ ಬಿಹಾರದಲ್ಲೂ, ಮತಗಳ್ಳತನ ನಡೆದಿದೆ ಎಂದು ಆರೋಪಿಸಿದರು. ಇದರ ಬೆನ್ನಲ್ಲೇ ಕರ್ನಾಟಕದ ಕಲ್ಬುರ್ಗಿ ಜಿಲ್ಲೆಯ ಆಳಂದದಲ್ಲಿ ಮತಗಳ್ಳತನ ನಡೆದಿರುವ ಬಗ್ಗೆ, ವಿಶೇಷ ತನಿಖಾ ತಂಡ ಮಾಜಿ ಶಾಸಕ ಸುಭಾಶ್ ಗುತ್ತೇದಾರ್ ಹಾಗೂ ಪುತ್ರ ಹರ್ಷಾನಂದ ಗುತ್ತೇದಾರ್ ವಿರುದ್ಧ ಎಸ್‌ಐಟಿ ಆರೋಪಪಟ್ಟಿ ದಾಖಲಿಸಿದೆ.

ಕಾಂಗ್ರೆಸ್ ಮುಖಂಡ ವೇಣುಗೋಪಾಲ್ ಮತ ಚೋರಿ ನಡೆದಿರುವ ಬಗ್ಗೆ ಕೇಂದ್ರ ಚುನಾವಣಾ ಆಯೋಗವನ್ನು ತೀವ್ರವಾಗಿ ತರಾಟೆಗೆ ತಗೆದುಕೊಂಡಿದ್ದಾರೆ. ಕೇವಲ ಬಿಹಾರದಲ್ಲಿ ಮಾತ್ರವಲ್ಲ ದೇಶದ ಹಲವೆಡೆ ಮತಗಳ್ಳತನ ನಡೆದಿದೆ. ಈ ಕೃತ್ಯದಲ್ಲಿ ಕೇಂದ್ರ ಸರ್ಕಾರ ಚುನಾವಣಾ ಆಯೋಗ ಶ್ಯಾಮೀಲಾಗಿದೆ ಎಂದು ಆರೋಪಿಸಿದ್ದರು.

ಮತಗಳ್ಳತನ ಹರಿಯಾಣ, ಬಿಹಾರದ, ಮಹಾರಾಷ್ಟ್ರದಲ್ಲೂ ನಡೆದಿದೆ, ಪ್ರಜಾಪ್ರಭುತ್ವ ಉಳಿಸುವ ದೃಷ್ಟಿಯಿಂದ ಕಾಂಗ್ರೆಸ್ ಈ ಪ್ರತಿಭಟನೆ ನಡೆಸಿದೆ. ಮತಗಳ್ಳತನ ಕುರಿತಂತೆ ಕಾಂಗ್ರೆಸ್ ಮಾಡುತ್ತಿರುವ ಆರೋಪಗಳನ್ನು ಕೇಂದ್ರ ಚುನಾವಣಾ ಆಯೋಗ ಸ್ಪಷ್ಟವಾಗಿ ತಳ್ಳಿಹಾಕಿದೆ.

ಮತಗಳ್ಳತನ ಆರೋಪದ ನಡುವೆಯೂ ಇತ್ತೀಚೆಗೆ ಬಿಹಾರದಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟ ಪ್ರಚಂಡ ಜಯಭೇರಿ ಬಾರಿಸಿತ್ತು. ಪ್ರತಿಪಕ್ಷ ಕಾಂಗ್ರೆಸ್ ಎರಡಂಕಿ ದಾಟಲು ವಿಫಲವಾಗಿತ್ತು.

**ರಾಜಕೀಯ ಪ್ರೇರಿತ ಹೋರಾಟವಲ್ಲ: ಡಿಕೆಶಿ**

ದೇಶದ ಹಲವು ಕಡೆ ನಡೆದಿರುವ ಮತಗಳ್ಳತನ ವಿರುದ್ಧ ಪಕ್ಷ ಕೈಗೊಂಡಿರುವ ಹೋರಾಟದಲ್ಲಿ ರಾಜಕೀಯವಿಲ್ಲ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸ್ಪಷ್ಟಪಡಿಸಿದರು.

ದೆಹಲಿಯಲ್ಲಿಂದು ಮತಚೋರಿ ಹೋರಾಟದ ಪ್ರತಿಭಟನೆಯಲ್ಲಿ ಪಾಲ್ಗೊಳ್ಳುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮತಚೋರಿ ಕುತಿತು ರಾಹುಲ್ ಗಾಂಧಿ ನೇತೃತ್ವದಲ್ಲಿ ಮೊದಲ ಬಾರಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದ ಬಳಿಕ ಈಗ ದೆಹಲಿಯ ರಾಮಲೀಲ ಮೈದಾನದಲ್ಲಿ ಮತಚೋರಿ ವಿರುದ್ಧ ಬೃಹತ್ ಆಂಧೋಲನ ನಡೆಸಿದ್ದೇವೆ ಎಂದರು.

ದೇಶದ 160 ಕೋಟಿ ಮತದಾರರ ಸಂವಿಧಾನದ ಹಕ್ಕನ್ನು ಉಳಿಸುವ ನಿಟ್ಟಿನಲ್ಲಿ ಕಾಂಗ್ರೆಸ್ ಹೋರಾಟ ಮಾಡುತ್ತಿದೆ. ಈ ಹೋರಾಟದಲ್ಲಿ ರಾಜಕೀಯವಿಲ್ಲ, ಮತಗಳ್ಳತನ ನಡೆದಿರುವ ಹಿನ್ನೆಲೆಯಲ್ಲಿ ದೇಶದಲ್ಲಿ ಮುಕ್ತ ಹಾಗೂ ನ್ಯಾಯಸಮ್ಮತ ಮತದಾನ ನಡೆಯುವುದು ಸಾಧ್ಯವಿಲ್ಲ ಎಂದು ಹೇಳಿದರು.

ಮತಗಳ್ಳತನದ ಬಗ್ಗೆ ಕೇಂದ್ರ ಚುನಾವಣಾ ಆಯೋಗ ಇದುವರೆಗೂ ಕ್ರಮ ಕೈಗೊಂಡಿಲ್ಲ, ಆಯೋಗದ ಜೊತೆ ಕೇಂದ್ರ ಸರ್ಕಾರ ಶಾಮೀಲಾಗಿ ಸಂವಿಧಾನದ ಅಧಿಕಾರವನ್ನು ದುರುಪಯೋಗ ಮಾಡಿಕೊಳ್ಳುತ್ತಿದೆ ಎಂದು ಅವರು ಆರೋಪಿಸಿದರು..

# ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ದೊಡ್ಡ ಆಸ್ತಿಯೆಂದರೆ ನಿಮ್ಮ ಹಾಸ್ಯಪ್ರಜ್ಞೆಯಾಗಿದೆ ಇದನ್ನು ನಿಮ್ಮ ಅನಾರೋಗ್ಯ ಗುಣಪಡಿಸಲು ಬಳಸಲು ಪ್ರಯತ್ನಿಸಿ. ನಕ್ಷತ್ರಪುಂಜಗಳ ಚಾಲನೆ ನಿಮಗಾಗಿ ಉತ್ತಮವಾಗಿಲ್ಲ. ಇಂದಿನ ದಿನ ನೀವು ನಿಮ್ಮ ಹಣವನ್ನು ತುಂಬಾ ಸುರಕ್ಷಿತವಾಗಿಡಬೇಕು. ನಿಮ್ಮ ಕುಟುಂಬದ ಕಲ್ಯಾಣಕ್ಕಾಗಿ ಕೆಲಸ ಮಾಡಿ. ನಿಮ್ಮ ಕಾರ್ಯಗಳು ದುರಾಶೆಯಿಂದಲ್ಲದೇ ಪ್ರೀತಿ ಮತ್ತು ಸಕಾರಾತ್ಮಕ ದೃಷ್ಟಿಯಿಂದ ನಡೆಯಬೇಕು.

### ವೃಷಭ ರಾಶಿ

ನಿಮ್ಮನ್ನು ನೀವೇ ನೋಡಿಕೊಳ್ಳುವ ಬಯಕೆಗೆ ಇತರರ ಅಗತ್ಯಗಳು ಕಡಿವಾಣ ಹಾಕುತ್ತವೆ. ನಿಮ್ಮ ಭಾವನೆಗಳನ್ನು ತಡೆಹಿಡಿಯಬೇಡಿ ಹಾಗೂ ವಿಶ್ರಾಂತಿ ಪಡೆಯುವ ಸಲುವಾಗಿ ನೀವು ಇಷ್ಟಪಡುವುದನ್ನೇನಾದರೂ ಮಾಡಿ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು.

### ಮಿಥುನ ರಾಶಿ

ಒಂದು ಲಾಭಕರ ದಿನ ಮತ್ತು ನೀವು ಧೀರ್ಘಕಾಲದ ಅನಾರೋಗ್ಯಕ್ಕೆ ಪರಿಹಾರ ಹುಡುಕಲು ಸಾಧ್ಯವಾಗಬಹುದು. ಇಂದು ನೀವು ನಿಮ್ಮ ಮನೆಯ ಸದಸ್ಯರನ್ನು ಎಲ್ಲಿಗಾದರೂ ಸುತ್ತಾಡಲು ಕರೆದುಕೊಂಡು ಹೋಗಬಹುದು ಮತ್ತು ನಿಮ್ಮ ಸಾಕಷ್ಟು ಹಣವು ಖರ್ಚಾಗಬಹುದು ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ.

### ಕರ್ಕ ರಾಶಿ

ನಿಮ್ಮ ಅಸೂಯೆ ವರ್ತನೆ ನಿಮ್ಮನ್ನು ದುಃಖಿಗಳಾಗಿಯೂ ಮತ್ತು ಖಿನ್ನರಾಗಿಯೂ ಮಾಡಬಹುದು. ಆದರೆ ಇದು ಒಂದು ಸ್ವಯಂಕೃತ ಗಾಯವಾಗಿರುವುದರಿಂದ ಇದರ ಬಗ್ಗೆ ಪ್ರಲಾಪಿಸುವ ಅಗತ್ಯವಿಲ್ಲ. ಇತರರ ಸಂತೋಷ ಮತ್ತು ಅತೃಪ್ತಿಯನ್ನು ಹಂಚಿಕೊಳ್ಳುವ ಮೂಲಕ ಇದನ್ನು ತೊಡೆದುಹಾಕಲು ಪಣತೊಡಿ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು.

### ಸಿಂಹ ರಾಶಿ

ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ನೀವು ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ. ನಿಮ್ಮ ಮನೆಯಲ್ಲಿ ಸಾಮರಸ್ಯ ತರಲು ನಿಕಟ ಸಹಕಾರದೊಂದಿಗೆ ಕೆಲಸ ಮಾಡಬೇಕು. ನೀವು ಸಂತೋಷ ನೀಡುವ ಮೂಲಕ ಮತ್ತು ಹಿಂದಿನ ತಪ್ಪುಗಳನ್ನು ಮನ್ನಿಸುವ ಮೂಲಕ ನಿಮ್ಮ ಜೀವನವನ್ನು ಸಮರ್ಥಗೊಳಿಸಲಿದ್ದೀರಿ.

### ಕನ್ಯಾ ರಾಶಿ

ಆರೋಗ್ಯದ ಬಗ್ಗೆ ಸ್ವಲ್ಪ ಕಾಳಜಿ ವಹಿಸಬೇಕು. ಬುದ್ಧಿವಂತ ಹೂಡಿಕೆಗಳು ಮಾತ್ರ ಆದಾಯಗಳನ್ನು ನೀಡುತ್ತವೆ–ಆದ್ದರಿಂದ ನೀವು ಕಷ್ಟಪಟ್ಟುಗಳಿಸಿದ ನಿಮ್ಮ ಹಣವನ್ನು ಎಲ್ಲಿ ಹೂಡಬಯಸುತ್ತೀರೆನ್ನುವಲ್ಲಿ ಖಚಿತತೆಯಿರಲಿ. ಇಂದು ಹಾಜರಾಗುವ ಸಮಾರಂಭದಲ್ಲಿ ಹೊಸ ಸ್ನೇಹ ಅಭಿವೃದ್ಧಿಯಾಗುತ್ತದೆ. ಸ್ಪಷ್ಟವಾಗಿ ಅರ್ಥಮಾಡಿಕೊಳ್ಳುವ ಮೂಲಕ ಮಾತ್ರ ನೀವು ನಿಮ್ಮ ಪತ್ನಿಗೆ ಭಾವನಾತ್ಮಕ ಬೆಂಬಲ ನೀಡಬಹುದು. ನಿಮ್ಮ ರೆಸ್ಯೂಮ್ ಕಳುಹಿಸಲು ಅಥವಾ ಸಂದರ್ಶನಕ್ಕೆ ಹಾಜರಾಗಲು ಒಳ್ಳೆಯ ದಿನ.

### ತುಲಾ ರಾಶಿ

ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ಊಹೆಗಳು ಲಾಭ ತರುತ್ತವೆ. ಕೆಲವರಿಗೆ ಕುಟುಂಬದಲ್ಲಿ ಒಂದು ಹೊಸ ಆಗಮನ ಸಂಭ್ರಮಾಚರಣೆ ಮತ್ತು ಆನಂದದ ಕ್ಷಣಗಳನ್ನು ತೆರೆದಿಡುತ್ತದೆ. ಸಮಯ, ಕೆಲಸ, ಹಣ, ಸ್ನೇಹಿತರು, ಕುಟುಂಬ, ಬಂಧುಗಳು; ಎಲ್ಲವೂ ಒಂದು ಕಡೆ ಮತ್ತು ನಿಮ್ಮ ಸಂಗಾತಿಯ ಜೊತೆ ನೀವು ಇನ್ನೊಂದು ಕಡೆಗಿರುತ್ತೀರಿ.

### ವೃಶ್ಚಿಕ ರಾಶಿ

ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ಕೆಲವು ಪ್ರಮುಖ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತದೆ ಹಾಗೂ ಅವು ನಿಮಗೆ ಹೊಸ ಆರ್ಥಿಕ ಲಾಭ ತರುತ್ತವೆ. ಗುಂಪಿನಲ್ಲಿದ್ದಾಗ ನೀವೇನು ಹೇಳುತ್ತೀರೆಂದು ಎಚ್ಚರ ವಹಿಸಿ–ನಿಮ್ಮ ಹಠಾತ್ ಟೀಕೆಗಳಿಗೆ ನೀವು ತೀವ್ರವಾಗಿ ಟೀಕೆ ಎದುರಿಸಬೇಕಾಗಬಹುದು.

### ಧನು ರಾಶಿ

ಸ್ನೇಹಿತರಿಂದ ಒಂದು ವಿಶೇಷ ಅಭಿನಂದನೆ ಸಂತೋಷದ ಮೂಲವಾಗುತ್ತದೆ. ಇದೇಕೆಂದರೆ ನೀವು ನಿಮ್ಮ ಜೀವನವನ್ನು ಮರಗಳಂತೆ ಮಾಡಿಕೊಳ್ಳುತ್ತೀರಿ–ಅವುಗಳು ತಾವು ಸೂರ್ಯನಡಿ ನಿಂತು ಶಾಖದ ಬೇಗೆ ತಡೆದುಕೊಂಡು ಇತರರಿಗೆ ನೆರಳು ನೀಡುತ್ತವೆ. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು.

### ಮಕರ ರಾಶಿ

ನಿಮ್ಮ ಒರಟು ವರ್ತನೆ ನಿಮ್ಮ ಸ್ನೇಹಿತರಿಗೆ ಸ್ವಲ್ಪ ಸಮಸ್ಯೆ ಉಂಟುಮಾಡಬಹುದು. ಯಶಸ್ಸಿಗೆ ಇಂದಿನ ಸೂತ್ರವೆಂದರೆ ನಾವೀನ್ಯತೆಯಿರುವ ಮತ್ತು ಉತ್ತಮ ಅನುಭವ ಹೊಂದಿರುವ ಜನರ ಸಲಹೆಯಂತೆ ನಿಮ್ಮ ಹಣವನ್ನು ಹೂಡುವುದಾಗಿದೆ. ಮಕ್ಕಳಿಗೆ ಅವರ ಮನೆಗೆಲಸ ಪೂರ್ಣಗೊಳಿಸಲು ಸಹಾಯ ಮಾಡುವ ಸಮಯ. ಈ ದಿನ ನಿಮಗೆ ಗುಲಾಬಿಗಳ ಸುಗಂಧವನ್ನು ತರುತ್ತದೆ. ಪ್ರೀತಿಯ ಭಾವಪರವಶತೆಯನ್ನು ಆನಂದಿಸಿ.

### ಕುಂಭ ರಾಶಿ

ತುಂಬಾ ಚಿಂತೆ ಮತ್ತು ಒತ್ತಡ ರಕ್ತದೊತ್ತಡವನ್ನು ಉಂಟುಮಾಡಬಹುದು. ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ, ಇಂದು ನೀವು ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು. ಎಲ್ಲರನ್ನೂ ನಿಮ್ಮ ದೊಡ್ಡ ಪಾರ್ಟಿಗೆ ಕರೆಯಿರಿ ನೀವು ಇಂದು ಆ ಹೆಚ್ಚುವರಿ ಚೈತನ್ಯವನ್ನು ಹೊಂದಿರುತ್ತೀರಿ ಹಾಗೂ ಇದು ನಿಮ್ಮನ್ನು ನಿಮ್ಮ ಗುಂಪಿಗಾಗಿ ಸಮಾರಂಭವನ್ನು ಸಂಯೋಜಿಸುವಂತೆ ಮಾಡುತ್ತದೆ.

### ಮೀನ ರಾಶಿ

ನಿಮ್ಮ ತೂಕದ ಮೇಲೆ ಒಂದು ಕಣ್ಣಿಟ್ಟಿರಿ ಮತ್ತು ಅತಿಯಾಗಿ ತಿನ್ನಬೇಡಿ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ಇಂದು ಹಣದ ಬಗ್ಗೆ ಕುಟುಂಬ ಸದಸ್ಯರಲ್ಲಿ ಗೊಂದಲ ಉಂಟಾಗಬಹುದು. ಹಣಕಾಸಿನ ವಿಷಯದ ಬಗ್ಗೆ ನೀವು ಕುಟುಂಬದ ಎಲ್ಲ ಸದಸ್ಯರಿಗೆ ಸ್ಪಷ್ಟವಾಗಿರಲು ಸಲಹೆ ನೀಡಬೇಕು. ಸ್ಪಷ್ಟವಾಗಿ ಅರ್ಥಮಾಡಿಕೊಳ್ಳುವ ಮೂಲಕ ಮಾತ್ರ ನೀವು ನಿಮ್ಮ ಪತ್ನಿಗೆ ಭಾವನಾತ್ಮಕ ಬೆಂಬಲ ನೀಡಬಹುದು.

# ಸುತ್ತೂರು ಜಾತ್ರಾ ಮಹೋತ್ಸವ



**ನ್ಯಾಮತಿ** ಃ ಶ್ರೀ ಮತ್ಸ್ಯೋಸ್ತುರ ಜಗದ್ಗುರು ಶ್ರೀ ವೀರಸಿಂಹಾಸನ ಮಠ, ಸುತ್ತೂರು ಶ್ರೀ ಕ್ಷೇತ್ರದ ಪರಮ ಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ಶಿವಯೋಗಿಗಳವರ ದಿವ್ಯ ಸಾನಿಧ್ಯದಲ್ಲಿ ನಡೆಯಲಿರುವ ಸುತ್ತೂರು ಜಾತ್ರಾ ಮಹೋತ್ಸವದ ಅಂಗವಾಗಿ ಹೊರಟ ಪ್ರಚಾರದ ರಥಯಾತ್ರೆಗೆ ಶನಿವಾರ ನ್ಯಾಮತಿ ಪಟ್ಟಣದಲ್ಲಿ ಭವ್ಯ ಸ್ವಾಗತ ನೀಡಲಾಯಿತು.

ನ್ಯಾಮತಿ ತಾಲೂಕಿನ ಸವಳಂಗ ಗ್ರಾಮದ

ಜನವರಿ 15ರಿಂದ 20ರವರೆಗೆ ನಡೆಯಲಿರುವ ಸುತ್ತೂರು ಜಾತ್ರಾ ಮಹೋತ್ಸ ವದ ಪೂರ್ವಭಾವಿಯಾಗಿ ನ್ಯಾಮತಿ ತಾಲೂಕಿಗೆ ಆಗಮಿಸಿದ ರಥವನ್ನು ಪೂಜೆ, ಜಯಘೋಷಗಳೊಂದಿಗೆ ಸ್ವಾಗತಿಸಲಾಯಿತು. ಈ ಸಂದರ್ಭದಲ್ಲಿ ಭಕ್ತರು ರಥದ ದರ್ಶನ ಪಡೆದು ಭಕ್ತಿಪೂರ್ವಕವಾಗಿ ನಮಿಸಿದರು. ಕೆ.ಜಿ. ನಿಂಗಪ್ಪ ಹೊಳಲೂರು, ನಿವೃತ್ತ ಉಪತಹಸೀಲ್ದಾರ್ ನಾಗರಾಜಪ್ಪ, ಜಿ.ವಿ.ರಾಜೇಂದ್ರ, ಕೆ.ಆರ್.ಗಂಗಾಧರ್, ಶಂಭುಲಿಂಗ, ಮಲ್ಲಿಕಾರ್ಜುನಪ್ಪ ಸೇರಿದಂತೆ ಹಲವಾರು ಗಣ್ಯರು, ಧಾರ್ಮಿಕ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಸುತ್ತೂರು ಜಾತ್ರಾ ಮಹೋತ್ಸವವು ಧಾರ್ಮಿಕ, ಸಾಂಸ್ಕೃತಿಕ ಹಾಗೂ ಸಾಮಾಜಿಕ ಚಟುವಟಿಕೆಗಳ ಸಂಗಮವಾಗಿದ್ದು, ರಾಜ್ಯದ ವಿವಿಧ ಭಾಗಗಳಿಂದ ಲಕ್ಷಾಂತರ ಭಕ್ತರು ಪಾಲ್ಗೊಳ್ಳುವ ಜಾತ್ರೆಯ ಯಶಸ್ಸಿ ಗಾಗಿ ಎಲ್ಲರೂ ಸಹಕರಿಸಬೇಕೆಂದು ನಿವೃತ್ತ ಉಪತಹಸೀಲ್ದಾರ್ ನಾಗರಾಜಪ್ಪ ಮನವಿ ಮಾಡಲಾಯಿತು.

ಸುತ್ತೂರು ಜಾತ್ರಾ ಮಹೋತ್ಸವದ ಪ್ರಚಾರದ ರಥಯಾತ್ರೆಕ್ಕೆ ಶನಿವಾರ ಶಿವಮೊಗ್ಗ ತಾಲೂಕಿನ ಹೊಳಲೂರು , ಹರಮಘಟ್ಟ , ಕೊಮ್ಮನಾಳು ಮಾರ್ಗವಾಗಿ ನ್ಯಾಮತಿ ತಾಲೂಕಿನ ಸವಳಂಗ , ಸುರಹೊನ್ನೆ , ದಾನಿಹಳ್ಳಿ , ಮಾದನಬಾವಿ ಮೂಲಕ ಹೊನ್ನಾಳಿ ಪಟ್ಟಣಕ್ಕೆ ಪೂಜೆ, ಜಯಘೋಷಗಳೊಂದಿಗೆ ಸ್ವಾಗತಿಸಲಾಯಿತು. ಈ ಸಂದರ್ಭದಲ್ಲಿ ಭಕ್ತರು ರಥದ ದರ್ಶನ ಪಡೆದು ಭಕ್ತಿಪೂರ್ವಕವಾಗಿ ನಮಿಸಿದರು.

# ಮೆಕ್ಕಜೋಳ ಖರೀದಿಗೆ ಕೂಡಲೇ ನೊಂದಣಿ ಕೇಂದ್ರ ಪ್ರಾರಂಭಿಸಿ: ಬಿ.ಎಂ.ಸತೀಶ್ ಕೊಳೇನಹಳ್ಳಿ ಒತ್ತಾಯ



**ದಾವಣಗೆರೆ:** ಗದ್ದುಗೆ ಗುದ್ದಾಟದಲ್ಲಿ ನಿರತರಾಗಿರುವ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ರೈತಪರ ಕಾಳಜಿ ಇಲ್ಲ. ಕೇವಲ ನೆಪ ಮಾತ್ರಕ್ಕೆ ಕಾಗದದಲ್ಲಿ ನಿರ್ಣಯಿಸಿ, ವಿಳಂಬ ಧೋರಣೆ ಅನುಸರಿಸಿ, ಪಲಾಯನ ಮಾಡುವ ಸಂಚನ್ನು ಕಾಂಗ್ರೆಸ್ ಸರ್ಕಾರ ನಡೆಸಿದೆ ಎಂದು ಜಿಲ್ಲಾ ರೈತ ಒಕ್ಕೂಟದ ಅಧ್ಯಕ್ಷ ಬಿ.ಎಂ.ಸತೀಶ್ ಕೊಳೇನಹಳ್ಳಿ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾಧಿಕಾರಿ ಟಾಸ್ಕ್ ಫೋರ್ಸ್ ಸಮಿತಿಯ ಸಭೆ ನಡೆಸಿ, 2025-26ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಮೆಕ್ಕೆಜೋಳ ಖರೀದಿಸುವುದಾಗಿ ನಿರ್ಣಯಿಸಿರುತ್ತಾರೆ.

ಆದರೆ 9 ದಿನ ಕಳೆದರೂ ಇನ್ನೂ ಖರೀದಿಗೆ ನೊಂದಣಿ ಪ್ರಾರಂಭವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸಂಸದೆ ಡಾ.ಪ್ರಭಾಮಲ್ಲಿಕಾರ್ಜುನ ಲೋಕಸಭೆಯಲ್ಲಿ ಮಾತನಾಡಿ, ಕರ್ನಾಟಕ ರಾಜ್ಯದಲ್ಲಿ ಬೆಲೆ ಕುಸಿತದಿಂದ ಮೆಕ್ಕೆಜೋಳ ಬೆಳೆದ ರೈತರು ತೀವ್ರ ಆರ್ಥಿಕ ಸಂಕಷ್ಟಕ್ಕೀಡಾಗಿದ್ದಾರೆ. ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಹೆಚ್ಚಿನ ಪ್ರಮಾಣದಲ್ಲಿ ಖರೀದಿ ಕೇಂದ್ರಗಳನ್ನು ತೆರೆದು ಮೆಕ್ಕೆಜೋಳ ಖರೀದಿಸುವ ಮೂಲಕ ರೈತರ ನೆರವಿಗೆ ಧಾವಿಸಬೇಕು ಎಂದು ಕೇಂದ್ರ ಸರ್ಕಾರವನ್ನು ಆಗ್ರಹಿಸುತ್ತಾರೆ.

ಆದರೆ, ರಾಜ್ಯದ ಕಾಂಗ್ರೆಸ್ ಸರ್ಕಾರ ಹೊರಡಿಸಿರುವ ಆದೇಶದಂತೆ ತಮ್ಮದೇ ಡಿಸ್ಟಿಲರಿಯಿಂದ ಮೆಕ್ಕೆಜೋಳ ಖರೀದಿಸುವುದರ ಬಗ್ಗೆ ಚಕಾರವೆತ್ತದೆ ಜಾಣ ಮೌನ ವಹಿಸಿದ್ದಾರೆ. ಇದು ಅವರು ಲೋಕಸಭೆಯಲ್ಲಿ ಆಗ್ರಹಿಸಿರುವುದು ಕೇವಲ ಪ್ರಚಾರಕ್ಕಾಗಿ ಮತ್ತು ಮೆಕ್ಕೆಜೋಳ ಬೆಳೆದ ರೈತರ ಬಗ್ಗೆ ಮೊಸಳೆ ಕಣ್ಣೀರು ಸುರಿಸುವ ಕುತಂತ್ರ ಮಾಡಿದಂತಾಗುತ್ತದೆ ಎಂದು ದೂರಿದರು.

ಎ ಒ ಇ ಎ ೦ ಸಿ ೦ು೦ ಲ್ಲಿ ಲೋಡ್-ಅನ್ ಲೋಡ್ ಮಾಡಲು ಹಮಾಲರ ವ್ಯವಸ್ಥೆ, ತೂಕದ ವ್ಯವಸ್ಥೆ, ಸಂಗ್ರಹಿಸಲು ಗೋದಾಮು, ಪಿಎಸಿಎಸ್ ನಿಂದ ಡಿಸ್ಟಿಲರಿಗೆ ಸಾಗಾಣಿಕೆ ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಕರ್ಯ ಒದಗಿಸಬೇಕು ಮತ್ತು ತಕ್ಷಣ ಖರೀದಿ ಪ್ರಕ್ರಿಯೆ ಪ್ರಾರಂಭಿಸಬೇಕು. ಮೂಲಭೂತ ಸೌಕರ್ಯ ಒದಗಿಸಬೇಕಾದ ಎಪಿಎಂಸಿ ಅಧಿಕಾರಿಗಳು ಇದಕ್ಕೂ ತಮಗೂ ಸಂಬಂಧವಿಲ್ಲದವರಂತೆ ನಡೆದುಕೊಳ್ಳುತ್ತಾರೆ. ಆಡಳಿತಾಧಿಕಾರಿಯಾಗಿರುವ ಜಿಲ್ಲಾಧಿಕಾರಿ ಸೂಕ್ತ ಕ್ರಮವಹಿಸಬೇಕು ಎಂದು ಆಗ್ರಹಿಸಿದರು.ಟಾಸ್ಕ್ ಫೋರ್ಸ್ ಸಮಿತಿಯಲ್ಲಿರುವ ಪ್ರತಿಯೊಬ್ಬ ಅಧಿಕಾರಿಗೆ ಜವಾಬ್ದಾರಿ ನಿಗದಿ ಮಾಡಿ, ಸದರಿ ಖರೀದಿ ಪ್ರಕ್ರಿಯೆ ಯಶಸ್ವಿಗೊಳಿಸಬೇಕು.

ಜಿಲ್ಲಾ ನೋಡಲ್ ಅಧಿಕಾರಿಯಾಗಿರುವ ಅಬಕಾರಿ ಉಪ ಆಯುಕ್ತ ಮತ್ತು ತಾಲ್ಲೂಕು ನೋಡಲ್ ಅಧಿಕಾರಿ ಸಹಾಯಕ ಸಹಕಾರ ನಿಬಂಧಕರು ಇದ್ದು ಇಲ್ಲದಂತೆ ಇದ್ದಾರೆ. ಅವರುಗಳು ಸ್ಥಳದಲ್ಲಿ ಉಪಸ್ಥಿತರಿದ್ದು, ರೈತರಿಗೆ ಅಗತ್ಯ ಸಲಹೆ ಸಹಕಾರ ನೀಡಬೇಕು ಅಗತ್ಯ ಮಾಹಿತಿಯುಳ್ಳ ಕರಪತ್ರಗಳನ್ನು ಮುದ್ರಿಸಿ ಕೃಷಿ, ಪಶು ಸಖಿಯರ ಮೂಲಕ ಎಲ್ಲಾ ಗ್ರಾಮಗಳಲ್ಲಿ ಹಂಚಿ, ರೈತರಲ್ಲಿ ಜಾಗೃತಿ ಮೂಡಿಸಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಲೋಕಿಕೆರೆ ನಾಗರಾಜ್, ಹಾಲೇಶ್, ವಾಟರ್ ಮಂಜುನಾಥ, ಜಯರುದ್ರಪ್ಪ, ಗುತ್ತೂರು ಮಂಜುನಾಥ, ರಾಜು ತೋಟಪ್ಪ, ವಿಜಯೇಂದ್ರ ಇತರರು ಇದ್ದರು.

# ಶ್ರೀ ಮಾತೇಂಗಮ್ಮದೇವಿಯ ಕದಳಿ ಕಾರ್ತೀಕೋತ್ಸವದ ದೀಪಾರಾಧನೆ

**ನ್ಯಾಮತಿ** ಃ ನ್ಯಾಮತಿ ತಾಲೂಕಿನ ಕುರುವ ಗ್ರಾಮದ ಶ್ರೀ ಮಾತೇಂಗಮ್ಮದೇವಿಯ ಕದಳಿ ಕಾರ್ತೀಕೋತ್ಸವದ ದೀಪಾರಾಧನೆಯನ್ನು ಎಳ್ಳು ದೀಪ ಹಚ್ಚಿ ಶ್ರದ್ಧಾಭಕ್ತಿಯಿಂದ ಶುಕ್ರವಾರ ಆಚರಿಸಲಾಯಿತು.

ಶ್ರೀ ಮಾತೇಂಗಮ್ಮದೇವಿಯ ಕಾರ್ತೀಕೋತ್ಸವದ ದೀಪಾರಾಧನೆ ಅಂಗವಾಗಿ ವಿಶೇಷ ಅಲಂಕಾರ ಮಾಡಲಾಗಿತ್ತು. ಶ್ರೀ ಮಾತೇಂಗಮ್ಮದೇವಿಯ ಶಿಲಾಮೂರ್ತಿಗೆ ಬೆಳಿಗ್ಗೆಯಿಂದಲೇ ವಿಶೇಷ ಅಭಿಷೇಕ, ಪೂಜೆ, ಮಹಾ ಮಂಗಳಾರತಿ ನಡೆದವು.



ವಿಶೇಷ ಅಲಂಕಾರ ಮಾಡಲಾಗಿತ್ತು. ಪ್ರಸಾದ, ಆಯೋಜಿಸಲಾಗಿತ್ತು. ಕಾರ್ತೀಕೋತ್ಸವದ ಅಂಗವಾಗಿ ಮಣ್ಣಿನ ಹಣತೆಗಳಲ್ಲಿ ಎಳ್ಳು ದೀಪ ಹೊತ್ತಿಸಿ ಅಲ್ಲದೇ ದೇಗುಲದ ಎದುರುಗಡೆ ದೀಪ ಹೊತ್ತಿಸಿ ದೇವರಿಗೆ ನಮಿಸಿ ಸಂಭ್ರಮಿಸಿದರು. ಭಕ್ತರು ಹೊತ್ತಿಸಿದ ಹಣತೆಗಳ ಸಮೂಹ ಇಡೀ ದೇಗುಲಕ್ಕೆ ಹೊಸ ಮೆರುಗು ನೀಡಿತ್ತು. ಎಲ್ಲರಿಗೂ ಒಳಿತನ್ನು ತರಲಿ' ಎಂದು ಕುಟುಂಬ ಸಮೇತರಾಗಿ ಜನರು ದೇಗುಲದಲ್ಲಿ ತಮ್ಮ ಶಕ್ತ್ಯಾನುಸಾರ ದೀಪಗಳನ್ನು ಹೊತ್ತಿಸಿ, ದೇವರಿಗೆ ವಿಶೇಷ ಪ್ರಾರ್ಥನೆ ಸಲ್ಲಿಸುತ್ತಿದ್ದರು.

# ವರ್ಣ ಪಲ್ಲಟ ಯಕ್ಷಗಾನ ಪ್ರದರ್ಶನ

**ಶಿವಮೊಗ್ಗಃ** ನಗರದ ಯಕ್ಷ ಸಂವರ್ಧನಾ (ರಿ) ವತಿಯಿಂದ ಪ್ರಸಿದ್ಧ ಶ್ರೀ ಹನುಮಗಿರಿ ಮೇಳದ ವತಿಯಿಂದ ವರ್ಣ ಪಲ್ಲಟ ಯಕ್ಷಗಾನ ಪ್ರದರ್ಶನವನ್ನು ಆಯೋಜಿಸಲಾಗಿದೆ.

ಗೋಪಾಳದ ಸಿ ಬ್ಲಾಕ್‌ನಲ್ಲಿರುವ ಶ್ರೀ ಸಿದ್ಧಿ-ಬುದ್ಧಿ ಮಹಾಗಣಪತಿ ಮತ್ತು ಶ್ರೀ ಚೌಡೇಶ್ವರಿ ದೇವಸ್ಥಾನದಲ್ಲಿ ಡಿ. 15ರ ಸೋಮವಾರ ಸಂಜೆ 05.30ರಿಂದ ಈ ಯಕ್ಷಗಾನ ಪ್ರದರ್ಶನದಲ್ಲಿ ಭಾಗವತರಾಗಿ ರವಿಚಂದ್ರ ಕನ್ನಡಿಕಟ್ಟೆ. ಚಿನ್ಮಯ್ ಭಟ್ ಕಲ್ಲಡ್ಕ ಪಾಲ್ಗೊಳ್ಳಲಿದ್ದಾರೆ. ಚಂಡೆ, ಮದ್ದಳೆಯಲ್ಲಿ ದೇಲಂತಮಜಲು ಸುಬ್ರಮಣ್ಯ ಭಟ್, ಚೈತನ್ಯ ಕೃಷ್ಣ ಪದ್ಯಾಣ, ಶ್ರೀಧರ ವಿಟ್ಲ , ಕೌಶಲ್ ರಾವ್ ಪುತ್ತಿಗೆ, ನಿಶ್ಚತ್ ಜೋಡುಕಲ್ಲು ಪಾಲ್ಗೊಳ್ಳಲಿದ್ದಾರೆ. ವಿದೂಷಕರಾಗಿ ಸೀತಾರಾಮ್ ಕುಮಾರ್ ಕಟೀಲು, ಮೋಹನ್ ಮುಚ್ಚೂರು, ಸ್ತ್ರೀ ವೇಷದಲ್ಲಿ ಸಂತೋಷ ಹಿಲಿಯಾಣ, ರಕ್ಷಿತ್ ಶೆಟ್ಟಿ ಪಡ್ರೆ, ಸತೀಶ್ ನೀರ್ಕೆರೆ, ಹರ್ಷ ಸಿದ್ದಾಪುರ ಗಮನ ಸೆಳೆಯಲಿದ್ದಾರೆ. ಪ್ರಧಾನ ಭೂಮಿಕೆಯಲ್ಲಿ ವಾಸುದೇವ ರಂಗಾ ಭಟ್, ಮಧೂರು, ಶ್ರೀ ಜಯಪ್ರಕಾಶ್ ಶೆಟ್ಟಿ



ಪೆರ್ಮುದೆ, ಜಗದಾಭಿರಾಮ ಪಡುಬಿದ್ರಿ, ಸದಾಶಿವ ಕುಲಾಲ್ ವೇಣೂರು, ದಿವಾಕರ್ ರೈ ಸಂಪಾಜೆ, ಶಿವರಾಜ್ ಭಜಕೋಡ್ಲು, ಮುಖೇಶ್ ದೇವಧರ್ ನಿಡ್ಲೆ , ಅಜಿತ್ ಪುತ್ತಿಗೆ, ಪ್ರಥ್ವಿಶ್ ಪರ್ಕಳ, ಪೆರ್ಲ ಜಗನ್ನಾಥ ಶೆಟ್ಟಿ, ಪ್ರಜ್ವಲ್ ಕುಮಾರ್ ಗುರುವಾಯನಕೆರೆ, ಪ್ರಸಾದ್ ಸವನೂರು, ಕೀರ್ತನ್ ಕಾರ್ಕಳ, ಸತೀಶ್ ಎಡಮೊಗೆ, ರೂಪೇಶ್ ಆಚಾರ್ಯ, ಅಭಿಷೇಕ್ ಕಲ್ಲಡ್ಕ , ಪ್ರಜ್ವಲ್ ಶೆಟ್ಟಿ, ಸೋಹನ್ ರೈ ರಾಮಕುಂಜ, ವಿದ್ಯಾಭೂಷಣ ಪಂಚಾಚೆರವರ ಅಭಿನಯವಿದೆ.

ಯಕ್ಷಗಾನ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಆಯೋಜಕರಾದ ಯಕ್ಷ ಸಂವರ್ಧನಾ ಟ್ರಸ್ಟ್ ಹಾಗೂ ಶ್ರೀ ಸಿದ್ಧಿ-ಬುದ್ಧಿ ಮಹಾಗಣಪತಿ ಮತ್ತು ಶ್ರೀ ಚೌಡೇಶ್ವರಿ ದೇವಸ್ಥಾನ ಸಮಿತಿಯ ಅಧ್ಯಕ್ಷರು ಪದಾಃಕಾರಿಗಳು ಕೋರಿದ್ದಾರೆ.

ವಿವರಗಳಿಗೆ 9845094318, 9342520413, 9632952015, 8217318814ರಲ್ಲಿ ಸಂಪರ್ಕಿಸಬಹುದು.

# ಡಿ.18 ರಂದು ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆ

**ಬಳ್ಳಾರಿ:** ಲೋಕೋಪಯೋಗಿ ಇಲಾಖೆ ಬಳ್ಳಾರಿ ವಿಭಾಗದ ವತಿಯಿಂದ ಡಿ.18 ರಂದು ಮಧ್ಯಾಹ್ನ 12 ಗಂಟೆಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆ ಏರ್ಪಡಿಸಲಾಗಿದೆ.

ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿಯ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿಯ ಸದಸ್ಯ ಕಾರ್ಯದರ್ಶಿಯೂ ಆದ ಲೋಕೋಪಯೋಗಿ ಇಲಾಖೆ ಬಳ್ಳಾರಿ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಅವರು ತಿಳಿಸಿದ್ದಾರೆ.

# ಡಿ.17, 18 ರಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯಲ್ಲಿ ಎರಡು ದಿನಗಳ ಕಮ್ಮಟ

**ಬಳ್ಳಾರಿ:** ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಪ್ರಸಾರಾಂಗ ಹಾಗೂ ಕರ್ನಾಟಕ ಪ್ರಕಾಶಕರ ಸಂಘ(ರಿ) ಬೆಂಗಳೂರು ಇವರ ಸಹಯೋಗದಲ್ಲಿ ಪುಸ್ತಕ ಪ್ರಕಾಶನ ಕುರಿತ ಎರಡು ದಿನಗಳ ಕಮ್ಮಟವನ್ನು ಡಿ.17 ಮತ್ತು 18 ರಂದು ವಿವಿ ಯಲ್ಲಿ ಆಯೋಜಿಸಲಾಗಿದೆ.

ಕರ್ನಾಟಕ ಪ್ರಕಾಶನ ರಂಗದ ಸ್ಥೂಲ ನೋಟ, ಪುಸ್ತಕ ನಿರ್ಮಾಣದ ವಿವಿಧ ಹಂತಗಳ ಬಗೆ, ಪುಸ್ತಕ ಪ್ರಕಾಶನ ಮತ್ತು ಕಾನೂನುಗಳು, ಕರಡು ತಿದ್ದುವಿಕೆಯ ವಿವಿಧ ಆಯಾಮಗಳು, ಪುಸ್ತಕ ವಿನ್ಯಾಸ ಮತ್ತು ಮುಖಪುಟ ವಿನ್ಯಾಸ, ಮುದ್ರಣ ಶಾಲೆಯ ವಿವಿಧ ಹಂತಗಳು, ಪುಸ್ತಕ ಸಂಸ್ಕೃತಿಯ ಪ್ರಸಾರ ಮತ್ತು ಪ್ರಸಾರಾಂಗಗಳು, ಪತ್ರಿಕಾ ವಿಮರ್ಶೆ ಮತ್ತು ಪ್ರಸಾರ, ಪುಸ್ತಕ ಪ್ರಕಾಶನ ಮತ್ತು ಮಾರಾಟ ಜಾಲ ಮೊದಲಾದ ವಿಷಯಗಳ ರಾಜ್ಯದ ಸಂಪನ್ಮೂಲ ವ್ಯಕ್ತಿಗಳಿಂದ ಗೋಷ್ಠಿಗಳು ನಡೆಯಲಿವೆ.


# ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಅಂತರರಾಷ್ಟ್ರೀಯ ಎಚ್‌ಆರ್ ತರಬೇತಿ ಕಾರ್ಯಾಗಾರ

**ದಾವಣಗೆರೆ :** ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ಲೇಸ್ಮೆಂಟ್ ಸೆಲ್ ಹಾಗೂ ವಾಣಿಜ್ಯ ಮತ್ತು ನಿರ್ವಹಣಾ ಶಾಸ್ತ್ರ ಸ್ನಾತಕೋತ್ತರ ವಿಭಾಗದ ಸಂಯುಕ್ತ ಆಶ್ರಯದಲ್ಲಿ ಎಂ.ಬಿ.ಎ ಮತ್ತು ಎಂ.ಕಾಂ ವಿದ್ಯಾರ್ಥಿಗಳಿಗೆ ಉದ್ದೇಶಿಸಿ ಅಂತರರಾಷ್ಟ್ರೀಯ ಮಾನವ ಸಂಪನ್ಮೂಲ (ಊಖ) ತರಬೇತಿ ಮತ್ತು ಉದ್ಯೋಗಾವಕಾಶಗಳ ಕುರಿತು ವಿಶೇಷ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲರು ವಹಿಸಿದ್ದರು.

ಪ್ರಸ್ತಾವಿಕ ಭಾಷಣದಲ್ಲಿ ಪ್ಲೇಸ್ಮೆಂಟ್ ಸೆಲ್ ಸಂಚಾಲಕರಾದ ಡಾ. ವೆಂಕಟೇಶ್ ಬಾಬು ಮಾತನಾಡಿ, ಇಂದಿನ ಉದ್ಯೋಗ ಮಾರುಕಟ್ಟೆಯಲ್ಲಿ ವಿದ್ಯಾರ್ಥಿಗಳು ಶೈಕ್ಷಣಿಕ ಅರ್ಹತೆಯ ಜೊತೆಗೆ ಉದ್ಯೋಗಮುಖಿ ಕೌಶಲ್ಯ, ಸಂವಹನ ಸಾಮರ್ಥ್ಯ ಮತ್ತು ಉದ್ಯಮಕ್ಕೆ ಹೊಂದುವ ಮನೋಭಾವನೆ ಹೊಂದಿರಬೇಕೆಂದು ಹೇಳಿದರು. ವಿದ್ಯಾರ್ಥಿಗಳನ್ನು ಉದ್ಯೋಗ ಕ್ಷೇತ್ರಕ್ಕೆ ಸಿದ್ಧಗೊಳಿಸುವಲ್ಲಿ ಪ್ಲೇಸ್ಮೆಂಟ್ ಸೆಲ್‌ನ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಅವರು ತಿಳಿಸಿದರು.

ದುಬೈನಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂತರರಾಷ್ಟ್ರೀಯ ಎಚ್‌ಆರ್ ತರಬೇತಿದಾರರಾದ ಪೂಜಾ ಬಿ. ಎಂ. ಅವರು ಮುಖ್ಯ ಸಂಪನ್ಮೂಲ ವ್ಯಕ್ತಿಯಾಗಿ




ಮಾತನಾಡಿ, ದೇಶೀಯ ಹಾಗೂ ವಿದೇಶಿ ಉದ್ಯೋಗಾವಕಾಶಗಳು, ದುಬೈನಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂತರರಾಷ್ಟ್ರೀಯ ಎಚ್‌ಆರ್ ತರಬೇತಿದಾರರಾದ ಪೂಜಾ ಬಿ. ಎಂ. ಅವರು ಮುಖ್ಯ ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡಿ, ದೇಶೀಯ ಹಾಗೂ ವಿದೇಶಿ ಉದ್ಯೋಗಾವಕಾಶಗಳು ನೇಮಕಾತಿ ಪ್ರಕ್ರಿಯೆ, ರೆಸ್ಯೂಮ್ ತಯಾರಿ, ಸಂದರ್ಶನ ಕೌಶಲ್ಯಗಳು, ಕಾರ್ಪೊರೇಟ್ ಸಂಸ್ಕೃತಿ ಹಾಗೂ ಎಚ್‌ಆರ್ ಕ್ಷೇತ್ರದಲ್ಲಿನ ಇತ್ತೀಚಿನ ಪ್ರವೃತ್ತಿಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು. ಪದವಿಯ ಜೊತೆಗೆ ಪ್ರಾಯೋಗಿಕ ತರಬೇತಿಗಳು ವಿದ್ಯಾರ್ಥಿಗಳ ವೃತ್ತಿಜೀವನಕ್ಕೆ ದಿಕ್ಕು ತೋರಿಸುತ್ತವೆ ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಾಗಾರವು ಸಂವಾದಾತ್ಮಕವಾಗಿ ನಡೆದಿದ್ದು, ವಿದ್ಯಾರ್ಥಿಗಳ ಪ್ರಶ್ನೆಗಳಿಗೆ ಸಂಪನ್ಮೂಲ ವ್ಯಕ್ತಿ ಸ್ಪಷ್ಟ ಉತ್ತರಗಳನ್ನು ನೀಡಿದರು.

ಕಾರ್ಯಕ್ರಮದಲ್ಲಿ ವಾಣಿಜ್ಯ ಮತ್ತು ನಿರ್ವಹಣಾ ಶಾಸ್ತ್ರ ವಿಭಾಗದ ಅಧ್ಯಾಪಕರು ಹಾಗೂ ಪ್ಲೇಸ್ಮೆಂಟ್ ಸೆಲ್ ಸದಸ್ಯರು ಉಪಸ್ಥಿತರಿದ್ದರು.

# ಸಹಕಾರ ಸಂಘ/ಸೌಹಾರ್ದ ಸಹಕಾರಿಗಳ ವಾರ್ಷಿಕ ಮಹಾಸಭೆ ನಡಾವಳಿ ಸಲ್ಲಿಸಲು ಸೂಚನೆ

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲೆಯಲ್ಲಿ ಎಲ್ಲಾ ಸಹಕಾರ ಸಂಘಗಳು/ ಸೌಹಾರ್ದ ಸಹಕಾರಿಗಳು ಕಾಯ್ದೆ ಹಾಗೂ ನಿಯಮಗಳನ್ವಯ 2025-26ನೇ ಸಾಲಿನ ಲೆಕ್ಕಪರಿಶೋಧನೆಗೆ ಲೆಕ್ಕಪರಿಶೋಧಕರ ಆಯ್ಕೆ ಸಂಬಂಧ ವಾರ್ಷಿಕ ಮಹಾಸಭೆ ಜರುಗಿದ ನಡಾವಳಿಯ ಯಥಾ ಪ್ರತಿಯನ್ನು ಮಹಾಸಭೆ ನಡೆದ 7 ದಿನಗಳೊಳಗಾಗಿ ಉಪನಿರ್ದೇಶಕರ ಕಚೇರಿ, ಸಹಕಾರ

ಸಂಘಗಳ ಲೆಕ್ಕಪರಿಶೋಧನಾ ಇಲಾಖೆ, ಪಿ.ಜಿ.ಎಸ್. ಟವರ್, 2ನೇ ಮಹಡಿ, ಜ್ಯುವೆಲ್ ರಾಕ್ ಹೋಟೆಲ್ ರಸ್ತೆ, ಜಗನ್ನಾಥ ನರ್ಸಿಂಗ್ ಹೋಂ ಪಕ್ಕ, ಶಿವಮೊಗ್ಗ ಇವರ ಕಚೇರಿಗೆ ಕಡ್ಡಾಯವಾಗಿ ಒಂದು ಪ್ರತಿಯನ್ನು ಸಲ್ಲಿಸಿ ಸ್ವೀಕೃತಿ ಪಡೆದುಕೊಳ್ಳುವಂತೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ನಿಧನ ಸುದ್ದಿಗಳು

### ಸುಶೀಲಾಬಾಯಿ ನಿಧನ

ದಾವಣಗೆರೆ : ತಾಲ್ಲೂಕು ಆಲೂರು ಹಟ್ಟಿ(ಶ್ರೀರಾಮನಗರ) ಗ್ರಾಮದ ವಾಸಿ,ದಿ॥ ದೇವ್ಯಾನಾಯ್ಕ ಅವರ ಧರ್ಮಪತ್ನಿಚಿಗಟೇರಿ ಆಸ್ಪತ್ರೆ ನಿವೃತ್ತ ನೌಕರರಾದಶ್ರೀಮತಿ ಇ. ಸುಶೀಲಾಬಾಯಿ ಅವರು ದಿನಾಂಕ 14-12-2025ರ ಭಾನುವಾರ ಬೆಳಗಿನ ಜಾವ 1.25ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರಿಗೆ 78 ವರ್ಷ ವಯಸ್ಸಾಗಿತ್ತು. ಮೂವರು ಪುತ್ರರು, ಓರ್ವ ಪುತ್ರಿ ಸೊಸೆಯಂದಿರು, ಅಳಿಯ, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ 14-12-2025ರ ಭಾನುವಾರ ಮಧ್ಯಾಹ್ನ 1 ಕ್ಕೆ ಮೃತರ ಅಂತ್ಯಕ್ರಿಯೆಯು ದಿನಾಂಕ ದಾವಣಗೆರೆ ತಾಲ್ಲೂಕು ಆಲೂರುಹಟ್ಟಿ (ಶ್ರೀರಾಮನಗರ) ಸ್ವಗ್ರಾಮದಲ್ಲಿ ನೆರವೇರಿದೆ.

### ಟಿ. ಕೃಷ್ಣಪ್ಪ ನಿಧನ

**ದಾವಣಗೆರೆ :** ಪಟ್ಟಸಾಲಿ ನೇಕಾರ ಸಮಾಜದ 13.12.20250 ಕಾರ್ಯದರ್ಶಿಯಾದ ಶ್ರೀ ಕೃಷ್ಣಪ್ಪ ಟಿ. (ನಿವೃತ್ತ ದೈಹಿಕ ಶಿಕ್ಷಕರು) ಇವರು ಸಂಜೆ 7:30ಕ್ಕೆ ನಿಧನರಾದರು. ಅಪಾರ ಬಂಧು ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 14.12.2025ರ ಭಾನುವಾರ ಮಧ್ಯಾಹ್ನ 2 ಗಂಟೆಗೆ ನಗರದ ಆರ್. ಹೆಚ್. ಬೃಂದಾವನದಲ್ಲಿ ನೆರವೇರಿದೆ.

### ಶ್ರೀಮತಿ ಲಲಿತಮ್ಮ ನಿಧನ

**ದಾವಣಗೆರೆ:** ತಾಲ್ಲೂಕು, ಹಳೇಕುಂದುವಾಡ ಗ್ರಾಮದ ವಾಸಿ ಶ್ರೀ ಎನ್.ಹೆಚ್. ಮಹೇಶ್ವರಪ್ಪರವರ ಧರ್ಮಪತ್ನಿ ನಿಟ್ಟುವಳ್ಳೀರ ಶ್ರೀಮತಿ ಲಲಿತಮ್ಮ ಅವರು ದಿನಾಂಕ : 13.12.2025ರ ಶನಿವಾರ ಸಂಜೆ 4.05 ಕ್ಕೆ ನಿಧನರಾದರು. ಮೃತರಿಗೆ 71 ವರ್ಷ ವಯಸ್ಸಾಗಿತ್ತು. ಪತಿ, ಮೂವರು ಪುತ್ರರು, ಓರ್ವ ಪುತ್ರಿ, ಅಳಿಯ, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ : 14.12.2025ರ ಭಾನುವಾರ ಮಧ್ಯಾಹ್ನ 1 ಗಂಟೆಗೆ ಹಳೇಕುಂದುವಾಡದ ರುದ್ರಭೂಮಿಯಲ್ಲಿ ನೆರವೇರಿದೆ.

### ಸುರೇಶ ವಿ.ಸಿ. ನಿಧನ

**ದಾವಣಗೆರೆ :** ಸಿಟಿ, ಲೋಕಿಕೆರೆ ರೋಡ್, ಜಿಲ್ಲಾ ಪಂಚಾಯತ್ ಆಫೀಸ್ ಹತ್ತಿರದ ವಾಸಿ ಕುಕ್ಕವಾಡದ ಚನ್ನಪ್ಪ ಹೆಚ್.ಶ್ರೀಮತಿ ಪಾರ್ವತಮ್ಮ ಇವರ ಮಗನಾದಶ್ರೀ ಸುರೇಶ ವಿ.ಸಿ. ಅವರು ದಿನಾಂಕ : 13.12.2025ರ ಶನಿವಾರ ಮಧ್ಯಾಹ್ನ 2.40ಕ್ಕೆ ನಿಧನರಾದರು. ಮೃತರಿಗೆ 36 ವರ್ಷ ವಯಸ್ಸಾಗಿತ್ತು. ತಂದೆ-ತಾಯಿ, ಪತ್ನಿ, ಓರ್ವ ಪುತ್ರಿ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು 14.12.2025ರ ಭಾನುವಾರ ಮಧ್ಯಾಹ್ನ 12 ಗಂಟೆಗೆ ಕುಕ್ಕವಾಡದ ಮೃತರ ತೋಟದಲ್ಲಿ ನೆರವೇರಿದೆ.

# ಇಂದು ಅಶೋಕ ಚಿತ್ರಮಂದಿರದಲ್ಲಿ '45' ಸಿನಿಮಾದ ಟೀಸರ್ ಬಿಡುಗಡೆ ನೇರಪ್ರಸಾರ

**ದಾವಣಗೆರೆ:** ಡಾ.ಶಿವರಾಜಕುಮಾರ್, ಉಪೇಂದ್ರ ಮತ್ತು ರಾಜ್ ಬಿ.ಶೆಟ್ಟಿ ಅಭಿನಯದ '45' ಸಿನಿಮಾದ ಟೀಸರ್ ಬಿಡುಗಡೆ ನೇರಪ್ರಸಾರಕ್ಕೆ ಡಿ.15ರಂದು ಸಂಜೆ 6.45ಕ್ಕೆ ನಗರದ ಅಶೋಕ ಚಿತ್ರಮಂದಿರದಲ್ಲಿ ವ್ಯವಸ್ಥೆ ಮಾಡಲಾಗಿದೆ.

ಸುದ್ದಿಗೋಷ್ಠಿಯಲ್ಲಿ ಚಿತ್ರತಂಡದ ಮನೋಜ್ ಪೂಜಾರಿ ಮಾತನಾಡಿ, ಬೆಂಗಳೂರಿನಲ್ಲಿ ನಡೆಯುವ ಟೀಸರ್ ಬಿಡುಗಡೆ ಕಾರ್ಯಕ್ರಮವನ್ನು ಇದೇ ಮೊದಲ ಬಾರಿಗೆ ದಾವಣಗೆರೆ, ಶಿವಮೊಗ್ಗ, ಹುಬ್ಬಳ್ಳಿ, ಮಂಗಳೂರು, ಹೊಸಪೇಟೆ ಸೇರಿದಂತೆ ರಾಜ್ಯದ 7 ಜಿಲ್ಲೆಗಳಲ್ಲಿ ನೇರಪ್ರಸಾರ ಮಾಡಲಾಗುತ್ತಿದೆ. ದಾವಣಗೆರೆಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಕಲಾವಿದ ಮಲ್ಲು ಬಾಗಲಕೋಟೆ ಭಾಗವಹಿಸಲಿದ್ದಾರೆ. ಇದೇ ವೇಳೆ ಡಾ.ಶಿವರಾಜಕುಮಾರ್ ಅಭಿಮಾನಿಗಳ ಜೊತೆ ಮಾತನಾಡಲಿದ್ದಾರೆ. ಕಟೌಟ್‌ಗೆ ಹಾಲಿನ ಅಭಿಷೇಕ, ಹೂವಿನ ಹಾರ ಹಾಕುವ ಜೊತೆಗೆ ಡೊಳ್ಳು ಕುಣಿತದೊಂದಿಗೆ ಸಂಭ್ರಮಿಸಲಾಗುವುದು ಎಂದರು.

ಡಿ.25ರಂದು '45' ಸಿನಿಮಾ ವಿಶ್ವಾದ್ಯಂತ ಬಿಡುಗಡೆಯಾಗಲಿದೆ. ಖ್ಯಾತ ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ಮೊದಲ ಬಾರಿ ಸಿನಿಮಾ ನಿರ್ದೇಶಿಸಿದ್ದು, ರಮೇಶ ರೆಡ್ಡಿ ಚಿತ್ರಕ್ಕೆ ಬಂಡವಾಳ ಹೂಡಿದ್ದಾರೆ. ಅಭಿಮಾನಿಗಳು 45 ಅಡಿ ಕಟೌಟ್ ನೊಂದಿಗೆ ಚಿತ್ರವನ್ನು ಬರಮಾಡಿಕೊಳ್ಳಲಿದ್ದಾರೆ. ಟೀಸರ್ ಬಿಡುಗಡೆ ನೇರಪ್ರಸಾರ ವೀಕ್ಷಣೆಗೆ ಪಾಸ್ ಇದ್ದವರಿಗೆ ಮಾತ್ರ ಪ್ರವೇಶ ಇರುತ್ತದೆ ಎಂದು ಅವರು ತಿಳಿಸಿದರು.

ಶಿವರಾಜಕುಮಾರ್ ಅಭಿಮಾನಿ ಸಂಘದ ಯೋಗೀಶ, ಉಪೇಂದ್ರ ಅಭಿಮಾನಿ ಸಂಘದ ರಮೇಶ, ಸುರೇಶ್ ಶಾಮನೂರ್, ಕೆ.ವೈ.ತಿಪ್ಪೇಸ್ವಾಮಿ, ವಸಂತ ಜೊಳ್ಳಿ, ನಿಖಿಲ್ ಮತ್ತಿತರರು ಸುದ್ದಿಗೋಷ್ಠಿಯಲ್ಲಿದ್ದರು.

# ಡಿ.15ರಿಂದ ಸೈಬರ್ ಭದ್ರತೆ ಕುರಿತು ಕಾರ್ಯಾಗಾರ

**ದಾವಣಗೆರೆ:** ರಾಜ್ಯ ಸರ್ಕಾರದ ಕೆ-ಟೆಕ್ ಮತ್ತು ಸೆಂಟರ್ ಆಫ್ ಎಕ್ಸಲೆನ್ಸ್ ಇನ್ ಸೈಬರ್ ಸೆಕ್ಯೂರಿಟಿ ಇವರ ಸಹಯೋಗದಲ್ಲಿ ಡಿಸೆಂಬರ್ 15 ರಿಂದ 19 ರವರೆಗೆ ಸೈಬರ್ ಭದ್ರತೆ ವಿಷಯದ ಕುರಿತು ಐದು ದಿನಗಳ ಫ್ಯಾಕಲ್ಟಿ ಡೆವಲಪ್‌ಮೆಂಟ್ ಪ್ರೋಗ್ರಾಂ ಅನ್ನು ಬಾಪೂಜಿ ಇನ್‌ಸ್ಟಿಟ್ಯೂಟ್ ಆಫ್ ಎಂಜಿನಿಯರಿಂಗ್ ಅಂಡ್ ಟೆಕ್ನಾಲಜಿ ಮಹಾವಿದ್ಯಾಲಯದ ಆರ್ಯಭಟ ಸೆಮಿನಾರ್ ಹಾಲ್ ನಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ವಿಶೇಷ ಆಹ್ವಾನಿತರಾಗಿ ಕಾಲೇಜಿನ ಪ್ರಾಂಶುಪಾಲ ಡಾ.ಹೆಚ್ ಪಿ. ಅರವಿಂದ್, ಬಿಐಇಟಿ ನಿರ್ದೇಶಕ ಪ್ರೊ. ವೈ. ವೃಷಭೇಂದ್ರಪ್ಪ ಮತ್ತು ಮುಖ್ಯ ಅತಿಥಿಯಾಗಿ ಬೆಂಗಳೂರಿನ ಸೆಂಟರ್ ಆಫ್ ಎಕ್ಸಲೆನ್ಸ್ ಇನ್ ಸೈಬರ್ ಸೆಕ್ಯೂರಿಟಿ ಕಾರ್ಯಕ್ರಮ ವ್ಯವಸ್ಥಾಪಕ ಶಿವಲಿಂಗ ಸಲಾಕಿ ಪಾಲ್ಗೊಳ್ಳಲಿದ್ದಾರೆ. ಸಿವೈ ಎಸ್ ಇ ಸಿ ಕೆ ಬೆಂಗಳೂರಿನ ಕೇಂದ್ರದ ಮುಖ್ಯಸ್ಥ ರಂಜಿತ್ ಮಿಶ್ರ ವಿಷಯ ಕುರಿತು ಮಾತನಾಡಲಿದ್ದಾರೆ. ಸಿ ಎಸ್ ಈ ಮುಖ್ಯಸ್ಥೆ ಡಾ ಸಿ ಆರ್ ನಿರ್ಮಲ ಕಾರ್ಯಕ್ರಮದ ಸಂಚಾಲಕರಾಗಿ ಪಾಲ್ಗೊಳ್ಳಲಿದ್ದಾರೆ.

ತರಬೇತಿ ಕಾರ್ಯಕ್ರಮವು ಪ್ರತಿದಿನ ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ ನಡೆಯಲಿದೆ. ಪದವಿ ಹಾಗೂ ಸ್ನಾತಕೋತ್ತರ ಹಂತದ ಉಪನ್ಯಾಸಕರಲ್ಲಿ ಸೈಬರ್ ಭದ್ರತೆಯ ಕುರಿತ ಆಧುನಿಕ ಜ್ಞಾನವನ್ನು ವೃದ್ಧಿಸುವುದು, ಕೈಗಾರಿಕಾ ಅವಶ್ಯಕತೆಗಳಿಗೆ ಅನುಗುಣವಾದ ಬೋಧನಾ ಕೌಶಲ್ಯಗಳನ್ನು ಅಭಿವೃದ್ಧಿಪಡಿಸುವುದು ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿ ಸೈಬರ್ ಹೈಜೀನ್ ಮತ್ತು ಭದ್ರತಾ ಸಂಸ್ಕೃತಿಯನ್ನು ಬಲಪಡಿಸಲು ಈ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ.

# ಶ್ರೀ ಕಾಳಿಕಾದೇವಿ ವಿಶ್ವಕರ್ಮ ದೇವಸ್ಥಾನದಲ್ಲಿ ಕಡೇ ಕಾರ್ತಿಕೋತ್ಸವ



**ದಾವಣಗೆರೆ :** ಕಾಳಿಕಾದೇವಿ ರಸ್ತೆಯಲ್ಲಿರುವ ಶ್ರೀ ಕಾಳಿಕಾದೇವಿ ವಿಶ್ವಕರ್ಮ ದೇವಸ್ಥಾನದಲ್ಲಿ ಡಿಸೆಂಬರ್ 16ರ ಮಂಗಳವಾರ ಸಂಜೆ 8 ಗಂಟೆಯಿಂದ ಕಡೇ ಕಾರ್ತಿಕೋತ್ಸವವು ನಡೆಯಲಿದೆ ಎಂದು ಎಂದು ಶ್ರೀ ಕಾಳಿಕಾದೇವಿ ವಿಶ್ವಕರ್ಮ ದೇವಸ್ಥಾನ ಆಡಳಿತ ಸಮಿತಿ ಟ್ರಸ್ಟ್ ತಿಳಿಸಿದೆ.

# ವಿದ್ಯಾಭ್ಯಾಸ ಕಲಿಸುವ ಬದಲು ಬೈಕ್ ವಾಶ್ ಮಾಡಲು ಮಕ್ಕಳನ್ನು ಬಳಕೆ ಮಾಡಿಕೊಳ್ಳುತ್ತಿರುವ ಮುಖ್ಯ ಶಿಕ್ಷಕ: ಗ್ರಾಮಸ್ಥರ ಆರೋಪ

**ದಾವಣಗೆರೆ:** ಶಾಲೆಗೆ ಬಂದ ಬಡ ಮಕ್ಕಳಿಗೆ ವಿದ್ಯಾಭ್ಯಾಸ ನೀಡಿ, ತನ್ನ ಜ್ಞಾನವನ್ನು ಅವರಿಗೆ ಧಾರೆ ಎರೆದು ಉನ್ನತ ಶಿಕ್ಷಣಕ್ಕಾಗಿ ಸಹಾಯ ಮಾಡಬೇಕಾದ ಶಿಕ್ಷಕನೇ, ಶಾಲಾ ವಿಧ್ಯಾರ್ಥಿಗಳನ್ನು ತನ್ನ ವೈಯುಕ್ತಿಕ ಕೆಲಸಗಳಿಗೆ ಬಳಸಿಕೊಳ್ಳುತ್ತಿದ್ದಾನೆ ಎಂಬ ಆರೋಪ ದಾವಣಗೆರೆ ಜಿಲ್ಲೆ ಜಗಳೂರು ತಾಲ್ಲೂಕಿನ ಅಣಬೂರು ಗ್ರಾಮದಲ್ಲಿ ಕೇಳಿ ಬರುತ್ತಿದೆ.

ಅಣಬೂರು ಗ್ರಾಮದ ಅನುದಾನಿತ ಮಾರುತಿ ಪ್ರೌಢಶಾಲೆಯಲ್ಲಿಯ ಮುಖ್ಯ ಶಿಕ್ಷಕ ಕುಮಾರ್ ನಾಯ್ಕ್ ಮಕ್ಕಳನ್ನು ಸೇವಕರನ್ನಾಗಿ ಇಟ್ಟುಕೊಂಡವರಾಗಿದ್ದು, ಈತನ ವಿರುದ್ಧ ಸಾರ್ವಜನಿಕ ವಲಯದಲ್ಲಿ ಸಾಕಷ್ಟು ಆರೋಪಗಳು ಕೇಳಿ ಬಂದಿವೆ.

ಶಾಲೆಯ ಮುಖ್ಯ ಶಿಕ್ಷಕ ಕುಮಾರ್‌ನಾಯ್ಕ್ ಪಾಠ ಹೇಳಿ ಕೊಡೋ ಬದಲು ತನ್ನ ಬೈಕ್ ತೊಳೆಯಲು, ಅವನ ಜಮೀನು ಕೆಲಸ ಮಾಡಲು ಮಕ್ಕಳನ್ನು ಬಳಕೆ ಮಾಡಿಕೊಳ್ಳುತ್ತಿದ್ದಾರೆ. ನಿತ್ಯ ಶಾಲೆಗೆ ಬಂದ ತಕ್ಷಣ ಮಕ್ಕಳಿಂದ ತನ್ನ ಬೈಕ್ ಅನ್ನು ಕ್ಲೀನ್ ಮಾಡಿಸೋದು,

ನಂತರ ತನ್ನ ವೈಯಕ್ತಿಕ ಕೆಲಸಗಳನ್ನು ಮಾಡಲು ಮಕ್ಕಳನ್ನು ಬಳಕೆ ಮಾಡಿಕೊಳ್ಳುತ್ತಿದ್ದಾರೆ ಎನ್ನುವ ಅರೋಪ ಕೇಳಿ ಬಂದಿದ್ದು, ಮಕ್ಕಳ ಬಳಿ ಬೈಕ್ ಕ್ಲೀನ್ ಮಾಡಿಸುತ್ತಿರುವ ದೃಶ್ಯವನ್ನು ಸಾರ್ವಜನಿಕರು ಮೊಬೈಲ್‌ನಲ್ಲಿ ಸೆರೆ ಹಿಡಿದಿದ್ದಾರೆ. ಇದೀಗ ಆ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಸಾಕಷ್ಟು ವೈರಲ್ ಆಗುತ್ತಿದೆ.

ಮುಖ್ಯ ಶಿಕ್ಷಕ ಕುಮಾರ್‌ನಾಯ್ಕ್‌ನ ಈ ವರ್ತನೆಗೆ ಸಾರ್ವಜನಿಕ ವಲಯದಲ್ಲಿ ಆಕ್ರೋಶ ಕೇಳಿ ಬಂದಿದ್ದು, ಕೂಡಲೇ ಮುಖ್ಯ ಶಿಕ್ಷಕನ ವಿರುದ್ಧ ಶಾಲೆಯ ಅಡಳಿತ ಮಂಡಳಿ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

# ಡಿ.21ರಂದು 'ಓಪನ್ ರ್‍ಯಾಪಿಡ್- ಪುನಿತ್ ರಾಜಕುಮಾರ್ ಕಪ್' ಸೀಸನ್-4 ಚದುರಂಗ ಸ್ಪರ್ಧೆ

**ದಾವಣಗೆರೆ :** ದಾವಣಗೆರೆ ಚೆಸ್ ಕ್ಲಬ್ ವತಿಯಿಂದ ಕರ್ನಾಟಕ ರಾಜ್ಯ ಚೆಸ್ ಅನೋಸಿಯೇಷನ್ ಇವರ ಸಹಯೋಗದೊಂದಿಗೆ ಕರ್ನಾಟಕ ರಾಜ್ಯೋತ್ಸವ ಹಾಗೂ ಪುನಿತ್ ರಾಜಕುಮಾರ್ ಅವರ ಸವಿನೆನಪಿಗಾಗಿ ಇದೇ ಡಿ.21ರಂದು ನಗರದ ಬಾಪೂಜಿ ಬ್ಯಾಂಕ್ ಸಮುದಾಯ ಭವನದಲ್ಲಿ 'ಓಪನ್ ರ್‍ಯಾಪಿಡ್- ಪುನಿತ್ ರಾಜಕುಮಾರ್ ಕಪ್' ಸೀಸನ್-4 ಚದುರಂಗ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ.

ಶನಿವಾರ ಸುದ್ದಿಗೋಷ್ಠಿಯಲ್ಲಿ ಈ ಬಗ್ಗೆ ಕ್ಲಬ್ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ ಮಾತನಾಡಿ, ತಮ್ಮ ಅಧ್ಯಕ್ಷತೆಯಲ್ಲಿ ನಡೆಯುವ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್, ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಉದ್ಘಾಟಿಸಲಿದ್ದು, ಹಲವು ಗಣ್ಯರು ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಪಂದ್ಯಾವಳಿಯಲ್ಲಿ ದೇಶದ ವಿವಿಧ ಜಿಲ್ಲೆಗಳಿಂದ ಸುಮಾರು 400 ಕ್ಕೂ ಹೆಚ್ಚು ಸ್ಪರ್ಧಾಳುಗಳು ಭಾಗವಹಿಸುವ ನಿರೀಕ್ಷೆ ಇದ್ದು, 9 ಸುತ್ತುಗಳಲ್ಲಿ ಪಂದ್ಯಾವಳಿ ನಡೆಯಲಿದ್ದು, ವಿಜೇತರಿಗೆ ಒಟ್ಟು ಒಂದು ಲಕ್ಷ ರೂಪಾಯಿಗಳ ಬಹುಮಾನ ಮೊತ್ತ ಇದ್ದು ಜೊತೆಗೆ 150 ಟ್ರೋಫಿಗಳನ್ನು ವಿತರಿಸಲಾಗುವುದು. ಪ್ರಥಮ ಬಹುಮಾನ ಪುನೀತ್ ಪ್ರತಿಮೆಯ ಟ್ರೋಫಿಯ ಜೊತೆಗೆ 15,000 ನಗದು ಬಹುಮಾನ ಮತ್ತು ದ್ವಿತೀಯ ಬಹುಮಾನ 10.000 ಹಾಗೂ ಟ್ರೋಫಿ, ತೃತೀಯ ಬಹುಮಾನ 5,000 ನಗದು ಹೀಗೆ 20ಸ್ಥಾನದ ವರೆಗೆ ನೀಡಲಾಗುವುದು ಎಂದರು.

ದಾವಣಗೆರೆಯ ಉತ್ತಮ ಚದುರಂಗ ಆಟಗಾರರರಿಗೆ 20 ವಿಶೇಷ ಟ್ರೋಫಿಗಳನ್ನು ವಿತರಿಸಲಾಗುವುದು. ಈ ಪಂದ್ಯಾವಳಿಯಲ್ಲಿ ಅಂತರಾಷ್ಟ್ರೀಯ ತೀರ್ಪುಗಾರರಾದ ಬಿ.ಹೆಚ್.ವಸಂತ್ ಆಗಮಿಸಲಿದ್ದಾರೆ. ಸ್ಪರ್ಧೆಯಲ್ಲಿ ಭಾಗವಹಿಸುವ ಆಸಕ್ತ ಕ್ರೀಡಾಪಟುಗಳು ಇದೇ ಡಿಸೆಂಬರ್ 19ರ ಒಳಗಾಗಿ ಛಿಜಿಜಜಜ.ಛಿಂಟ ಇಲ್ಲಿ 750 ರೂ ಶುಲ್ಕ ಪಾವತಿಸಿ ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಚೆಸ್ ಕ್ಲಬ್‌ನ ಕಾರ್ಯದರ್ಶಿ ಯುವರಾಜ್ 9945613469, ಮಂಜುಳಾ 7259310197 ಇವರನ್ನು ಸಂಪರ್ಕಿಸಿ ಸ್ಪರ್ಧೆಯ ಮಾಹಿತಿ ಪಡೆಯಬಹುದು ಎಂದರು.

# ಸುತ್ತೂರು ಜಾತ್ರಾ ಮಹೋತ್ಸವದ ರಥಯಾತ್ರೆಗೆ ತರಳಬಾಳು ವಿದ್ಯಾ ಸಂಸ್ಥೆಯ ವಿದ್ಯಾರ್ಥಿನಿಯರಿಂದ ಭವ್ಯ ಸ್ವಾಗತ




**ನ್ಯಾಮತಿ :** ಶ್ರೀ ಮತ್ತ್ಯೋಸ್ತುರ ಜಗದ್ಗುರು ಶ್ರೀ ವೀರಸಿಂಹಾಸನ ಮಠ, ಸುತ್ತೂರು ಶ್ರೀ ಕ್ಷೇತ್ರದ ಪರಮ ಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ಶಿವಯೋಗಿಗಳವರ ದಿವ್ಯ ಸಾನಿಧ್ಯದಲ್ಲಿ ನಡೆಯಲಿರುವ ಸುತ್ತೂರು ಜಾತ್ರಾ ಮಹೋತ್ಸವದ ಅಂಗವಾಗಿ ಹೊರಟ ಪ್ರಚಾರದ ರಥಯಾತ್ರೆಗೆ ಶನಿವಾರ ನ್ಯಾಮತಿ ತಾಲೂಕಿನ ದಾನಿಹಳ್ಳಿ ಗ್ರಾಮದ ಹೊರವಲಯದಲ್ಲಿರುವ ತರಳಬಾಳು ವಿದ್ಯಾ ಸಂಸ್ಥೆಯ ವಿದ್ಯಾರ್ಥಿನಿಯರು ಭವ್ಯ ಸ್ವಾಗತ ನೀಡಿದರು.

# ದಿ. ಡಿ.ಎಸ್.ಚಂದ್ರೇಗೌಡ ಅವರಿಗೆ ಶ್ರದ್ಧಾಂಜಲಿ ಅರ್ಪಣೆ

**ಚಿಕ್ಕಮಗಳೂರು:** ಕಾಂಗ್ರೆಸ್ ಮುಖಂಡಡಿ. ಎಸ್.ಚಂದ್ರೇಗೌಡಅವರ ಅಕಾಲಿಕ ನಿಧನದಿಂದ ಪಕ್ಷ ಹಾಗೂ ಸಮಾಜಕ್ಕೆ ನಷ್ಟ ಉಂಟಾಗಿದೆ. ಅವರು ಹಣವಷ್ಟೇಅಲ್ಲದೆಜನರನ್ನೂ ಸಂಪಾದನೆ ಮಾಡಿದ್ದರುಎಂದು ವಿಧಾನ ಪರಿಷತ್ ಮಾಜಿ ಉಪ ಸಭಾಪತಿ ಬಿ.ಎಲ್.ಶಂಕರ್ ಹೇಳಿದರು.

ಇತ್ತೀಚಿಗೆ ಅಪಘಾತದಲ್ಲಿ ನಿಧನರಾಗಿದ್ದಡಿ.ಎಸ್.ಚಂದ್ರೇಗೌಡ ಸೇರಿದಂತೆಅವರ ಪತ್ನಿ ಸರೋಜ ಹಾಗೂ ಸಂಬಂಧಿಜಯಲಕ್ಷ್ಮಿಅವರಿಗೆ ನಗರದ ಕನಕ ಸಮುದಾಯ ಭವನದಲ್ಲಿಜಿಲ್ಲಾಕುರುಬರ ಸಂಘ, ತಾಲ್ಲೂಕುಕುರುಬರ ಸಂಘ, ನಾಗರೀಕ ವೇದಿಕೆ, ಜಿಲ್ಲಾ ಸಂಗೋಳಿ ರಾಯಣ್ಣ ವೇದಿಕೆ, ಕನಕಶ್ರೀ ಹಾಗೂ ವಿವಿಧಕನ್ನಡಪರ ಸಂಘಟನೆಗಳ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ನುಡಿನಮನಕಾರ್ಯಕ್ರಮದಲ್ಲಿಅವರು ಮಾತನಾಡಿದರು.

ನಗರಸಭೆ ಮಾಜಿ ಸದಸ್ಯರು, ಸಿಡಿಎ ಮಾಜಿಅಧ್ಯಕ್ಷರೂಆಗಿದ್ದಚಂದ್ರೇಗೌಡಅವರು, ರಾಜಕಾರಣದಲ್ಲಿ ಬಹಳ ದೊಡ್ಡ ನಿರೀಕ್ಷೆಇಟ್ಟುಕೊಂಡಿದ್ದವರಲ್ಲ. ಆದರೆ, ಪಕ್ಷಕ್ಕಾಗಿ ಶ್ರಮಿಸಿದ್ದರು. ಯಾವುದೇಚುನಾವಣೆ ಸಂದರ್ಭದಲ್ಲಿ ಪಕ್ಷದ ಗೆಲುವಿಗೆ ಕೆಲಸ ಮಾಡುತ್ತಿದ್ದರು. ಅಷ್ಟೇ ಅಲ್ಲದೆಎಲ್ಲಾ ಪಕ್ಷದಲ್ಲೂಅವರ ವಿಶ್ವಾಸಿಗಳಿದ್ದರು ಎಂದು ಹೇಳಿದರು.

ಚಂದ್ರೇಗೌಡ ಅವರು, ರಾಜಕಾರಣಿಯಾಗಿಅಜಾತ ಶತೃವಾಗಿಜೀವನ ರೂಪಿಸಿಕೊಂಡಿದ್ದರು. ಆದರೆ, ಅನಿರೀಕ್ಷಿತಘಟನೆಯಲ್ಲಿಅವರು ಪತ್ನಿ ಹಾಗೂ ಸಂಬಂಧಿ ಸಮೇತ ನಮ್ಮನ್ನಗಲಿದ್ದಾರೆ. ಅವರಿಗೆದೇವರುಚಿರಶಾಂತಿಕರುಣಿಸಲಿ, ಕುಟುಂಬದವರಿಗೆದುಃಖ ಭರಿಸುವ ಶಕ್ತಿ ನೀಡಲಿ ಎಂದುಕೋರಿದರು.



ಶಾಸಕ ಎಚ್.ಡಿ.ತಮ್ಮಯ್ಯ ಮಾತನಾಡಿ, ಚಂದ್ರೇಗೌಡಅವರಅಗಲಿಕೆಯಿಂದಅವರಕುಟುಂಬಕ್ಕಷ್ಟೇಅಲ್ಲದೆಇಡೀಕುರುಬ ಸಮಾಜ ಹಾಗೂ ಜಿಲ್ಲೆಯಜನತೆಗೆ ಹಾಗೂ ಕಾಂಗ್ರೆಸ್ ಪಕ್ಷಕ್ಕೆದೊಡ್ಡ ನಷ್ಟ ಉಂಟಾಗಿದೆ. ಚಂದ್ರೇಗೌಡಅವರ ಮಾತು ನಿಷ್ಠುರವಾಗಿರುತ್ತಿತ್ತು. ಆದರೆಅವರ ಹೃದಯ ಅಷ್ಟೇ ಮೃದುವಾಗಿತ್ತು. ನಗರಸಭೆ ಸದಸ್ಯರಾಗಿಅವಿರೋಧವಾಗಿಆಯ್ಕೆಯಾದ ಮೊಟ್ಟ ಮೊದಲ ವ್ಯಕ್ತಿಚಂದ್ರೇಗೌಡರಾಗಿದ್ದರು. ಸಮಾಜ ಹಾಗೂ ಪಕ್ಷದ ನಡುವೆ ಸಮಾಜಮುಖಿಯಾಗಿ ಕೆಲಸ ಮಾಡಿದ ಪರಿಣಾಮಅಪಾರಜನ ಬೆಂಬಲವನ್ನು ಪಡೆದಿದ್ದರುಎಂದರು.

ವಿಧಾನ ಪರಿಷತ್ ಸದಸ್ಯ ಎಸ್. ಎಲ್.ಬೋಜೇಗೌಡ ಮಾತನಾಡಿ, ಚಂದ್ರೇಗೌಡಅವರು ನೇರನುಡಿಯ ವ್ಯಕ್ತಿ. ಅವರ ಮನಸಿನಲ್ಲಿ ಕಲ್ಮಷಇರಲಿಲ್ಲ. ಯಾವುದೇ ಕೆಲಸವನ್ನುವಹಿಸಿದರೂ ಜವಾಬ್ದಾರಿಯಿಂದ ನಿರ್ವಹಿಸುತ್ತಿದ್ದರು. ಅವರ ಅಕಾಲಿಕ ಅಗಲಿಕೆ ತೀವ್ರದುಃಖತಂದಿದೆಎಂದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ, ಮಾಜಿ ಸದಸ್ಯೆಗಾಯತ್ರಿ ಶಾಂತೇಗೌಡ, ಜಿಲ್ಲಾಕುರುಬರ ಸಂಘದಅಧ್ಯಕ್ಷ ಕೆ.ಎಸ್.ಶಾಂತೇಗೌಡ, ಪ್ರಧಾನ ಕಾರ್ಯದರ್ಶಿ ಹಂಪಾಪುರ ಪುಟ್ಟೇಗೌಡ, ತಾಲ್ಲೂಕುಕುರುಬರ ಸಂಘದಅಧ್ಯಕ್ಷ ಮಣೇನಹಳ್ಳಿ ರಾಜು, ಮುಖಂಡರುಗಳಾದ ಡಾ. ಡಿ.ಎಲ್.ವಿಜಯಕುಮಾರ್, ಎಂ.ಎಲ್. ಮೂರ್ತಿ, ಎಚ್.ಎಚ್.ದೇವರಾಜ್, ಕೆ.ಟಿ.ರಾಧಾಕೃಷ್ಣ, ಎ.ಎನ್.ಮಹೇಶ್. ನಗರಸಭೆಅಧ್ಯಕ್ಷೆಶೀಲಾದಿನೇಶ್‌ಲಾಯರ್ ಪುಟ್ಟೇಗೌಡ, ಹಂಪಾಪುರ ಮಂಜೇಗೌಡಇತರರು ಭಾಗವಹಿಸಿದ್ದರು.

# ಅದ್ದೂರಿ ಉಮಾ ಮಹೇಶ್ವರ ಜಾತ್ರೆ

**ದಾವಣಗೆರೆ:** ತಾಲ್ಲೂಕಿನ ನಾಗನೂರು ಗ್ರಾಮದಲ್ಲಿ ಡಿ.15 ರಿಂದ 17 ರವರೆಗೆ 3 ದಿನಗಳ ಕಾಲ ಶ್ರೀ ಉಮಾ ಮಹೇಶ್ವರ ಜಾತ್ರೆ ವಿಜೃಂಭಣೆಯಿಂದ ಜರುಗಲಿದೆ.

ನಾಗನೂರು ಮತ್ತು ಶಿರಮಗೊಂಡನಹಳ್ಳಿ ಗ್ರಾಮದ ಭಕ್ತಾದಿಗಳಿಂದ 3 ದಿನಗಳ ಕಾಲ ನಡೆಯಲಿರುವ ಜಾತ್ರೆಗಾಗಿ ನಾಗನೂರು ಗ್ರಾಮ ತಳಿರು ತೋರಣ, ವಿದ್ಯುತ್ ದೀಪಾಲಂಕಾರದಿಂದ ಕಂಗೊಳಿಸುತ್ತಿದೆ. ಡಿ.15 ರ ನಾಳೆ ಬೆಳಗ್ಗೆ 6 ಕ್ಕೆ ಶ್ರೀ ಉಮಾ ಮಹೇಶ್ವರ ಮತ್ತು ಶ್ರೀ ಆಂಜನೇಯ ಸ್ವಾಮಿಗೆ ರುದ್ರಾಭಿಷೇಕ, ಸಾಯಂಕಾಲ ಭಕ್ತರಿಂದ ಜವಳ, ಹರಕೆ ಅರ್ಪಿಸುವುದು ಮತ್ತು ಕಾರ್ತಿಕ ಕದಳಿ ಮಂಟಪದಲ್ಲಿ ಶ್ರೀ ಉಮಾ ಮಹೇಶ್ವರ ಮತ್ತು ಶ್ರೀ ಆಂಜನೇಯ ಸ್ವಾಮಿ ಪವಡಿಸಲಿವೆ.ನಂತರ ಶಿರಮಗೊಂಡನಹಳ್ಳಿಯ ಶ್ರೀ ಚನ್ನಬಸವೇಶ್ವರ ಸ್ವಾಮಿಯನ್ನು ಡೊಳ್ಳು-ಮೇಳಗಳಿಂದ ನಾಗನೂರು ಗ್ರಾಮಸ್ಥರು ಬರಮಾಡಿಕೊಂಡು ಮೆರವಣಿಗೆ ಸಮೇತ ವಿರಾಮ ಮಂಟಪದಲ್ಲಿ ಪವಡಿಸುವುವು ಅದೇ ದಿನ ರಾತ್ರಿ ಕೋಲಾಟ, ವೀರಗಾಸೆ, ಭಜನೆ ಇತ್ಯಾದಿ ನಡೆಯಲಿವೆ. 16 ರಂದು ಉರುಳು ಸೇವೆ, ಸ್ವಾಮಿಯನ್ನು ನಡೆ ಮಡಿಯಿಂದ ತೋಟದ ಮಠಕ್ಕೆ ಕರೆದೊಯ್ಯುವುದು. ನಂತರ ಗಂಗಪೂಜೆ, ಪ್ರಸಾದ ವಿನಿಯೋಗ, ಮಧ್ಯಾಹ್ನ ಬೆಲ್ಲದ ಬಂಡಿ ಎತ್ತುಗಳನ್ನು ಡೊಳ್ಳು-ಹಲಗೆ ಮೆರವಣಿಗೆ ಮತ್ತು ರಾತ್ರಿ 7 ರಿಂದ ಶ್ರೀ ದುರುಗಮ್ಮನ ಕಾರ್ತಿಕೋತ್ಸವ ಜರುಗಲಿದೆ.ಡಿ. 17 ರಂದು ಬೆಳಿಗ್ಗೆ 8 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ಮಠದಲ್ಲಿ ಪ್ರಸಾದ ವಿನಿಯೋಗ, ಮಧ್ಯಾಹ್ನ ಎತ್ತುಗಳ ಮೆರವಣಿಗೆ, ಸಂಜೆ ಮುಡುಪು, ಹರಕೆಯನ್ನು ತೋಟದ ಮಠಕ್ಕೆ ಮೆರದಣಿಗೆ ಮುಖಾಂತರ ಅರ್ಪಿಸುವುದು ಮತ್ತು ಮಠದ ಗದ್ದಿಗೆಯಿಂದ ಸ್ವಾಮಿಯನ್ನು ಗ್ರಾಮಸ್ಥರೆಲ್ಲರೂ ಸೇರಿ ಅದ್ದೂರಿಯ ಮೆರವಣಿಗೆಯೊಂದಿಗೆ ಊರೊಳಗೆ ಬರಮಾಡಿಕೊಳ್ಳುವುದು. ನಂತರ ಬಾವುಟ ಹರಾಜು ಮೊದಲಾದ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ ಎಂದು ಶ್ರೀ ಉಮಾ ಮಹೇಶ್ವರ ಸೇವಾ ಟ್ರಸ್ಟ್ ಪ್ರಕಟಣೆ ತಿಳಿಸಿದೆ.

### ವಿಭಾಗೀಯ ನೂತನ ಕಾನೂನು ಅಧಿಕಾರಿ (ಹಿರಿಯ) ಕಚೇರಿ ಉದ್ಘಾಟಿಸಿದ ಐಜಿಪಿ ವರ್ತಿಕಾ ಕಟಿಯಾರ್

# ಅಪರಾಧ ನ್ಯಾಯ ವ್ಯವಸ್ಥೆಯಲ್ಲಿ ಅಭಿಯೋಜಕರ ಪಾತ್ರ ಬಹುಮುಖ್ಯವಾದುದು

**ಬಳ್ಳಾರಿ:** ಅಪರಾಧ ನ್ಯಾಯ ವ್ಯವಸ್ಥೆಯಲ್ಲಿ ಅಭಿಯೋಜಕರ ಪಾತ್ರ ಬಹುಮುಖ್ಯವಾಗಿದೆ ಎಂದು ಬಳ್ಳಾರಿ ವಲಯ ಪೊಲೀಸ್ ಉಪ ಮಹಾನಿರೀಕ್ಷಕರಾದ ವರ್ತಿಕಾ ಕಟಿಯಾರ್ ಅವರು ಹೇಳಿದರು.

ಶನಿವಾರ, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ, ಬೆಂಗಳೂರು ಇವರ ಆಶ್ರಯದಲ್ಲಿ ನಗರದ ಹಳೆಯ ನ್ಯಾಯಾಲಯ ಆವರಣದ ಅಭಿಯೋಜಕ ಭವನದಲ್ಲಿ ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ನೂತನ ಕಾನೂನು ಅಧಿಕಾರಿ (ಹಿರಿಯ) ಯವರ ಬಳ್ಳಾರಿ ವಿಭಾಗೀಯ ಕಚೇರಿಯ ಉದ್ಘಾಟನೆ ನೆರವೇರಿಸಿ ಬಳಿಕ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಭಿಯೋಜಕರು ಮತ್ತು ತನಿಖಾಧಿಕಾರಿಗಳ ನಡುವೆ ಸಮನ್ವಯತೆ ಸಾಧಿಸಬೇಕು. ತನಿಖಾಧಿಕಾರಿಗಳು ಯಾವ ರೀತಿಯಾಗಿ ದೋಷರೋಪಣಾ ಪಟ್ಟಿ ತಯಾರಿಸಬೇಕು. ಅದಕ್ಕಿರುವ ಕಾನೂನು ಕ್ರಮ ಹಾಗೂ ಇತರೆ ಕುರಿತಂತೆ ಪೊಲೀಸ್ ಇಲಾಖೆಯ ಅಧಿಕಾರಿಗಳೊಂದಿಗೆ ಕಾನೂನು ಹಿರಿಯ ಅಧಿಕಾರಿಗಳು ಚರ್ಚಿಸಿದ್ದು, ಮುಂದೆಯೂ ನಿರಂತರ ಚರ್ಚಿಸುವರು. ಇದರಿಂದ ಜನಸಾಮಾನ್ಯರಿಗೆ ನ್ಯಾಯ ದೊರಕಿಸಲು ಅಭಿಯೋಜಕರ ಪಾತ್ರದೊಂದಿಗೆ ಪರಿಣಾಮಕಾರಿಯಾಗಿ ಸಾಧ್ಯವಾಗಲಿದೆ ಎಂದು ಹೇಳಿದರು.



ಡಾ.ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಮಾತನಾಡಿ, ಪ್ರಸ್ತುತದ ರಾಜ್ಯ ಸರ್ಕಾರವು ಅಸ್ತಿತ್ವಕ್ಕೆ ಬಂದಮೇಲೆ ಕಾನೂನು ವ್ಯವಸ್ಥೆಯಲ್ಲಿ ಹಲವಾರು ಬದಲಾವಣೆಗಳನ್ನು ಜಾರಿಗೊಳಿಸಲಾಗಿದೆ. ಸಂತ್ರಸ್ತರು ಇರುವಲ್ಲಿಯೇ ನ್ಯಾಯ ಅವರ ಹತ್ತಿರವಾಗುತ್ತಿದೆ ಎಂದು ಹೇಳಿದರು.

ಈ ಹಿಂದೆ ಪೊಲೀಸ್ ಮತ್ತು ಸಾರ್ವಜನಿಕರ ಮಧ್ಯೆ ಬಹಳಷ್ಟು ಅಂತರವಿತ್ತು. ಈಗ ಯಾವುದೇ ಪ್ರಕರಣವಿರಲಿ ತ್ವರಿತವಾಗಿ ಪತ್ತೆಮಾಡಿ ಇತ್ಯರ್ಥಗೊಳಿಸುವ ಮೂಲಕ ಪೊಲೀಸ್ ಇಲಾಖೆಯು ಸಾರ್ವಜನಿಕರೊಂದಿಗೆ ಉತ್ತಮ ಭಾಂದವ್ಯ ಹೊಂದಿ ಜನಸ್ನೇಹಿ ಆಡಳಿತ ಸೇವೆ ನೀಡುತ್ತಿದೆ ಎಂದು ಅಭಿಮತ ವ್ಯಕ್ತಪಡಿಸಿದರು.

ನೊಂದ ಜನರಿಗೆ ಸಂತ್ವಾನದ ಮಾತು ಮುಖ್ಯ. ಯಾವುದೇ ಪ್ರಕರಣ ಕೋರ್ಟ್ ಮೆಟ್ಟಿಲೇರುವ ಮೊದಲೇ ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಬೇಕು. ಅಪರಾಧಿಗೆ ಶಿಕ್ಷೆಯಾದಾಗ ಮಾತ್ರ ಭಯ ಬರಲಿದೆ. ಅಪರಾಧಿಯೊಬ್ಬ ಶಿಕ್ಷೆಯಿಂದ ತಪ್ಪಿಸಿಕೊಳ್ಳುವಂತೆ ಆಗಬಾರದು. ಸಂತ್ರಸ್ತರಿಗೆ ನ್ಯಾಯ ಒದಗಿಸುವುದು ಅಭಿಯೋಜಕರ ಕರ್ತವ್ಯವಾಗಿದೆ ಎಂದು ಕಿವಿಮಾತು ಹೇಳಿದರು.

ಬಳ್ಳಾರಿ ಮಹಾನಗರ ಪಾಲಿಕೆ ಮೇಯರ್ ಪಿ.ಗಾದೆಪ್ಪ ಅವರು ಮಾತನಾಡಿ, ವಕೀಲರು ಮತ್ತು ಕಕ್ಷಿದಾರರು ಪಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ನೂತನ ಕಾನೂನು ಅಧಿಕಾರಿ (ಹಿರಿಯ) ಯವರ ಬಳ್ಳಾರಿ ವಿಭಾಗೀಯ ಕಚೇರಿಯು ನಾಲ್ಕು ಜಿಲ್ಲೆಗಳಿಗೆ ಕೇಂದ್ರಸ್ಥಾನವಾಗಿ ಆರಂಭಗೊಂಡಿರುವುದು ನಮ್ಮ ಜಿಲ್ಲೆಯ ಸೌಭಾಗ್ಯವಾಗಿದೆ. ಇಲಾಖೆಗೆ ಬೇಕಾದ ಸೌಲಭ್ಯಗಳನ್ನು ಮಹಾನಗರ ಪಾಲಿಕೆಯಿಂದ ಒದಗಿಸಿಕೊಡಲಾಗುವುದು ಎಂದು ಹೇಳಿದರು.

ಬಳ್ಳಾರಿ ವಿಭಾಗೀಯ ಕಚೇರಿಯ ನೂತನ ಕಾನೂನು ಅಧಿಕಾರಿ(ಹಿರಿಯ) ಬಿ.ಎಸ್.ಪಾಟೀಲ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಜಿಲ್ಲೆಗೆ ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ನೂತನ ಕಾನೂನು ಅಧಿಕಾರಿ (ಹಿರಿಯ) ಯವರ ಬಳ್ಳಾರಿ ವಿಭಾಗೀಯ ಕಚೇರಿಯು 2022 ರಲ್ಲಿಯೇ ಕಲಬುರಗಿ ವಿಭಾಗದಿಂದ ಬೇರ್ಪಟ್ಟು ಬಳ್ಳಾರಿ, ವಿಜಯನಗರ, ಕೊಪ್ಪಳ ಮತ್ತು ರಾಯಚೂರು ಜಿಲ್ಲೆಗಳು ಒಳಗೊಂಡು ವಿಭಾಗೀಯ ಕಚೇರಿ ಮಂಜೂರಾಗಿತ್ತು. ಸ್ಥಳದ ಕೊರತೆಯಿಂದ ಆರಂಭಗೊಂಡಿರಲಿಲ್ಲ. ಅದು ಈಗ ಕೂಡಿಬಂದಿದ್ದು, ನಾಲ್ಕು ಜಿಲ್ಲೆಗಳ ವಿಶೇಷಾಸಕ್ತಿ ವಹಿಸಲು ಸರ್ಕಾರ ಅವಕಾಶ ನೀಡಿದೆ ಎಂದು ಗಣ್ಯರನ್ನು ಸ್ವಾಗತಿಸಿದರು.

ಬಳಿಕ ಕಾರ್ಯಕ್ರಮದಲ್ಲಿ 'ನೊಂದವರಿಗೆ ನ್ಯಾಯ' ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಲಾಯಿತು. 'ನ್ಯಾಯ ಜ್ಯೋತಿ' ಸ್ಮರಣ ಸಂಚಿಕೆ ಬಿಡುಗಡೆ ಮಾಡಲಾಯಿತು ಮತ್ತು ಬಳ್ಳಾರಿ ವಿಭಾಗೀಯ ಕಚೇರಿಯ ವೆಬ್ ಸೈಟ್ ಗೆ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ಬಳ್ಳಾರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಕೊಪ್ಪಳ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ ಅರಸಿದ್ಧಿ, ವಿಜಯನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜಾಹ್ನವಿ., ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ಜಂಟಿ ನಿರ್ದೇಶಕ ರಮೇಶ್ ಬಾಬು, ಲೋಕೋಪಯೋಗಿ ಇಲಾಖೆ ವಿಭಾಗದ ಕಾರ್ಯಪಾಲಕ ಅಭಿಯಂತರ ಹೇಮರಾಜ.ಕೆ., ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ರಾಮಬ್ರಹ್ಮಂ ಸೇರಿದಂತೆ ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯ ಅಧಿಕಾರಿಗಳು, ವಕೀಲರು ಸೇರಿದಂತೆ ಇತರರು ಉಪಸ್ಥಿತರಿದ್ದರು.

### ರಾಜ್ಯ ಮಟ್ಟದ ಪದವಿ ಪೂರ್ವ ಕಾಲೇಜುಗಳ ಹಾಕಿ ಪಂದ್ಯಾವಳಿಗಳಿಗೆ ಮೇಯರ್ ಪಿ.ಗಾದೆಪ್ಪ ಚಾಲನೆ

# ವಿದ್ಯಾಭ್ಯಾಸದ ಜೊತೆಗೆ ಕ್ರೀಡಾಸಕ್ತಿ ಬೆಳೆಸಿಕೊಳ್ಳಲು ಸಲಹೆ

**ಬಳ್ಳಾರಿ:** ಈಗಿನ ಯುವ ಸಮುದಾಯ ತಮ್ಮ ವಿದ್ಯಾಭ್ಯಾಸದ ಜೊತೆಗೆ ಕ್ರೀಡಾಸಕ್ತಿ ಬೆಳೆಸಿಕೊಳ್ಳಬೇಕು. ಇದಕ್ಕೆ ಪೋಷಕರು ಕೂಡ ಪ್ರೋತ್ಸಾಹಿಸಬೇಕು ಎಂದು ಮಹಾನಗರ ಪಾಲಿಕೆಯ ಮಹಾಪೌರರಾದ ಪಿ. ಗಾದೆಪ್ಪ ಅವರು ಹೇಳಿದರು.

ಶಾಲಾ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು ಮತ್ತು ಬಳ್ಳಾರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬಳ್ಳಾರಿ ಮತ್ತು ವಿಜಯನಗರ ಜಿಲ್ಲಾ ಪ್ರಾಂಶುಪಾಲರ ಸಂಘ, ಸೇಂಟ್ ಜಾನ್ಸ್ ಪದವಿ ಪೂರ್ವ ಕಾಲೇಜು ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಹಾಕಿ ಕ್ರೀಡಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಎರಡು ದಿನಗಳ 2025-26 ರ ರಾಜ್ಯ ಮಟ್ಟದ ಪದವಿ ಪೂರ್ವ ಕಾಲೇಜುಗಳ ಹಾಕಿ ಪಂದ್ಯಾವಳಿಗಳಿಗೆ ಕ್ರೀಡಾ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ರಾಜ್ಯಮಟ್ಟದ ಪದವಿಪೂರ್ವ ಕಾಲೇಜುಗಳ ಹಾಕಿ ಪಂದ್ಯಾವಳಿಗಳು ನಮ್ಮ ಜಿಲ್ಲೆಯಲ್ಲಿ ಆಯೋಜಿಸಿರುವುದು ಹೆಮ್ಮೆಯ ಸಂಗತಿಯಾಗಿದೆ. ವಿದ್ಯಾರ್ಥಿಗಳು ಕ್ರೀಡಾ ಮನೋಭಾವನೆಯಿಂದ ಕ್ರೀಡೆಗಳಲ್ಲಿ ಭಾಗವಹಿಸಬೇಕು. ಸೋಲು-ಗೆಲುವು ಮುಖ್ಯವಲ್ಲ ಎಂದು ತಿಳಿಸಿದರು.

ನಮ್ಮ ರಾಜ್ಯಕ್ಕೆ ಕೀರ್ತಿ ತರಬೇಕು ಎಂದು ಕ್ರೀಡಾಪಟುಗಳನ್ನು ಆಶಿಸಿದರು.ಈ ಸಂದರ್ಭದಲ್ಲಿ ಗಣ್ಯರು ವಿವಿಧ ಜಿಲ್ಲೆಗಳಿಂದ ಆಗಮಿಸಿದ ಕ್ರೀಡಾಪಟುಗಳ ತಂಡದ ಮುಖ್ಯಸ್ಥರನ್ನು ಪರಿಚಯ ಮಾಡಿಕೊಂಡರು. ಬಳಿಕ ಕ್ರೀಡಾ ಪ್ರತಿಜ್ಞಾ ವಿಧಿ ಸ್ವೀಕರಿಸಲಾಯಿತು. ರಾಜ್ಯಮಟ್ಟದ ಪದವಿಪೂರ್ವ ಕಾಲೇಜುಗಳ ಹಾಕಿ ಪಂದ್ಯಾವಳಿಗಳು ಡಿ.14 ರವರೆಗೆ ನಡೆಯಲಿವೆ. ಅಂದು ಸಂಜೆ ಸಮಾರೋಪ ಸಮಾರಂಭ ನಡೆಯಲಿದೆ.

ಈ ವೇಳೆ ಬಳ್ಳಾರಿ ಜಿಲ್ಲಾ ಪ್ರಾಂಶುಪಾಲರ ಸಂಘದ ಅಧ್ಯಕ್ಷ ಹೆಚ್.ಎಸ್ ಶಿವರಾಮ್, ಉಪಧ್ಯಾಕ್ಷರಾದ ಬಿ.ಸುಲೇಖ, ಸೇಂಟ್ ಜಾನ್ಸ್ ಸಂಸ್ಥೆಗಳ ಆಡಳಿತ ಮಂಡಳಿಯ ಫಾ.ಫ್ರಾನ್ಸಿಸ್, ವಿಜಯನಗರ ಜಿಲ್ಲಾ ಪ್ರಾಂಶುಪಾಲರ ಸಂಘದ ಅಧ್ಯಕ್ಷ ನಾಗರಾಜ್ ಹವಾಲ್ದಾರ್, ಕಾರ್ಯಾಧ್ಯಕ್ಷ ಎಂ. ಶ್ರೀಶೈಲ, ಕಾರ್ಯದರ್ಶಿ ಪಿ.ನಾಗೇಶ್ವರ ರಾವ್,

ಜಿಲ್ಲಾ ಉಪನ್ಯಾಸಕರ ಸಂಘ ಅಧ್ಯಕ್ಷ ಎಂ.ರಾಜಣ್ಣ, ಕರ್ನಾಟಕ ರಾಜ್ಯ ದೈಹಿಕ ಶಿಕ್ಷಣ ಉಪನ್ಯಾಸಕರ ಸಂಘ ಅಧ್ಯಕ್ಷ ಟಿ.ಆರ್ ಬಸವರಾಜು, ಜಿಲ್ಲಾ ದೈಹಿಕ ಶಿಕ್ಷಣ ಅಧಿಕಾರಿ ಸಿ.ಕೊಟ್ರೇಶ್, ಕಲಬುರಗಿಯ ಕಲ್ಯಾಣ ಕರ್ನಾಟಕ ದೈಹಿಕ ಶಿಕ್ಷಣ ಉಪನ್ಯಾಸಕರ ಸಂಘದ ಕಾರ್ಯದರ್ಶಿ ತಿರುಪತಿ ನಾಯಕ, ರಾಜ್ಯ ಮಟ್ಟ ಹಾಕಿ ಪಂದ್ಯಾವಳಿ ಸಂಘಟನಾ ಕಾರ್ಯದರ್ಶಿ ಹಾಗೂ ಬಳ್ಳಾರಿ ಸೇಂಟ್ ಜಾನ್ಸ್ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ಹೆಚ್.ಎಸ್.ಶಿವರಾಮ್ ಸೇರಿದಂತೆ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಪ್ರಾಂಶುಪಾಲರು, ಉಪನ್ಯಾಸಕರು, ಬೋಧಕೇತರ ವರ್ಗ, ಸ್ವಯಂ-ಸೇವಕರು, ಪೋಷಕರು, ಸಾರ್ವಜನಿಕರು ಹಾಗೂ ಇತರರು ಉಪಸ್ಥಿತರಿದ್ದರು.

# ಕಾಂಗ್ರೆಸ್ ಮುಖಂಡೆ ಸವಿತಾಬಾಯಿ ಮಲ್ಲೇಶ್ ನಾಯ್ಕ್‌ಗೆ ಜಾಮೀನು

**ದಾವಣಗೆರೆ:** ಕೊಲೆ ಮಾಡಲು ಯತ್ನಿಸಿದ ಆರೋಪಿಗೆ ಸಹಾಯ ಮಾಡಿದ ಹಿನ್ನೆಲೆಯಲ್ಲಿ ಬಂಧನವಾಗಿದ್ದ ಕಾಂಗ್ರೆಸ್ ಮುಖಂಡೆ ಸವಿತಾಬಾಯಿ ಮಲ್ಲೇಶ್ ನಾಯ್ಕ್ ಅವರಿಗೆ ದಾವಣಗೆರೆ ನಾಲ್ಕನೇ ಜೆಎಂಎಫ್ಸಿ ನ್ಯಾಯಾಲಯ ಜಾಮೀನು ನೀಡಿದೆ.

ದಾವಣಗೆರೆ ಅಜಾದ್ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಳೆದ ನ.10 ರಂದು ಜೆಡಿಎಸ್ ಮುಖಂಡ ಟಿ.ಅಸ್ಗರ್ ಕಾರ್ಯಕ್ರಮ ಮುಗಿಸಿಕೊಂಡು ಬರುತ್ತಿದ್ದಾಗ ಅವನ ಕೊಲೆ ಯತ್ನ ನಡೆದಿದ್ದು, ಅದರ ಪ್ರಮುಖ ಆರೋಪಿಯಾದ ಖಾಲೀದ್ ಪೈಲ್ವಾನ್ ಎಂಬುವವನು ತಲೆಮರಿಸಿಕೊಂಡಿದ್ದ. ಸವಿತಾ ಬಾಯಿ ಆರೋಪಿ ಖಾಲೀದ್ ಪೈಲ್ವಾನ್‌ಗೆ ತಲೆ ಮರೆಸಿಕೊಳ್ಳಲು ಹಣಕಾಸಿನ ನೆರವು ನೀಡಿ, ಆತನೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಆತನಿಗೆ ಆಶ್ರಯ ನೀಡಿದ ಆರೋಪದಡಿ ದಾವಣಗೆರೆಯ ಆಜಾದ್ ನಗರ ಪೊಲೀಸರು ಸವಿತಾ ಬಾಯಿಯನ್ನು ಬಂಧಿಸಿದ್ದು 14 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದರು.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ನಾಲ್ಕನೇ ಜೆಎಂಎಫ್ಸಿ ನ್ಯಾಯಾಲಯ ಸವಿತಾ ಬಾಯಿ ಮಲ್ಲೇಶ್ ನಾಯ್ಕ ಅವರಿಗೆ ಜಾಮೀನು ನೀಡಿದೆ. ಆದರೆ ಟಿ.ಅಸ್ಗರ್ ಮೇಲೆ ಕೊಲೆ ಯತ್ನ ನಡೆಸಿದ ಪ್ರಮುಖ ಆರೋಪಿಗಳು ಇಂದಿಗೂ ನಾಪತ್ತೆಯಾಗಿದ್ದು ಪೊಲೀಸರು ಹುಡುಕಾಟ ನಡೆಸುತ್ತಿದ್ದಾರೆ.

# ಏಕ ನಿವೇಶನದ ಆಕ್ಷೇಪಣೆ ಬಗ್ಗೆ ತನಿಖಾ ತಂಡ ರಚಿಸಲು ಜಿಲ್ಲಾಧಿಕಾರಿಗಳಿಗೆ ಶಿಫಾರಸ್ಸು ಮಾಡಲಾಗಿದೆ: ದೂಡ ಅಧ್ಯಕ್ಷ

**ದಾವಣಗೆರೆ:** ಶಾಬನೂರು ಗ್ರಾಮದ ರಿಸನಂ: 127/1ಎ, 1ಎ2ರಲ್ಲಿನ ಸ್ವಾಮಿ ವಿವೇಕಾನಂದ ಬಡಾವಣೆಯ ಜಾಗದಲ್ಲಿ ಏಕ ನಿವೇಶನ ಅನುಮೋದನ ಕುರಿತಂತೆ ಇರುವ ಆಕ್ಷೇಪಣೆ ಬಗ್ಗೆ ಕಂದಾಯ ಇಲಾಖೆ, ಸರ್ವೇ ಇಲಾಖೆ ಮತ್ತು ನಗರ ಯೋಜನಾ ಇಲಾಖೆ, ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರ ಹಾಗೂ ಮಹಾನಗರ ಪಾಲಿಕೆಯವರಿಂದ ತನಿಖಾ ತಂಡವನ್ನು ರಚಿಸಲು ಜಿಲ್ಲಾಧಿಕಾರಿಗಳಿಗೆ ಶಿಫಾರಸ್ಸು ಮಾಡಲಾಗಿದೆ ಎಂದು ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ್.ಕೆ.ಶೆಟ್ಟಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇದೇ ಡಿಸೆಂಬರ್ 11ರಂದು ಪ್ರಾಧಿಕಾರದ ಅಧಿಕಾರಿಗಳು, ಸಿಬ್ಬಂದಿಗಳ ಸಭೆ ಕರೆದು ಈ ತೀರ್ಮಾನ ಕೈಗೊಳ್ಳಲಾಗಿದ್ದು, 1984ರಿಂದ ಇಲ್ಲಿಯವರೆಗೂ ಈ ನಿವೇಶನಕ್ಕೆ ಸಂಬಂಧಿಸಿದಂತೆ ಸಂಪೂರ್ಣ ತನಿಖೆ ನಡೆಸಬೇಕೆಂದು ಜಿಲ್ಲಾಧಿಕಾರಿಗಳಲ್ಲಿ ಮನವಿ ಮಾಡಲಾಗಿದೆ. ತನಿಖೆಯಲ್ಲಿ ಯಾವುದೇ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ತಪ್ಪಿತಸ್ಥರು ಎಂದು ಕಂಡು ಬಂದಲ್ಲಿ ಅಂತಹವರ ವಿರುದ್ಧ ನಿಯಮಾನುಸಾರ ಕಾನೂನತ್ಮಾಕವಾಗಿ ಶಿಸ್ತು ಕ್ರಮ ಕೈಗೊಳ್ಳಲು ಕೋರಲಾಗಿದೆ ಎಂದರು.

ಆದಾಗ್ಯೂ ಪ್ರಾಧಿಕಾರದಿಂದ ಈ ಪ್ರಕರಣದಲ್ಲಿ ಯಾವುದೇ ತಪ್ಪಾಗಿರುವುದಿಲ್ಲ. ಪ್ರಾಧಿಕಾರದ ಜವಾಬ್ದಾರಿಯುತ ಸ್ಥಾನದಲ್ಲಿ ಕುಳಿತು ಸಮಾಜಕ್ಕೆ ಪಾರದರ್ಶಕ ನಡೆ ಪ್ರದರ್ಶಿಸಬೇಕೆಂಬ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದ ತನಿಖಾ ತಂಡವನ್ನು ರಚಿಸಿ ವರದಿ ತರಿಸಿಕೊಳ್ಳುವಂತೆ ಈ ತೀರ್ಮಾನವನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಬಾಯಲ್ಲಿ ಹೇಳುವುದು ಆಚಾರ ತಿನ್ನುವುದು ಮಾತ್ರ ಬದನೆಕಾಯಿ ಎಂಬ ಗಾದೆಯನ್ನು ಶಿವನಳ್ಳಿ ರಮೇಶ್ ಅವರಂತಹ ವ್ಯಕ್ತಿಯನ್ನು ನೋಡಿಯೇ ಮಾಡಿರಬೇಕು. ಕಾಂಗ್ರೆಸ್ ಪಕ್ಷದ ಯಾವುದೇ ಕಾರ್ಯಕ್ರಮ, ಸಭೆ ಸಮಾರಂಭಗಳಿಗೆ ಆಗಮಿಸದೇ ನಗರಸಭೆ ಸದಸ್ಯರಾಗಿ, ಅಧ್ಯಕ್ಷರಾಗಿ ನಂತರ ದಾವಣಗೆರೆ ಮಹಾನಗರ ಪಾಲಿಕೆ ಸದಸ್ಯರಾಗಿ ಸ್ಥಾಯಿ ಸಮಿತಿ ಅಧ್ಯಕ್ಷರಾಗಿದ್ದ ಶಿವನಳ್ಳಿ ರಮೇಶ್ ಕೃತಜ್ಞತೆ ಇಲ್ಲದ ಸ್ವಾರ್ಥ ರಾಜಕಾರಣಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರೈತರು ಹೊಲ ಹದ ಮಾಡಿ ಬಿತ್ತಿ ಗೊಬ್ಬರ ಹಾಕಿದರೆ ಮಾತ್ರ ಫಲ ಸಿಗಲಿದೆ. ಆದರೆ ಕಾಂಗ್ರೆಸ್ ಪಕ್ಷಕ್ಕೆ ಏನನ್ನು ಮಾಡದ ಶಿವನಳ್ಳಿ ರಮೇಶ್ ಫಲ ಮಾತ್ರ ಪಡೆದಿದ್ದಾರೆ. ಆದರೆ ಇಂದು ಕಾಂಗ್ರೆಸ್ ಪಕ್ಷದ ವಿರುದ್ಧವೇ ನಿಂದನೆ ಮಾಡುತ್ತಿರುವುದನ್ನು ನೋಡಿದರೆ ಅವರಿಗೆ ಸ್ವಲ್ಪವು ಕೃತಜ್ಞತೆ ಇಲ್ಲ ಎಂಬುದನ್ನು ಸಾಬೀತು ಪಡಿಸುತ್ತಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಕೆ.ಜಿ.ಶಿವಕುಮಾರ್, ಆಯೂಬ್ ಪೈಲ್ವಾನ್, ನಾಗಭೂಷಣ್, ಮಂಗಳಮ್ಮ, ಮಂಜುಳಮ್ಮ, ಕವಿತಾ, ಸುರೇಶ್ ಜಾಧವ್, ಎ.ನಾಗರಾಜ್ ಇದ್ದರು.

# 'ಪುನಿತ್ ರಾಜಕುಮಾರ್ ಕಪ್' ಚದುರಂಗ ಸ್ಪರ್ಧೆ : ದಿನೇಶ್ ಕೆ. ಶೆಟ್ಟಿ




**ದಾವಣಗೆರೆ:** ದಾವಣಗೆರೆ ಚೆಸ್ ಕ್ಲಬ್ ವತಿಯಿಂದ ಕರ್ನಾಟಕ ರಾಜ್ಯ ಚೆಸ್ ಅಸೋಸಿಯೇಷನ್ ಇವರ ಸಹಯೋಗದೊಂದಿಗೆ ಕನ್ನಡ ರಾಜ್ಯೋತ್ಸವ ಹಾಗೂ ಪುನಿತ್ ರಾಜಕುಮಾರ್ ಅವರ ಸವಿನೆನಪಿಗಾಗಿ ಪ್ರತಿ ವರ್ಷದಂತೆ ಈ ವರ್ಷವೂ ಸಹ ನಗರದಲ್ಲಿ ಓಪನ್ ರ್‍ಯಾಪಿಡ್-'ಪುನಿತ್ ರಾಜಕುಮಾರ್ ಕಪ್' ಸೀಸನ್-4 ಚದುರಂಗ ಸ್ಪರ್ಧೆಯನ್ನು ದಿನಾಂಕ 21-12-2025ರ ಭಾನುವಾರದಂದು ಬಾಪೂಜಿ ಬ್ಯಾಂಕ್ ಸಮುದಾಯಭವನದಲ್ಲಿ ಏರ್ಪಡಿಸಲಾಗಿದೆ. ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರಾದ ಸನ್ಮಾನ್ಯ ಶ್ರೀ ಎಸ್.ಎಸ್. ಮಲ್ಲಿಕಾರ್ಜುನ್ ಹಾಗೂ ಸಂಸದರಾದ ಶ್ರೀಮತಿ ಡಾ||ಪ್ರಭಾ ಮಲ್ಲಿಕಾರ್ಜುನ್ ರವರು ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ದಾವಣಗೆರೆ ಚೆಸ್‌ಕ್ಲಬ್ ಅಧ್ಯಕ್ಷರಾದ ದಿನೇಶ್ ಕೆ. ಶೆಟ್ಟಿ ಅವರು ವಹಿಸುವರು.ಪಂದ್ಯಾವಳಿಯಲ್ಲಿ ದೇಶದ ವಿವಿಧ ಜಿಲ್ಲೆಗಳಿಂದ ಸುಮಾರು 400 ಕ್ಕೂ ಹೆಚ್ಚು ಸ್ಪರ್ಧಾಳುಗಳು ಭಾಗವಹಿಸುವ ನಿರೀಕ್ಷೆ ಇದ್ದು, 09 ಸುತ್ತುಗಳಲ್ಲಿ ಪಂದ್ಯಾವಳಿ ನಡೆಯಲಿದ್ದು, ವಿಜೇತರಿಗೆ ಒಟ್ಟು ರೂ.1,00,000/- (ಒಂದು ಲಕ್ಷ ರೂಪಾಯಿ)ಗಳಬಹುಮಾನ ಮೊತ್ತ ಇದ್ದು ಜೊತೆಗೆ 150 ಟ್ರೋಫಿಗಳನ್ನು ವಿತರಿಸಲಾಗುವುದು.

ಪ್ರಥಮ ಬಹುಮಾನ 'ಪುನಿತ್ ಪ್ರತಿಮೆ'ಯ ಟ್ರೋಫಿಯ ಜೊತೆಗೆ ರೂ.15,000/-ಗಳ ನಗದು ಬಹುಮಾನ ಮತ್ತು ದ್ವಿತೀಯ ಬಹುಮಾನ ರೂ.10,000/- ಹಾಗೂ ಟ್ರೋಫಿ,ತೃತೀಯ ಬಹುಮಾನ ರೂ.5,000/- ಗಳು ನಗದು, 4ನೇ ಬಹುಮಾನ ರೂ.4,000/-ಗಳು ನಗದು, 5ನೇ ಬಹುಮಾನ ರೂ.3,000/- ಗಳು ನಗದು, 6ನೇ ರಿಂದ 10ನೇ ಸ್ಥಾನಪಡೆಯುವ ಕ್ರೀಡಾಪಟುವಿಗೆ ರೂ.2,000/- ಗಳು ನಗದು, 11 ರಿಂದ 15ನೇ ಸ್ಥಾನಪಡೆಯುವ ಕ್ರೀಡಾಪಟುವಿಗೆ ರೂ.1,000/- ಗಳು ನಗದು, 16 ರಿಂದ 20ನೇ ಸ್ಥಾನಪಡೆಯುವ ಕ್ರೀಡಾಪಟುವಿಗೆ ರೂ.500/- ಗಳು ನಗದು,219 ವರ್ಷ ಮೇಲ್ಪಟ್ಟ ಮಹಿಳೆಯರಿಗೆ ಪ್ರಥಮ ಬಹುಮಾನ ರೂ.2,000/- ಮತ್ತುಟ್ರೋಫಿ, ದ್ವಿತೀಯ ಬಹುಮಾನ ರೂ.1,500/- ಹಾಗೂ ಟ್ರೋಫಿ, ತೃತೀಯ ಬಹುಮಾನ ರೂ.1,000/- ಗಳು ನಗದು ಮತ್ತು ಟ್ರೋಫಿ, 4ನೇ ರಿಂದ 10ನೇ ಸ್ಥಾನ ಪಡೆಯುವ ಮಹಿಳಾ ಕ್ರೀಡಾಪಟುವಿಗೆ ಟ್ರೋಫಿ.
40 ಮತ್ತು 59 ವರ್ಷ ಮೇಲ್ಪಟ್ಟ ವಯಸ್ಕ ಕ್ರೀಡಾಪಟುಗಳಿಗೆ ಪ್ರಥಮ ಬಹುಮಾನ ರೂ.2,000/- ಮತ್ತು ಟ್ರೋಫಿ, ದ್ವಿತೀಯ ಬಹುಮಾನ ರೂ.1,500/- ಹಾಗೂ ಟ್ರೋಫಿ,ತೃತೀಯ ಬಹುಮಾನ ರೂ.1,000/- ಗಳು ನಗದು ಮತ್ತು ಟ್ರೋಫಿ, 4ನೇ ರಿಂದ 10ನೇಸ್ಥಾನ ಪಡೆಯುವ ಹಿರಿಯ ಕ್ರೀಡಾಪಟುವಿಗೆ ವಿಶೇಷ ಬಹುಮಾನವಾಗಿ ಟ್ರೋಫಿ ನೀಡಲಾಗುವುದು.07 ವರ್ಷ, 09 ವರ್ಷ, 11 ವರ್ಷ, 13 ವರ್ಷ, 15 ವರ್ಷ, 17 ವರ್ಷ ಹಾಗು 19ವರ್ಷದೊಳಗಿನ ಮಕ್ಕಳಿಗೆ ಪ್ರಥಮ ಬಹುಮಾನ ರೂ.1,500/- ಮತ್ತು ಟ್ರೋಫಿ, ದ್ವಿತೀಯಬಹುಮಾನ ರೂ.1,000/- ಹಾಗೂ ಟ್ರೋಫಿ, ತೃತೀಯ ಬಹುಮಾನ ರೂ.500/- ಗಳುನಗದು ಮತ್ತು ಟ್ರೋಫಿ, 4ನೇ ರಿಂದ 10ನೇ ಸ್ಥಾನ ಪಡೆಯುವ ಮಕ್ಕಳಿಗೆ ವಿಶೇಷಬಹುಮಾನವಾಗಿ ಪ್ರತ್ಯೇಕ ಟ್ರೋಫಿ ನೀಡಲಾಗುವುದು.ದಾವಣಗೆರೆಯ ಉತ್ತಮ ಚದುರಂಗ ಆಟಗಾರರರಿಗೆ 20 ವಿಶೇಷ ಟ್ರೋಫಿಗಳನ್ನುವಿತರಿಸಲಾಗುವುದ. ಈ ಪಂದ್ಯಾವಳಿಯಲ್ಲಿ ಅಂತರಾಷ್ಟ್ರೀಯ ತೀರ್ಪುಗಾರರಾದ ಬಿ.ಹೆಚ್. ವಸಂತ್‌ಅವರು ಆಗಮಿಸಲಿದ್ದಾರೆ. ಸ್ಪರ್ಧೆಯಲ್ಲಿ ಭಾಗವಹಿಸುವ ಆಸಕ್ತ ಕ್ರೀಡಾಪಟುಗಳು ದಿನಾಂಕ: 19-12-2025ರಶುಕ್ರವಾರ ರಾತ್ರಿ 12-00 ಗಂಟೆಯ ಒಳಗಾಗಿ chessfee.com /circlechess.com ಇಲ್ಲಿ ರೂ.750/-ಗಳ ನೋಂದಣಿ ಶುಲ್ಕ ಪಾವತಿಸಿನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಚೆಸ್ ಕ್ಲಬ್‌ನ ಕಾರ್ಯದರ್ಶಿಯುವರಾಜ್ (ಮೊ: 9945613469), ಮಂಜುಳಾ (ಮೊ: 7259310197) ಇವರನ್ನುಸಂಪರ್ಕಿಸಿ ಸ್ಪರ್ಧೆಯ ಮಾಹಿತಿ ಪಡೆಯಬಹುದು.

# ಶ್ರೀ ಮಲ್ಲಿಕಾರ್ಜುನ ಹಾಗೂ ಕಂಠಿದುರ್ಗಮ್ಮ ದೇವಸ್ಥಾನದ ಕಡೇ ಕಾರ್ತಿಕೋತ್ಸವ

**ದಾವಣಗೆರೆ :** ಮೇಲ್ಕಂಡ ಸಂಘದ ವತಿಯಿಂದ ಪ್ರತೀ ವರ್ಷದಂತೆ ಈ ವರ್ಷವೂ ಕೂಡ ಕೆ.ಟಿ.ಜೆ.ನಗರದ 10ನೇ ತಿರುವಿನಲ್ಲಿರುವ ಶ್ರೀ ಮಲ್ಲಿಕಾರ್ಜುನ ಹಾಗೂ ಶ್ರೀ ಕಂಠಿದುರ್ಗಮ್ಮ ದೇವಸ್ಥಾನದ ಕಡೇ ಕಾರ್ತಿಕೋತ್ಸವ ದಿನಾಂಕ 15-12-2025ನೇ ಸೋಮವಾರ ಸಂಜೆ 7-30 ಮಮತ್ತು ಶ್ರೀ ಮಲ್ಲಿಕಾರ್ಜುನ ದೇವಸ್ಥಾನದ ಕಡೇ ಕಾರ್ತಿಕೋತ್ಸವ 16-12-2025ರ ಮಂಗಳವಾರ ಸಂಜೆ 7-30 ಕ್ಕೆ ಎರಡು ದಿನಗಳ ಕಾಲ ಕಡೇ ಕಾರ್ತಿಕೋತ್ಸವವು ವಿಜೃಂಭಣೆಯಿಂದ ನಡೆಯಿತು. ಕೆ.ಟಿ.ಜೆ. ನಗರದ ಗಾಂಧೀಜಿ ಹರಿಜನ ಯುವಕ ಸಂಘದ ಪ್ರಧಾನ ಕಾರ್ಯದರ್ಶಿ ಹಾಗೂ ಕೆ.ಪಿ.ಸಿ.ಸಿ. ಎಸ್ಸಿ ವಿಭಾಗದ ಕಾರ್ಯದರ್ಶಿ ಸೋಮಲಾಪುರದ ಹನುಮಂತಪ್ಪ ಇವರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಯಮನೂರು ಗೌಡ್ರು, ಕುಷ್ಟಗಿ ರಮೇಶ್, ಅಜಯ್‌ಲಕ್ಕಪ್ಪ, ಮರದಾಳ್ ಶಾಂತಕುಮಾರ್, ಕಾಳಪ್ಪ ಮಣ್ಣೂರು, ಹೆಚ್.ವೈ.ಪ್ರದೀಪ್, ದೇವರಾಜ್ ವಂದಾಲಿ ಹಾಗೂ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ತಿಕೋತ್ಸವ ಯಶಸ್ವಿಗೊಳಿಸಿದರು.

# ಕಿವಿ, ಮೂಗು, ಗಂಟಲು ಸಂಬಂಧಿಸಿದ ಸಮಸ್ಯೆ ಸೌಖ್ಯದಾ ಆಸ್ಪತ್ರೆಯಲ್ಲಿ ಉಚಿತ ತಪಾಸಣಾ ಶಿಬಿರ ನಾಳೆಯಿಂದ

**ಗದಗ:** ಸ್ಥಳೀಯ ಸೌಖ್ಯದಾ ಆಸ್ಪತ್ರೆಯಲ್ಲಿ ಡಿ.15 ರಿಂದ 19ರವರೆಗೆ ಐದು ದಿನಗಳ ಕಾಲ ಕಿವಿ, ಮೂಗು, ಗಂಟಲು ಕಾಯಿಲೆಗೆ ಸಂಬಂಧಿಸಿದಂತೆ ಉಚಿತವಾಗಿ ಆರೋಗ್ಯ ತಪಾಸಣೆ ಶಿಬಿರ ಹಮ್ಮಿಕೊಳ್ಳಲಾಗಿದೆ.

ಶಿಬಿರದಲ್ಲಿ ಕಿವಿ, ಮೂಗು, ಗಂಟಲು ಸಂಬಂಧಿಸಿದ ಸಮಸ್ಯೆಗಳಿಗೆ ಸಮಾಲೋಚನೆ, ಕಿವಿ ಮೇಣ ತೆಗೆಯುವುದು, ಓಟಿಓ ಎಂಡೋಸ್ಕೋಪಿ, ಥೈರಾಯ್ಡ್ ಪರೀಕ್ಷೆ ಉಚಿತವಾಗಿವೆ. ಹೀಗಾಗಿ ಸೈನಸ್ ಸೋಂಕು, ಟಾನ್ಸಿಲ್ ಸರ್ಜರಿ, ಕಿವಿಯಲ್ಲಿ ಶಬ್ದ ಸಂವೇದನೆ, ಪದೇ ಪದೇ ಮೂಗು ಮುಚ್ಚುವಿಕೆ ಹಾಗೂ ಸೀನುವಿಕೆ, ಮೂಗಿನಲ್ಲಿ ದ್ರವ್ಯ ರಾಶಿ,

ಮೂಗಿನ ರಕ್ತಸ್ರಾವ, ಕಿವಿ ಸೋರುವಿಕೆ ಹೀಗೆ ಕಿವಿ, ಮೂಗು, ಗಂಟಲು ಸಂಬಂಧಿಸಿದ ಸಮಸ್ಯೆಗಳಿದ್ದವರು ಆಗಮಿಸಿ, ಉಚಿತವಾಗಿ ತಪಾಸಣೆ ಮಾಡಿಸಿಕೊಳ್ಳಬಹುದಾಗಿದೆ.

ಅಲ್ಲದೇ, ಅಲರ್ಜಿ ಸ್ಕ್ರೀನಿಂಗ್ ಪರೀಕ್ಷೆ ಸೇರಿ ಕೆಲವು ತಪಾಸಣೆಗಲು ರಿಯಾಯ್ತಿ ದರದಲ್ಲಿ ಸಿಗಲಿವೆ. ಡಾ.ಅಂಜಲಿ ಖಿಯಲಾನಿ (ನಾಲ್ವಾಡ) ನೇತೃತ್ವದಲ್ಲಿ ವೈದ್ಯರು ತಪಾಸಣೆ ನಡೆಸುವರು.

ಶಿಬಿರ ನಡೆಯುವ ಐದು ದಿನಗಳ ಅವಧಿಯಲ್ಲಿ ಪ್ರತಿದಿನ ಮಧ್ಯಾಹ್ನ 12 ಗಂಟೆಯಿಂದ 3 ಗಂಟೆಯವರೆಗೆ ಹಾಗೂ ಸಾಂಯಂಕಾಲ 6 ಗಂಟೆಯಿಂದ ರಾತ್ರಿ 9.30 ರವರೆಗೆ ನಗರದ ಕೆ.ಸಿ. ರಾಣಿ ರಸ್ತೆಯ 7ನೇ ಅಡ್ಡರಸ್ತೆಯಲ್ಲಿ ಇರುವ ಸೌಖ್ಯದಾ ಆಸ್ಪತ್ರೆಗೆ ಆಗಮಿಸಿ, ಇದರ ಸದುಪಯೋಗ ಪಡೆದುಕೊಳ್ಳಬಹುದಾಗಿದೆ. ಶಿಬಿರದ ಕುರಿತು ಹೆಚ್ಚಿನ ಮಾಹಿತಿಗೆ ದೂರವಾಣಿ 08372-295959, ಮೊಬೈಲ್: 7829029139 ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

# ಕನ್ನಡ ಸಾಹಿತ್ಯ ಪರಿಷತ್ತಿನಿಂದ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳಿಗೆ ಪರೀಕ್ಷಾ ಪೂರ್ವಭಾವಿ ಸಿದ್ಧತಾ ಉಚಿತ ಕಾರ್ಯಾಗಾರ

**ದಾವಣಗೆರೆ:** ದಾವಣಗೆರೆಯ ಕನ್ನಡ ಸಾಹಿತ್ಯ ಪರಿಷತ್ ಮತ್ತು ಕಲಾಕುಂಚ ವಿದ್ಯಾನಗರ ಶಾಖೆಯ ಸಂಯುಕ್ತಾಶ್ರಯದಲ್ಲಿ 2025-26ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ ಎದುರಿಸುವ ಮಕ್ಕಳಿಗೆ ಡಿಸೆಂಬರ್ 28 ರಂದು ಭಾನುವಾರ ಬೆಳಿಗ್ಗೆ 10 ಗಂಟೆಗೆ ವಿದ್ಯಾನಗರ ರಸ್ತೆಯಲ್ಲಿರುವ ಕುವೆಂಪು ಕನ್ನಡ ಭವನದಲ್ಲಿ ಉಚಿತ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಬಿ. ವಾಮದೇವಪ್ಪ ತಿಳಿಸಿದ್ದಾರೆ.

ಈ ಬಾರಿ ದಾವಣಗೆರೆ ಜಿಲ್ಲೆಗೆ ಎಸ್.ಎಸ್.ಎಲ್.ಸಿ. ಫಲಿತಾಂಶ ಪ್ರಥಮ ಸ್ಥಾನಕ್ಕೆ ಬರುವ ಮಕ್ಕಳ ಭವ್ಯ ದಿವ್ಯ ಪ್ರಜ್ವಲ ಭವಿಷ್ಯದ ಸದುದ್ದೇಶದಿಂದ ಮಕ್ಕಳಿಗೆ ಪರೀಕ್ಷೆ ಭಯ ದೂರ ಮಾಡುವ ಉತ್ತಮ ಫಲಿತಾಂಶದೊಂದಿಗೆ ವ್ಯಾಸಂಗ ಮಾಡಿದ ವಿದ್ಯಾಸಂಸ್ಥೆಗೆ, ಹೆತ್ತ ತಂದೆ-ತಾಯಿಗಳಿಗೆ ಹುಟ್ಟಿದ ಊರಿಗೆ ಒಳ್ಳೆಯ ಹೆಸರು ತರಬೇಕಾದ ಅವಶ್ಯಕತೆ ಇರಬೇಕಾಗಿದೆ ಎಂದು ಕಾರ್ಯಾಗಾರ ನಡೆಸುವ ಕಲಾಕುಂಚದ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈಯವರು ಪ್ರಕಟಿಸಿದ್ದಾರೆ.

ಈ ಸಾಲಿನ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿ, ವಿದ್ಯಾರ್ಥಿನಿಯರು, ಪೋಷಕರು, ಶಿಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಈ ಉಚಿತ ಕಾರ್ಯಾಗಾರ ಯಶಸ್ವಿಗೊಳಿಸಬೇಕಾಗಿ ಕಲಾಕುಂಚದ ವಿದ್ಯಾನಗರ ಶಾಖೆಯ ಅಧ್ಯಕ್ಷರಾದ ರಾಜಶೇಖರ್ ಬೆನ್ನೂರು ವಿನಂತಿಸಿದ್ದಾರೆ. ಹೆಚ್ಚಿನ ಮಾಹಿತಿಗೆ 9448423683, 9538732777 ಈ ಸನೀಹವಾಣಿಗಳಿಗೆ ಸಂಪರ್ಕಿಸಬಹುದು.

# ಶ್ರೀ ಮಹೇಶ್ವರ ಜಾತ್ರಾ ಮಹೋತ್ಸವ

**ನ್ಯಾಮತಿ :** ನ್ಯಾಮತಿ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಶ್ರೀ ಮಹೇಶ್ವರ ಜಾತ್ರಾ ಮಹೋತ್ಸವ ಶ್ರೀ ಮಹೇಶ್ವರ ಕಟ್ಟೆಯಲ್ಲಿ ಡಿಸೆಂಬರ್ 16 ರ ಮಂಗಳವಾರದಿಂದ ಡಿಸೆಂಬರ್ 18 ರ ಗುರುವಾರದವರೆಗೂ ಜರುಗಲಿದೆ.

ನ್ಯಾಮತಿ ತಾಲೂಕಿನ ಕೆಂಚಿಕೊಪ್ಪ , ಬಿಜೋಗಟ್ಟೆ , ಸೂರಗೊಂಡನಕೊಪ್ಪ ಗ್ರಾಮದಲ್ಲಿ ತೀರ್ಥಗಿರಿಯ ತೀರ್ಥರಾಮೇಶ್ವರ ಕ್ಷೇತ್ರ ಸೇರಿದಂತೆ ಇತರೆ ಗ್ರಾಮಗಳಲ್ಲಿ ಮಹೇಶ್ವರ ಕಟ್ಟೆಯಲ್ಲಿ ಡಿಸೆಂಬರ 16 ರ ಮಂಗಳವಾರದಿಂದ ಡಿಸೆಂಬರ್ 18 ರ ಗುರುವಾರದವರೆಗೂ ಮಹೇಶ್ವರ ಜಾತ್ರಾ ಮಹೋತ್ಸವ ಜರುಗಲಿದೆ.

ಕೆಂಚಿಕೊಪ್ಪ , ಬಿಜೋಗಟ್ಟೆ , ಸೂರಗೊಂಡನಕೊಪ್ಪ , ಗ್ರಾಮದಲ್ಲಿ ಡಿಸೆಂಬರ್ 15 ರ ಸೋಮವಾರ ಶ್ರೀಮಹೇಶ್ವರ ಸ್ವಾಮಿಯ ಉತ್ಸವ ಮೂರ್ತಿಯೊಂದಿಗೆ ಹಾಗೂ ವಿವಿಧ ಗ್ರಾಮಗಳ ದೇವರ ಉತ್ಸವ ಮೂರ್ತಿಗಳು , ರಾಮೇಶ್ವರ ಗ್ರಾಮದ ಮಲ್ಲಿಕಾರ್ಜುನ ಸ್ವಾಮಿಯೊಂದಿಗೆ ಮಂಗಳ ವಾದ್ಯಗಳೊಂದಿಗೆ ರಾಜ ಬೀದಿ ಉತ್ಸವ ಹೊರಟು ಹೊರ ವಲಯದಲ್ಲಿರುವ ಶ್ರೀಮಹೇಶ್ವರಸ್ವಾಮಿಯ ಗದ್ದುಗೆ ಮಂಟಪದ(ಮಹೇಶ್ವರಿ ಕಟ್ಟೆಯ) , ತೀರ್ಥಗಿರಿಯ ತೀರ್ಥರಾಮೇಶ್ವರ ಕ್ಷ್ರತ್ರದವರೆಗೆ ನಡೆದು ಉತ್ಸವಮೂರ್ತಿಗಳ ಪ್ರತಿಷ್ಠಾಪನೆ , ಧ್ವಜಾರೋಹಣ , ಸ್ವಾಮೀಜಿಯ ಇಷ್ಟಲಿಂಗಕ್ಕೆ ಮತ್ತು ಶ್ರೀಮಹೇಶ್ವರಸ್ವಾಮಿ , ಶಿಲಾಮೂರ್ತಿಗೆ ಹಾಗೂ ವಿವಿಧ ಗ್ರಾಮಗಳ ಬಂದಿದ್ದ ಉತ್ಸವಮೂರ್ತಿಗಳಿಗೆ ಮಹಾರುದ್ರಾಭಿಷೇಕ,ಬಿಲ್ವಾರ್ಚನೆ, ಪಾದೋದಕ ಮಹಾಮಂಗಳಾರತಿ ನಡೆದು ಬರುವ ಭಕ್ತರಿಗೆ ನಿತ್ಯವು ಅಕ್ಕಿ ಕಿಚುಡಿ, ಬಾಳೆ ಹಣ್ಣು, ಹಾಲು ಬೆಲ್ಲ, ತುಪ್ಪದ ಪ್ರಸಾದ ನಡೆಯಲಿದೆ.


ನ್ಯಾಮತಿ ತಾಲೂಕಿನ ರಾಮೇಶ್ವರ ಗ್ರಾಮದಲ್ಲಿ ಶ್ರೀ ಮಲ್ಲಿಕಾರ್ಜುನ ಸ್ವಾಮಿ ದೇಗುಲದ ಆವರಣದಲ್ಲಿ ಡಿಸೆಂಬರ್ 17 ರ ಬುಧವಾರ ಸಂಜೆ ಮಹೇಶ್ವರಿ ಹಬ್ಬದ ಪ್ರಸಾದ ನಡೆಯಲಿದೆ.

ನ್ಯಾಮತಿ ತಾಲೂಕಿನ ರಾಮೇಶ್ವರ ಗ್ರಾಮದಲ್ಲಿ ಶ್ರೀ ಮಲ್ಲಿಕಾರ್ಜುನ ಸ್ವಾಮಿ ದೇಗುಲದ ಆವರಣದಲ್ಲಿ ಡಿಸೆಂಬರ್ 17 ರ ಬುಧವಾರ ಸಂಜೆ ಮಹೇಶ್ವರಿ ಹಬ್ಬದ ಪ್ರಸಾದ ನಡೆಯಲಿದೆ.

ಡಿಸೆಂಬರ್ 18 ರ ಗುರುವಾರ ಬಿಜೋಗಟ್ಟೆ ಗ್ರಾಮದಲ್ಲಿ ಶ್ರೀಮಹೇಶ್ವರಸ್ವಾಮಿಯ ಗದ್ದುಗೆ ಮಂಟಪದ(ಮಹೇಶ್ವರಿ ಕಟ್ಟೆಯ)ಯಲ್ಲಿ ಪ್ರತಿಷ್ಠಾಪನೆಗೊಂಡ

ವಿವಿಧ ಗ್ರಾಮಗಳ ದೇವರುಗಳ ಉತ್ಸವಮೂರ್ತಿಗಳೊಂದಿಗೆ ಗ್ರಾಮ ಪ್ರವೇಶ , ಹುಂಡಿ ಸ್ಥಾಪನೆ ಸಾಮೂಹಿಕ ಅನ್ನ ಸಂತರ್ಪಣೆ ನಡೆದು ಡಿಸೆಂಬರ್ 19 ಶುಕ್ರವಾರ ಶ್ರೀ ದುರ್ಗಾಂಬಿಕ ದೇವಿ ಶಿಲಾಮೂರ್ತಿಗೆ ಮಹಾರುದ್ರಾಭಿಷೇಕ,ಬಿಲ್ವಾರ್ಚನೆ, ಪಾದೋದಕ ಮಹಾಮಂಗಳಾರತಿ ನಡೆದು ಹುಂಡಿ ತೆರೆಯುವುದು ರಾತ್ರಿ ಸಾಮೂಹಿಕ ಅನ್ನ ಸಂತರ್ಪಣೆ ಪರವು , ರಸಮಂಜರಿ ಕಾರ್ಯಕ್ರಮ ನಡೆಯಲಿದೆ.

# ವೈಯಕ್ತಿಕ ಆರೋಪ ಬಿಟ್ಟು, ಅಭಿವೃದ್ಧಿ ಕುರಿತು ಚರ್ಚಿಸಿ; ಎನ್. ಬಕ್ಕೇಶ್ ಮನವಿ



**ದಾವಣಗೆರೆ:** ಪ್ರಸ್ತುತ ಪಕ್ಷಗಳ ಮುಖಂಡರುಗಳು ಜನರಿಗೆ ಮುಜುಗರ ತರಿಸುವಂತೆ ರಾಜಕೀಯ ಮತ್ತು ರಾಜಕಾರಣಿಗಳ ಕುರಿತ ವೈಯಕ್ತಿಕ ಆರೋಪಗಳನ್ನು ಬದಿಗಿರಿಸಿ, ಅಭಿವೃದ್ಧಿ ಬಗ್ಗೆ ಚರ್ಚೆ ನಡೆಸಿ ಎಂದು ಉಭಯ ಪಕ್ಷಗಳ ಮುಖಂಡರುಗಳಿಗೆ ಉದ್ಯಮಿ ಎನ್. ಬಕ್ಕೇಶ್ ಮನವಿ ಮಾಡಿದ್ದಾರೆ.

ರಾಜಕೀಯ ಪದ ಬಳಕೆಗಳು ಮೌಲ್ಯಾಧಾರಿತವಾಗಿರಬೇಕು. ವೈಯಕ್ತಿಕ ಆರೋಪಗಳು ಜನರಿಗೆ ಅವಶ್ಯಕತೆ ಇಲ್ಲ. ಆದರೆ, ದಾವಣಗೆರೆ ಮಹಾಜನತೆಯು ದಿನಬೆಳಗಾದರೆ ದಿನಪತ್ರಿಕೆ, ಸಾಮಾಜಿಕ ಜಾಲತಾಣಗಳಲ್ಲಿ ಸೂಕ್ಷ್ಮವಾಗಿ ಗಮನಿಸುತ್ತಿದ್ದು, ಇಂದಿನ ರಾಜಕೀಯ ಮತ್ತು ರಾಜಕಾರಣಿಗಳ ಬಗ್ಗೆ ಅಗೌರವ ಭಾವನೆ ಮೂಡಿ ಬರುತ್ತಿದ್ದು ಗೌರವದಿಂದ ನಡೆದುಕೊಳ್ಳುವ ಅವಶ್ಯಕತೆ ಇದೆ ಎಂದು ಪತ್ರಿಕಾ ಹೇಳಿಕೆಯಲ್ಲಿ ಸಲಹೆ ನೀಡಿದ್ದಾರೆ.

ಸಿ.ಡಿ., ಮತಗಳ್ಳತನದಂತಹ ರಾಜಕಾರಣದಲ್ಲಿ ಹಿಂದೆಂದೂ ಕಾಣದಂತಹ ಕೃತ್ಯಗಳು ಇಂದಿನ ರಾಜಕಾರಣದಲ್ಲಿ ನಡೆಯುತ್ತಿದ್ದು, ದೇಶಾದ್ಯಂತ ಹಗರಣಗಳು ರಾರಾಜಿಸುತ್ತಿವೆ. ಜನರಿಗೆ ಅಗತ್ಯವಿರುವ ಜನಸ್ಪಂದನೆ ಮತ್ತು ಅಭಿವೃದ್ಧಿ ಅದರ ಬಗ್ಗೆ ಚರ್ಚೆ ಮಾಡಿ, ಆರೋಪ-ಪ್ರತ್ಯಾರೋಪಗಳು ಇರಲಿ ಆದರೆ, ಆರೋಗ್ಯಕರವಾಗಿರಲಿ ಎಂದು ತಿಳಿಸಿದ್ದಾರೆ.

ರಾಜಕೀಯದಲ್ಲಿ ಇರುವವರಿಗೆ ಮನಮೋಹನ್ ಸಿಂಗ್, ವಾಜಪೇಯಿ, ಎಸ್. ನಿಜಲಿಂಗಪ್ಪ ಮತ್ತು ದೇವರಾಜ್ ಅರಸ್ ಅವರಂತಹ ಸರಳ ರಾಜಕಾರಣ ಮತ್ತು ವ್ಯಕ್ತಿತ್ವ ಬೆಳೆಸಿಕೊಳ್ಳುವ ಅವಶ್ಯಕತೆ ಇದೆ. ವರದಿಗಾರರ ಕೂಟ ಒಂದು ಮೌಲ್ಯಯುತ ಪ್ರದೇಶವಾಗಿದ್ದು, ಅಲ್ಲಿ ವಿಷಯಾಧಾರಿತ ಮತ್ತು ಮೌಲ್ಯಾಧಾರಿತ ವಿಷಯಗಳನ್ನು ಮಾತ್ರ ಪ್ರಸ್ತಾಪಿಸುವುದರಿಂದ ಜನರಿಗೂ ಹಾಗೂ ಪತ್ರಿಕೆಗಳಿಗೂ, ನಮಗೂ ಗೌರವ ಸಿಕ್ಕಂತಾಗುತ್ತದೆ ಎಂದು ಅಭಿಪ್ರಾಯಿಸಿದ್ದಾರೆ.

## ಅಖಿಲ ಭಾರತ ಪಂಚಾಯತ್ ಪರಿಷತ್ 18 ನೇ ರಾಷ್ಟ್ರೀಯ ಸಮ್ಮೇಳನ

# ರಾಷ್ಟ್ರದಲ್ಲಿಯೇ ಕರ್ನಾಟಕ ಅಧಿಕಾರ ವಿಕೇಂದ್ರೀಕರಣ ಮತ್ತು ಆಡಳಿತದಲ್ಲಿ ಮುಂಚೂಣಿಯಲ್ಲಿರುವ ರಾಜ್ಯ-ಸಚಿವ ಎಚ್.ಕೆ.ಪಾಟೀಲ



**ಗದಗ :** ಕರ್ನಾಟಕವು ಪಂಚಾಯತ್ ರಾಜ್ ಚಳವಳಿಯಲ್ಲಿ ಯಾವಾಗಲೂ ಪ್ರಮುಖ ಪಾತ್ರ ವಹಿಸಿದೆ. ಅಧಿಕಾರ ವಿಕೇಂದ್ರೀಕರಣಕ್ಕೆ ನಿಜವಾದ ಬದ್ಧತೆಯನ್ನು ಪ್ರದರ್ಶಿಸಿದ ಕೆಲವೇ ರಾಜ್ಯಗಳಲ್ಲಿ ನಾವೂ ಸೇರಿದ್ದೇವೆ, ಅಧಿಕಾರ ವಿಕೇಂದ್ರೀಕರಣ ಸೂಚ್ಯಂಕದಲ್ಲಿ ನಿರಂತರವಾಗಿ ಉನ್ನತ ಸ್ಥಾನದಲ್ಲಿರುತ್ತೇವೆ ಎಂದು ಜಿಲ್ಲಾ ಉಸ್ತುವರಿ ಸಚಿವ ಎಚ್. ಕೆ.ಪಾಟೀಲ ಹೇಳಿದರು.

ಶನಿವಾರ ನಾಗಾವಿಯ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಬೆಂಗಳೂರಿನ ಕರ್ನಾಟಕ ಪಂಚಾಯತ್ ರಾಜ್ ಪರಿಷತ್,ಆರ್.ಡಿ.ಪಿಆರ್ ವಿಶ್ವವಿದ್ಯಾಲಯ ಹಾಗು ಗ್ರಾಮೀಣಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಹಯೋಗದಲ್ಲಿ ಜರುಗಿದ ಅಖಿಲ ಭಾರತ ಪಂಚಾಯತ್ ಪರಿಷತ್ 18 ನೇ ರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಗರದಲ್ಲಿನ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಎಂಬ ತಳಮಟ್ಟದ ಆಡಳಿತದ ಉದ್ದೇಶವನ್ನು ಸಾಂಸ್ಥಿಕಗೊಳಿಸಲು ಮತ್ತು ಮುಂದುವರೆಸಲು ಕರ್ನಾಟಕದ ಬದ್ಧತೆಗೆ ಈ ಸಂಸ್ಥೆಯು ಸಾಕ್ಷಿಯಾಗಿದೆ. ಜನಸಾಮಾನ್ಯ ಪ್ರಜಾಪ್ರಭುತ್ವದ ಪ್ರಸ್ತುತತೆ ಮತ್ತು ಗ್ರಾಮ ಸ್ವರಾಜ್ಯದ ಕನಸು, ಭಾರತವು ಅದರ ಹೃದಯಭಾಗದಲ್ಲಿ ಹಳ್ಳಿಗಳ ಸಮೂಹವಾಗಿದೆ. ನಮ್ಮ ಸಾಮಾಜಿಕ ರಚನೆಯನ್ನು ಐತಿಹಾಸಿಕವಾಗಿ ಸ್ಥಳೀಯ ಸಂಪನ್ಮೂಲಗಳು, ಅವಿಭಕ್ತ ಕುಟುಂಬ ವ್ಯವಸ್ಥೆ, ಗ್ರಾಮ-ಗುಡಿ ಕೈಗಾರಿಕೆಗಳು ಮತ್ತು ಜನರು ಜಾತಿ, ಸಮುದಾಯ ಮತ್ತು ಧರ್ಮವನ್ನು ಮೀರಿ ಬೆರೆತು, ಹಂಚಿಕೊಂಡು ಮತ್ತು ಸಹಕರಿಸಿದ ಆಳವಾದ ಸಾಮಾಜಿಕ ಸಾಮರಸ್ಯದಿಂದ ವ್ಯಾಖ್ಯಾನಿಸಲಾಗಿದೆ. ಮಹಾತ್ಮ ಗಾಂಧಿಯವರ "ಗ್ರಾಮ ಸ್ವರಾಜ್" ಎಂಬ ಪವಿತ್ರ ಕನಸಿನ ಸಾಕಾರಕ್ಕೆ ಇದು ಆರಂಭಿಕ ವೇಗವಾಗಿದೆ ಎಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ, ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ರಂಗದಲ್ಲಿನ ಪರಿವರ್ತನೆಯು ಸವಾಲಿನ ಬದಲಾವಣೆಗಳನ್ನು ತಂದಿದೆ, ಗ್ರಾಮ ಕೈಗಾರಿಕೆಗಳ ಕಣ್ಮರೆ, ಸ್ಥಳೀಯ ಉದ್ಯೋಗದಲ್ಲಿ ಕುಸಿತ ಮತ್ತು ಪರಸ್ಪರ ಅವಲಂಬನೆಯಲ್ಲಿ ದುರದೃಷ್ಟಕರ ಹಿಮ್ಮೆಟ್ಟುವಿಕೆ, ಸಾಮಾಜಿಕ ಅಭದ್ರತೆಗೆ ಕಾರಣವಾಗುತ್ತದೆ. ಈ ಕಾರಣಕ್ಕಾಗಿಯೇ ಈ ಸಮ್ಮೇಳನವು ಕೇವಲ ಒಂದು ಸಭೆಯಲ್ಲ, ಬದಲಾಗಿ ಕ್ರಿಯೆಗೆ ನಿರ್ಣಾಯಕ ಕರೆಯಾಗಿದೆ, ತನ್ನ ವೈಭವವನ್ನು ಮರಳಿ ಪಡೆಯಲು ಗ್ರಾಮವನ್ನು ಪುನರುಜ್ಜೀವನಗೊಳಿಸುವ ಸಮಯವಾಗಿದೆ ಎಂದು ನುಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ವಿಕೇಂದ್ರಿಕೃತ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರಾದ ಡಿ.ಆರ್ ಪಾಟೀಲ, ತ್ರಿಪುರ ರಾಜ್ಯದ ಶಾಸಕ ರಾಜೀವ ಸಿನ್ಹ, ಪಂಚಾಯತ್ ಪರಿಷತ್ ಕಾರ್ಯದರ್ಶಿ ಅಶೋಕ ಚೌಹಾಣ, ವಾಸಣ್ಣ ಕುರಡಗಿ, ಶಿವಾನಂದ ಶೇಟ್ಟರ್,ಜೀವನ ಕುಮಾರ,ಕೆ.ನವಿನ್,ಡಾ.ಸಿ.ನಾರಾಯುನಸ್ವಾವಿ ು,ಎಸ್.ಎಸ್.ಮೀನಾಕ್ಷಿ ಸುಂದರಂ,ಕೆ. ಯೆಲ್ಲಕ್ಕಿ ಗೌಡ,ನಿಲಕಮಟಪ್ಪ ಕುಸಗುರು ಸೇರಿದಂತೆ ವಿವಿಧ ರಾಜ್ಯದಗಳಿಂದ ಆಗಮಿಸಿದ ಗ್ರಾಮ ಪಂಚಾಯತ ಅಧ್ಯಕ್ಷರು, ಹಾಜರಿದ್ದರು.

ಆರ್.ಡಿಪಿಆರ್ ಕುಲಪತಿಗಳು (ಪ್ರ) ಹಾಗೂ ಕುಲಸಚಿವರಾದ ಪ್ರೊ. ಡಾ. ಸುರೇಶ ವಿ ನಾಡಗೌಡ ಸ್ವಾಗತಿಸಿದರು, ಬಾಹುಬಲಿ ಜೈನರ ಕಾರ್ಯಕ್ರಮ ನಿರ್ವಹಿಸಿದರು.

# ಬಂಟರ ಭವನದಲ್ಲಿ ದೇಸಿ ವಸ್ತುಗಳ ಪ್ರದರ್ಶನ- ಮಾರಾಟ




**ಶಿವಮೊಗ್ಗ :-** ನಗರದ ಗೋಪಾಳ ರಸ್ತೆ ಆಲ್ಕೊಳ ಸಮೀಪದ ಬಂಟರ ಭವನದಲ್ಲಿ ಡಿ. 12 ರಿಂದ 14 ರವರೆಗೆ ಪರಂಪರೆ ದೇಸಿ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ನಡೆಯುತ್ತಿದೆ.

ಶಿವಮೊಗ್ಗದ ಗಾಂಧಿನಗರ ಮುಖ್ಯ ರಸ್ತೆಯಲ್ಲಿರುವ ಟಾಟಾ ಪವರ್ ಸೋಲಾರ್ ಎಸ್ ಎಸ್ ಏಜೆನ್ಸೀಸ್ ಸ್ಟಾಲ್‌ನ್ನು ವಿದ್ಯುತ್ತವಾಗಿ ಡಾ. ಸಿ.ಹೆಚ್. ಭಾಸ್ಕರ್ ನಾಯ್ಕ್ ಅವರು ಸೋಲಾರ್ ಬುಕ್ ಮಾಡುವ ಮುಖಾಂತರ ಚಾಲನೆ ನೀಡಿದರು. ಗ್ರಾಹಕರಿಗೆ ಅತಿ ಕಡಿಮೆ ದರದಲ್ಲಿ ವಿತರಿಸುವ ಜೊತೆಗೆ ಲಕ್ಕಿ ಬಹುಮಾನ ಗಳು ಇರುತ್ತದೆ ಎಂದು ವ್ಯವಸ್ಥಾಪಕ ಸುರೇಶ್ ಶಣೈ ಅವರು ತಿಳಿಸಿದ್ದಾರೆ.

ಸೋಲಾರ್ ರೂಫ್ ಟಾಪ್‌ನ್ನು ಗ್ರಾಹಕ ರಮೇಶ್ ಶಣೈ ಮತ್ತು ಜಗದೀಶ್ ಅವರಿಗೆ ನೀಡಿದರು. ಈ ಸಂದರ್ಭದಲ್ಲಿ ಕಂಪನಿಯ ಸುರಕ್ಷಿತ ರೈ, ಮಾರುತಿ ರಾವ್, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ವೀರೇಶ್ ಕ್ಯಾತಿನಕೊಪ್ಪ ಅಧಿಕಾರ ಸ್ವೀಕಾರ



**ಶಿವಮೊಗ್ಗ :** ತಾಲೂಕಿನ ಸೂಗುರು ಗ್ರಾಮ ಪಂಚಾಯತಿಯ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ವೀರೇಶ್ ಕ್ಯಾತಿನ ಕೊಪ್ಪ ಅವರನ್ನು ಆಯ್ಕೆ ಮಾಡಲಾಗಿದ್ದು, ಅವರು ಇಂದು ಅಧಿಕಾರ ವಹಿಸಿಕೊಂಡರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿಯ ಅಧ್ಯಕ್ಷೆ ಭಾಗ್ಯ, ಉಪಾಧ್ಯಕ್ಷ ಮಧು, ಮಾಜಿ ಅಧ್ಯಕ್ಷರಾದ ಓಂಕಾರಪ್ಪ, ಲೋಹಿತ್ ಕೆಪಿ ಮಲ್ಲಿಕಾರ್ಜುನ್, ಸದಸ್ಯರಾದ ರೋಹಿಣಿ, ಪ್ರತಿಭಾ, ನೇತ್ರಾವತಿ, ಲಲಿತಮ್ಮ ರಂಗನಾಥ್ ಲಕ್ಷ್ಮಣ್, ಪಿಡಿಒ ವಿಜಯ, ಕಾರ್ಯದರ್ಶಿ ಪರಶುರಾಮ್, ಸಿಬ್ಬಂದಿಗಳಾದ ಅಶ್ವಿನಿ ಚೇತನ್, ಅನ್ನಪೂರ್ಣಮ್ಮ, ರಮೇಶ್, ಸಿದ್ದೇಶ್, ರಾಘವೇಂದ್ರ, ಜಯಪ್ಪ, ಸವಿತಾ ಮುಂತಾದವರಿದ್ದರು

## ಶ್ರೀ ಮಾತೇಂಗಮ್ಮದೇವಿಯ ಕದಳಿ ಕಾರ್ತೀಕೋತ್ಸವ

**ನ್ಯಾಮತಿ:** ತಾಲೂಕಿನ ಕುರುವ ಗ್ರಾಮದ ಶ್ರೀ ಮಾತೇಂಗಮ್ಮದೇವಿಯ ಕದಳಿ ಕಾರ್ತೀಕೋತ್ಸವದ ದೀಪಾರಾಧನೆಯ ಅಂಗವಾಗಿ ಶ್ರೀ ಮಾತೇಂಗಮ್ಮದೇವಿಯ ಕಾಷ್ಟದ (ಮರದ) ಮೂರ್ತಿಗೆ ಶುಕ್ರವಾರ ವಿಶೇಷ ಅಲಂಕಾರ ಮಾಡಿರುವುದು.

## ಡಾಕ್ ಅದಾಲತ್

**ರಾಮನಗರ:** ಅಂಚೆ ಇಲಾಖೆ ವತಿಯಿಂದ ಇದೇ ಡಿ.16 ರಂದು ಬೆಳಿಗ್ಗೆ 11 ಗಂಟೆಗೆ ಚನ್ನಪಟ್ಟಣದ ಅಂಚೆ ವಿಭಾಗೀಯ ಕಚೇರಿಯಲ್ಲಿ ಡಾಕ್ ಅದಾಲತ್ ಅನ್ನು ಆಯೋಜಿಸಲಾಗಿದೆ.ಅಂಚೆ ಇಲಾಖೆಯ ಸೇವೆಗೆ ಸಂಬಂಧಪಟ್ಟಂತೆ ಯಾವುದೇ ರೀತಿಯ ದೂರುಗಳನ್ನು ಸಲ್ಲಿಸಬಹುದಾಗಿದೆ. ದೂರುಗಳನ್ನು ಇದೇ ಡಿ.14ರೊಳಗೆ ಪೂರ್ಣ ವಿಳಾಸದೊಂದಿಗೆ ಹಾಗೂ ಸೂಕ್ತ ದಾಖಲಾತಿಗಳೊಂದಿಗೆ ಚನ್ನಪಟ್ಟಣ ವಿಭಾಗದ ಅಂಚೆ ಅಧೀಕ್ಷಕರು, ಚನ್ನಪಟ್ಟಣ ವಿಭಾಗ, ಚನ್ನಪಟ್ಟಣ-562160 ಈ ವಿಳಾಸಕ್ಕೆ ಸಲ್ಲಿಸುವಂತೆ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನ

**ಗದಗ :** 2025-26ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಯೋಜನೆಗಳಾದ ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆ, ಉದ್ಯೋಗಿನಿ ಯೋಜನೆ, ಚೇತನ ಯೋಜನೆ, ಧನಶ್ರೀ ಯೋಜನೆ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಗಳಡಿ ಗ್ರಾಮ ಒನ್, ಕರ್ನಾಟಕ ಒನ್, ಬಾಪೂಜಿ ಸೇವಾ ಕೇಂದ್ರ, ಬೆಂಗಳೂರು ಒನ್, ಕೇಂದ್ರಗಳ ಮುಖಾಂತರ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ.ಧನಶ್ರೀ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಯೋಜನೆಯಡಿ ಆನ್‌ಲೈನ್ ಮತ್ತು ಆಫ್‌ಲೈನ್ ಎರಡರಲ್ಲೂ ಸಹ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ. ಆಪ್‌ಲೈನ್ ಅರ್ಜಿಗಳನ್ನು ಉಪ ನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗದಗ ಇವರ ಕಚೇರಿಗೆ ಅರ್ಜಿ ಸಲ್ಲಿಸಬಹುದಾಗಿದೆ.ಮೇಲ್ಕಾಣಿಸಿದ ಯೋಜನೆಗಳಡಿ ಸಲ್ಲಿಸಬೇಕಾದ ಅಗತ್ಯ ದಾಖಲಾತಿಗಳು. ಆಧಾರ್ ಕಾರ್ಡ್, ಆಧಾರ್ ಸೀಡಿಂಗ್ ಆಗಿರುವ ಬ್ಯಾಂಕ್ ಖಾತೆ ಪುಸ್ತಕ, ಯೋಜನಾ ವರದಿ, ಜಾತಿ & ಆದಾಯ, ಚೇತನ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಯೋಜನೆಗಳಡಿ ಸಂಸ್ಥೆಯಲ್ಲಿ ನೊಂದಣಿಯಾಗಿರುವ ಪ್ರಮಾಣ ಪತ್ರ. ದೇವದಾಸಿ ಮಹಿಳೆಯರು 1993-94/2007-08 ರಲ್ಲಿ ಸರ್ಕಾರದಿಂದ ನಡೆಸಿದ ಸಮೀಕ್ಷೆಯಲ್ಲಿ ಪಡೆದ ಪ್ರಮಾಣ ಪತ್ರ.ವಯಸ್ಸಿನ ಮಿತಿ: ಧನಶ್ರೀ ಯೋಜನೆ- 18-60 ವರ್ಷಗಳು, ಚೇತನ ಯೋಜನೆ- 18 ವರ್ಷ ಮೇಲ್ಪಟ್ಟು, ಉದ್ಯೋಗಿನಿ ಯೋಜನೆ- 18-55 ವರ್ಷಈ ಹಿಂದಿನ ಸಾಲುಗಳಲ್ಲಿ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೆ ಇರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅಗತ್ಯ ಇರುವದಿಲ್ಲ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ; 15.01.2026 ರ ಸಂಜೆ 5:30 ಘಂಟೆವರೆಗೆ ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಅಭಿವೃದ್ಧಿ ನೀರಿಕ್ಷಕರು, ಉಪ ನಿರ್ದೇಶಕರ ಕಛೇರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾಡಳಿತ ಭವನ ರೂಮ್ ನಂ:-006 ಗದಗ. ಇವರನ್ನು ಸಂಪರ್ಕಿಸಬಹುದಾಗಿದೆ.

## ಸ್ವಯಂ ರಕ್ಷಣಾ ಕೌಶಲ್ಯ ತರಬೇತಿಗೆ ಅರ್ಜಿ ಆಹ್ವಾನ

**ಬಳ್ಳಾರಿ:** ಪ್ರಸ್ತಕ ಸಾಲಿಗೆ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ 6, 7, 8, 9 ಮತ್ತು 11 ನೇ ತರಗತಿಯ ವಿದ್ಯಾರ್ಥಿನಿಯರಿಗೆ ಕರಾಟೆ - ಸ್ವಯಂ ರಕ್ಷಣಾ ಕೌಶಲ್ಯ ತರಬೇತಿಯನ್ನು ವಾರದಲ್ಲಿ ಎರಡು ದಿನಗಳಂತೆ 6 ತಿಂಗಳ ತರಬೇತಿ ನೀಡುವ ನಿಟ್ಟಿನಲ್ಲಿ ಅರ್ಹ ಮಹಿಳಾ ಮತ್ತು ಪುರುಷ (ಮಹಿಳೆಯರಿಗೆ ಮೊದಲ ಆದ್ಯತೆ) ತರಬೇತುದಾರರಿಂದ ಅರ್ಜಿ ಆಹ್ವಾನಿಸಲಾಗಿದೆ.ತರಬೇತಿ ನೀಡುವ ತರಬೇತುದಾರರಿಗೆ ಸಂಭಾವನೆ ರೂ.750 ಮತ್ತು ಪ್ರಯಾಣ ವೆಚ್ಚ ರೂ.100 ರಂತೆ ನೀಡಲಾಗುತ್ತಿದ್ದು, ಆಸಕ್ತ ಕರಾಟೆ-ಸ್ವಯಂ ರಕ್ಷಣಾ ಕೌಶಲ್ಯ ತರಬೇತಿ ಪಡೆದ ಮಹಿಳೆ ಮತ್ತು ಪುರುಷ ತರಬೇತುದಾರರು ಅರ್ಜಿ ಸಲ್ಲಿಸಬಹುದಾಗಿದೆ.ಅಧಿಸೂಚನೆ ಮತ್ತು ವಿವರಗಳಿಗಾಗಿ ಆನ್ ಲೈನ್ ವೆಬ್ ಸೈಟ್ http://dom.karnataka.gov.in ಗೆ ಭೇಟಿ ನೀಡಬಹುದು.ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಕಚೇರಿ ಅಥವಾ ದೂ.08392-200125/224 ಹಾಗೂ ಜಿಲ್ಲೆಯ ಅಲ್ಪಸಂಖ್ಯಾತರ ತಾಲ್ಲೂಕು ಮಾಹಿತಿ ಕೇಂದ್ರಗಳಲ್ಲಿ (ಬಳ್ಳಾರಿ-8310321101, ಸಂಡೂರು-9036925966/ 8660575061 ಮತ್ತು ಸಿರುಗುಪ್ಪ-9148889975) ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರಾಜು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ವಯಂ ಘೋಷಣೆಗೆ ಅವಧಿ ವಿಸ್ತರಣೆ

**ಹಾಸನ:** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದಯುವನಿಧಿ ಯೋಜನೆಯಲ್ಲಿ ನೋಂದಣಿಯಾದಅಭ್ಯರ್ಥಿಗಳು ಕಡ್ಡಾಯವಾಗಿ ಸ್ವಯಂಘೋಷಣ 'ಯನ್ನುಕೊಡಲೇಬೇಕಾಗಿರುವುದರಿಂದ, ಸ್ವಯಂಘೋಷಣೆಯನ್ನು ನೀಡುವ ಮೊದಲುಕೌಶಲ್ಯಕರ್ ಪೋರ್ಟಲ್‌ನಲ್ಲಿ (ಯುವನಿಧಿ ಪ್ಲಸ್) ನೋಂದಾಯಿಸಿಕೊಂಡ ನಂತರ ಫಲಾನುಭವಿಗಳು ಡಿಸೆಂಬರ್ ತಿಂಗಳಿಗೆ ಮಾತ್ರ ಸ್ವಯಂಘೋಷಣೆಯ ದಿನಾಂಕವನ್ನು 1 ರಿಂದ 31 ಡಿಸೆಂಬರ್ ಮಾಹೆಯ ದಿನಾಂಕದವರೆಗೂ ವಿಸ್ತರಿಸಿದ್ದು, ಸ್ವಯಂಘೋಷಣೆಯನ್ನುಕೊಡಲೇಬೇಕಾಗಿರುತ್ತದೆ. ಆದುದ್ದರಿಂದ ಸ್ವಯಂಘೋಷಣೆಯನ್ನುಕೊಡಲೇಬೇಕೆಂದು ಈ ಮೂಲಕ ಕೋರಲಾಗಿದೆ ಹಾಗೂ ಹೆಚ್ಚಿನಮಾಹಿತಿಗಾಗಿಕಚೇರಿದೂರವಾಣಿ ಸಂಖ್ಯೆ: 08172-296374, ನ್ನು ಸಂಪರ್ಕಿಸುವಂತೆ ಹಾಸನ ಉದ್ಯೋಗ ವಿನಿಮಯಕಚೇರಿಯ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.

## ಕಂಪಿಸಿದ ಭೂಮಿ ಬೆಚ್ಚಿಬಿದ್ದ ಜನತೆ

**ಜಗಳೂರು :** ತಾಲೂಕಿನ ಚಿಕ್ಕಮಲ್ಲನಹೊಳೆ ಗ್ರಾಮದಲ್ಲಿ ಶನಿವಾರ ರಾತ್ರಿ 8 ಗಂಟೆ ಸುಮಾರಿಗೆ ಗ್ರಾಮದ ಸುತ್ತ ಭಾರಿ ಶಬ್ದದಿಂದ ಭೂಮಿ ಕಂಪಿಸಿದ್ದು ಜನರು ಮನೆಯಿಂದ ಆತಂಕದಿಂದ ಹೊರ ಓಡಿ ಬಂದಿದ್ದಾರೆ. ಜಗಳೂರು ಮತ್ತು ಮೊಳಕಾಲ್ಮೂರು ಗಡಿ ಗ್ರಾಮವಾಗಿರುವ ಚಿಕ್ಕಮಲ್ಲನಹೊಳೆ ಗ್ರಾಮ ಸೇರಿದಂತೆ ಸುತ್ತ ಮುತ್ತಲ ಗ್ರಾಮಗಳ ಬಾಲರಾಮಪುರ, ದಿಬ್ಬದಹಳ್ಳಿ, ಚಳ್ಳಕೆರೆ ತೊರೆಕೊಲಮ್ಮನಹಳ್ಳಿ, ತಾಲೂಕಿನ ಮಲೂರಹಟ್ಟಿ, ವಿಜಯನಗರ ಜಿಲ್ಲೆಯ ಕೆಂಚಮನಹಳ್ಳಿ, ಆಲೂರು ಗ್ರಾಮಗಳವರೆಗೂ ನಿಗೂಢವಾದ ಸ್ಫೋಟದ ಶಬ್ದ ಕೇಳಿಸಿದ್ದು ಮನೆಯಲ್ಲಿದ್ದ ಪಾತ್ರೆಗಳು ಬಿದ್ದಿವೆ.

ಶಬ್ದಕ್ಕೆ ಅಡುಗೆ ಮಾಡುವ ಗೃಹಿಣಿಯರು. ಟಿವಿ ನೋಡುತ್ತ ಕುಳಿತಿದ್ದ ಜನರು ಹೊರಗೆ ಬಂದು ಗುಂಪುಗೂಡಿ ಚರ್ಚಿಸಿದ್ದಾರೆ. ಈ ಶಬ್ದ, ಏನಾದ್ರೂ ಭೂಕಂಪನವೇ ಎಂಬ ಅನುಮಾನ ವ್ಯಕ್ತಪಡಿಸಿ ಒಬ್ಬರಿಗೊಬ್ಬರು ಮಾತನಾಡುತ್ತ

ಆತಂಕಗೊಂಡಿದ್ದಾರೆ. ವಿಷಯವನ್ನು ತಹಶೀಲ್ದಾರ್ ಸೈಯದ್ ಕಲೀಂಉಲ್ಲಾಗೆ ಜನರು ಕರೆ ಮಾಡಿ ಮಾಹಿತಿ ನೀಡಿದ ತಕ್ಷಣ, ಜಿಲ್ಲಾಧಿಕಾರಿಗಳ ಕಚೇರಿಗೂ ಭೂಮಿ ಕಂಪಿಸಿದ ಸುದ್ದಿ ತಿಳಿದಿದೆ. ಇನ್ಸ್‌ಪೆಕ್ಟರ್ ಬಿ.ಎಂ.ಸಿದ್ರಾಮಯ್ಯ ನೇತೃತ್ವದ ಪೊಲೀಸರ ತಂಡು ರಾತ್ರಿ 9.30ರ ಸುಮಾರಿಗೆ ಭೇಟಿ ನೀಡಿ ಮಾಹಿತಿ ಪಡೆದುಕೊಂಡಿದ್ದಾರೆ

# ರಕ್ತದಾನ ಶಿಬಿರ ಯಶಸ್ವಿ



ಚಿಕ್ಕಮಗಳೂರು. ಪಂಚಶಾಸ್ತ ಎಜುಕೇಶನ್ ಅಂಡ್ ಕಲ್ಚರಲ್ ಟ್ರಸ್ಟ್ (ರಿ) ಹಾಗೂ ನಿರ್ವಿಘ್ನ ಸೇವಾಸಮಿತಿ (ರಿ) ಚಿಕ್ಕಮಗಳೂರು, ವತಿಯಿಂದ ಕನ್ನಡರಾಜ್ಯೋತ್ಸವದ ಅಂಗವಾಗಿ ಮಲ್ಲೇಗೌಡ ಜಿಲ್ಲಾ ಆಸ್ಪತ್ರೆಯ ರಕ್ತ ನಿಧಿ ಕೇಂದ್ರದಲ್ಲಿ ಉಚಿತ ರಕ್ತದಾನ ಶಿಬಿರ ನಡೆಸಲಾಯಿತು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಚೇತನ್ ಶ್ರೀಶಾಂತ್ ರವರು ಕನ್ನಡರಾಜ್ಯೋತ್ಸವವು ಕೇವಲ ನವೆಂಬರ್ ಒಂದಕ್ಕೆ ಸೀಮಿತವಾಗಿರದೆ ವರ್ಷಪೂರ್ತಿ ಕನ್ನಡರಾಜ್ಯೋತ್ಸವನ್ನು ಆಚರಿಸುವಂತಾಗಬೇಕು. ಕನ್ನಡದ ಕಂಪು ವರ್ಷಪೂರ್ತಿ ಹೊರ ಹೊಮ್ಮುತ್ತಿರಬೇಕು ಎಂದರು. ನಂತರ ರಕ್ತದಾನದ ಮಹತ್ವದ ಬಗ್ಗೆ ಮಾತನಾಡಿದ ಅವರು ಸ್ವತಃ ಅವರೆ ರಕ್ತದಾನ ಮಾಡಿ ಯುವ ಪೀಳಿಗೆಗೆ ಮಾದರಿ ಯಾದರು.

ಈ ಸಂದರ್ಭದಲ್ಲಿ ಜಿಲ್ಲಾ ವೈದ್ಯಾಧಿಕಾರಿಗಳಾದ ಡಾ. ಚಂದ್ರಶೇಖರ್, ಸಂಘದ ಅಧ್ಯಕ್ಷರಾದ ಡಾ.ಚೇತನ್ ಶ್ರೀಶಾಂತ್, ಪ್ರಯೋಗಶಾಲೆಯ ಮೇಲ್ವಿಚಾರಕರಾದ ಡಾ.ಅಪ್ರೋಜ್, ಪ್ರಯೋಗಶಾಲಾ ತಂತ್ರಜ್ಞರಾದ ದಿವಾಕರ್ ಇನ್ನಿತರರು ಉಪಸ್ಥಿತರಿದ್ದರು.

# ಕೆರೆಗಳ ಒತ್ತುವರಿ ತೆರವಿಗೆ ಕ್ರಮವಹಿಸಿ




**ಹಾಸನ :** ಕೆರೆ ಸಂರಕ್ಷಣೆಗೆ ಹೆಚ್ಚಿನಆದ್ಯತೆ ನೀಡಿಒತ್ತುವರಿತೆರವಿಗೆ ಕ್ರಮವಹಿಸಿ ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಲತಾಕುಮಾರಿಅವರು ಸೂಚಿಸಿದ್ದಾರೆ.

ಜಿಲ್ಲಾಧಿಕಾರಿಕಚೇರಿ ಸಭಾಂಗಣದಲ್ಲಿಇಂದು ನಡೆದ ಸಭೆಯಲ್ಲಿ ಮಾತನಾಡಿದಅವರು ತೆರವುಗೊಳಿಸಿದ ನಂತರ ಪುನಃ ಒತ್ತುವರಿಗೆ ಅವಕಾಶ ನೀಡದಂತೆ ಕ್ರಮಕೈಗೊಳ್ಳಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಒತ್ತುವರಿಆಗಿರುವ ಕೆರೆಗಳನ್ನು ಈಗಾಗಲೇ ತೆರವುಗೊಳಿಸಿರುವ ಬಗ್ಗೆ ಪ್ರತಿ ತಿಂಗಳು ಪ್ರಗತಿ ವರದಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಕೃಷ್ಣಮೂರ್ತಿ, ಅಪರಜಿಲ್ಲಾಧಿಕಾರಿ ಮಂಜುನಾಥ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿತಮ್ಮಯ್ಯ, ಸಣ್ಣ ನೀರಾವರಿ ಇಲಾಖೆ ಕಾರ್ಯಪಾಲಕಅಭಿಯಂತರರಾದರಾಮಚಂದ್ರ ಹಾಗೂ ಮತ್ತಿತರ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

# ಗ್ರಾಮೀಣ ಸೊಗಡಿನ ಜಾನಪದ ಪರಂಪರೆಕಣ್ಮರೆ-ಕುಮಾರಸ್ವಾಮಿ

**ಚಿತ್ರದುರ್ಗ:** ಪ್ರಸ್ತುತಆಧುನಿಕಜೀವನದ ವ್ಯವಸ್ಥೆಯಲ್ಲಿಗ್ರಾಮೀಣ ಸೊಗಡಿನಜಾನಪದ ಪರಂಪರೆಕಣ್ಮರೆಯಾಗುತ್ತಿದೆಎಂದು ಎಡಿಸಿ ಕುಮಾರಸ್ವಾಮಿ ವಿಷಾದಿಸಿದರು. ನಗರದ ಬಾಲಕರ ಸರ್ಕಾರಿ ಪ.ಪೂ. ಕಾಲೇಜು ಪ್ರೌಢಶಾಲಾ ವಿಭಾಗದಲ್ಲಿ ಶಾಲಾ ಶಿಕ್ಷಣ ಇಲಾಖೆಯಿಂದ ಶುಕ್ರವಾರ ಆಯೋಜಿಸಿದ್ದ ಚಿತ್ರದುರ್ಗತಾಲೂಕು ಮಟ್ಟದ ಪ್ರತಿಭಾಕಾರಂಜಿಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಇತ್ತೀಚೆಗೆ ಹಳ್ಳಿಯ ಸೊಗಡಿನ ವೀರಗಾಸೆ, ಬಯಲಾಟ, ಸೋಬಾನೆ ಪದ, ಜಾನಪದ ನೃತ್ಯಕಣ್ಮರೆಯಾಗುತ್ತಿದ್ದು ಪ್ರತಿಭಾಕಾರಂಜಿಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳ ಮೂಲಕ ಮುನ್ನಲೆಗೆತರುತ್ತಿರುವುದು ಸಂತಸದ ವಿಷಯವಾಗಿದೆ. ವಿದ್ಯಾರ್ಥಿಗಳು ಕೇವಲ ಪಠ್ಯ ವಿಷಯಕ್ಕೆ ಮಾತ್ರ ಸೀಮಿತವಾಗದೆ ಸಹಪಠ್ಯ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ನಮ್ಮ ಹಿರಿಯರ ಆಚರಣೆಗಳು, ಪರಂಪರೆ,



ಸಂಸ್ಕೃತಿ ಪರಿಚಯವಾಗುತ್ತದೆ. ಇದರಿಂದಗ್ರಾಮೀಣಜನರಜೀವನ ಮೌಲ್ಯಗಳು ಪರಿಚಯವಾಗುತ್ತವೆಎಂದರು.

ಡಿಡಿಪಿಐಎಂ.ಆರ್.ಮಂಜುನಾಥ್ ಮಾತನಾಡಿ, ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಶಾಲೆಯಲ್ಲಿ ನಡೆಸುವ ಸಹಪಠ್ಯ ಚಟುವಟಿಕೆಗಳಲ್ಲಿ ಭಾಗವಹಿಸಬೇಕು.ಸ್ಪರ್ಧಾ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದಆರೋಗ್ಯಕರ ಸ್ಪರ್ಧಾ ಮನೋಭಾವನೆ, ಸಹಕಾರ, ಹೊಂದಾಣಿಕೆಗುಣ ಬೆಳೆಸಿಕೊಳ್ಳಲು ಅನುಕೂಲವಾಗುತ್ತದೆ. ಜಿಲ್ಲಾಮಟ್ಟ ಮತ್ತುರಾಜ್ಯಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಿ ಜಿಲ್ಲೆಯ ಹೆಸರನ್ನುರಾಜ್ಯಮಟ್ಟದಲ್ಲಿ ಕಂಗೊಳಿಸುವಂತೆ ಮಾಡಬೇಕುಎಂದು ತಿಳಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಚ್. ಗಿರಿಜ ಮಾತನಾಡಿ, ವಿದ್ಯಾರ್ಥಿಗಳು ಆಸಕ್ತಿಯಿಂದ ಭಾಗವಹಿಸಿರುವುದು ಸಂತೋಷತಂದಿದೆ.ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಮಾತುಗಾರಿಕೆ, ಅಭಿವ್ಯಕ್ತಿಕೌಶಲ್ಯ, ಜ್ಞಾಪಕ ಶಕ್ತಿ ವೃದ್ಧಿಸಿಕೊಳ್ಳಲು ಪ್ರತಿಭಾಕಾರಂಜಿಕಾರ್ಯಕ್ರಮ ಪೂರಕವಾಗಿದೆಎಂದರು.

ನೋಡಲ್‌ಅಧಿಕಾರಿಕೆ.ಆರ್. ಲೋಕೇಶ್, ಸ.ನೌ.ಸಂ.ಜಿಲ್ಲಾಧ್ಯಕ್ಷ ಮಾಲತೇಶ್ ಮುದ್ದಜ್ಜಿ, ಜಿ.ಪ್ರಾ.ಶಾ.ಶಿ.ಸಂ. ಜಿಲ್ಲಾಧ್ಯಕ್ಷ ಮಹಾಂತೇಶ್, ಪ್ರೌಢಶಾಲಾ ಶಿ.ಸಂ.ತಾಲೂಕು ಅಧ್ಯಕ್ಷಬಸವರಾಜ್, ಪ್ರಾ.ಶಾ.ಸಂ. ತಾಲೂಕುಅಧ್ಯಕ್ಷಕೆಂಚಪ್ಪ, ವಿಷಯ ಪರಿವೀಕ್ಷಕ ಪ್ರಶಾಂತ್, ರಂಗನಾಯ್ಕ್, ಬಿ.ಆರ್.ಸಿ ಸಂಪತ್‌ಕುಮಾರ್, ಸ.ನೌ.ರಾ.ಪರಿಷತ್ ಸದಸ್ಯರಾದರಾಜಪ್ಪ, ಹನುಮಂತಪ್ಪ, ವಿಮಲಾಕ್ಷಿ, ಮಲ್ಲಿಕಾರ್ಜುನ್, ಬೈರೇಶಿ, ರೂಪ, ಉಮೇಶಯ್ಯ, ಮೂರ್ತಾಚಾರ್, ರವೀಂದ್ರನಾಥ್, ವಿದ್ಯಾಇದ್ದರು.

### ಶಿಗ್ಗಾಂವ ನೂತನ ಬಸ್ ಘಟಕ ಮತ್ತು ಚಾಲನಾ-ಮೆಕಾನಿಕ್ ತರಬೇತಿ ಕೇಂದ್ರ ಉದ್ಘಾಟನೆ

# ರಾಜ್ಯದಲ್ಲಿ 7,800 ಹೊಸ ಬಸ್‌ಗಳ ಖರೀದಿ-10 ಸಾವಿರ ನೌಕರರ ನೇಮಕ

**ಹಾವೇರಿ:** ಪ್ರಯಾಣಿಕರಿಗೆ ಸುಗಮ ಸಂಚಾರ ಒದಗಿಸುವ ಹಿನ್ನಲೆಯಲ್ಲಿ ರಾಜ್ಯದಲ್ಲಿ ಈಗಾಗಲೇ 5,800 ಬಸ್‌ಗಳನ್ನು ಖರೀದಿಸಿ ನಾಲ್ಕು ವಿಭಾಗಕ್ಕೆ ಹಂಚಿಕೆ ಮಾಡಲಾಗಿದೆ. ಹೊಸದಾಗಿ ಇನ್ನೂ ಎರಡು ಸಾವಿರ ಬಸ್‌ಗಳ ಖರೀದಿಗೆ ಸರ್ಕಾರ ಮಂಜೂರಾತಿ ನೀಡಿದೆ ಎಂದು ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

ಶಿಗ್ಗಾಂವ ಘಟಕದಲ್ಲಿ ಶುಕ್ರವಾರ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಹಾವೇರಿ ವಿಭಾಗದ ವತಿಯಿಂದ ಶಿಗ್ಗಾಂವ ನೂತನ ಬಸ್ ಘಟಕ ಮತ್ತು ಚಾಲನಾ ಹಾಗೂ ಮೆಕ್ಯಾನಿಕ್ ತರಬೇತಿ ಕೇಂದ್ರದ ಉದ್ಘಾಟನಾ ಸಮಾರಂಭದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ 700 ಹೊಸ ಬಸ್‌ಗಳ ಖರೀದಿಗೆ ಮಂಜೂರಾತಿ ದೊರೆತಿದ್ದು, ಈಗಾಗಲೇ 300 ಬಸ್‌ಗಳ ಖರೀದಿ ಪ್ರಕ್ರಿಯೆ ಪೂರ್ಣಗೊಂಡಿದೆ. ಬರುವ ದಿನಗಳಲ್ಲಿ ಇನ್ನೂ 400 ಬಸ್‌ಗಳ ಖರೀದಿ ಪ್ರಕ್ರಿಯೆ ಜರುಗಲಿದೆ. ಶಿಗ್ಗಾಂವ ಕ್ಷೇತ್ರಕ್ಕೆ ಅಗತ್ಯ ಬಸ್‌ಗಳನ್ನು ನೀಡಲಾಗುವುದು ಎಂದು ಭರವಸೆ ನೀಡಿದರು.

ನಮ್ಮ ಸರ್ಕಾರದ ಅವಧಿಯಲ್ಲಿ ಸಾರಿಗೆ ಇಲಾಖೆಯಲ್ಲಿ ನೇರ ನೇಮಕಾತಿ ಮೂಲಕ ಒಂಭತ್ತು ಸಾವಿರ ಹಾಗೂ ಅನುಕಂಪದ ಆಧಾರದ ಮೇಲೆ ಒಂದು ಸಾವಿರ ಸೇರಿ 10 ಸಾವಿರ ನೌಕರರ ನೇಮಕ ಮಾಡಲಾಗಿದೆ. ರಾಜ್ಯದಲ್ಲಿ 10 ತರಬೇತಿ ಕೇಂದ್ರಗಳನ್ನು ಉದ್ಘಾಟಿಸಲಾಗಿದೆ. ಬರುವ ದಿನಗಳಲ್ಲಿ ಇನ್ನೂ ಹೆಚ್ಚಿನ ತರಬೇತಿ ಕೇಂದ್ರಗಳನ್ನು ಆರಂಭಿಸಲಾಗುವುದು ಎಂದು ಹೇಳಿದರು.

ಶಾಸಕರು ಈ ಭಾಗದ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಅನುದಾನ ಬೇಡಿಕೆ ಸಲ್ಲಿಸದ್ದು, ಬರುವ



ಆಯವ್ಯಯದಲ್ಲಿ ಅನುದಾನ ಮಂಜೂರಾತಿಗೆ ಕ್ರಮವಹಿಸಲಾಗುವುದು. ದೇವಸ್ಥಾನಕ್ಕೆ ಬರುವ ಭಕ್ತಾಧಿಗಳಿಗೆ ಮೂಲ ಸೌಕರ್ಯ ಒದಗಿಸುವ ನಿಟ್ಟಿನಲ್ಲಿ ಯಲ್ಲಮ್ಮನಗುಡ್ಡದಲ್ಲಿ ರೂ.200 ಕೋಟಿ ಮೊತ್ತದ ಹಾಗೂ ಹುಲಿಗೆಮ್ಮ ದೇವಸ್ಥಾನದ ವಿವಿಧ ಕಾಮಗಾರಿಗೆ ರೂ.50 ಕೋಟಿ ಮೊತ್ತದ ಕಾಮಗಾರಿಗೆ ಮಂಜೂರಾತಿ ನೀಡಲಾಗಿದೆ. ನಮ್ಮ ಸರ್ಕಾರ ಅಧಿಕಾರಕ್ಕೆ ಬಂದಮೇಲೆ ವಿವಿಧ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಹೆಚ್ಚು ಆದ್ಯತೆ ನೀಡಿದೆ ಎಂದು ಹೇಳಿದರು.

ಶಿಗ್ಗಾಂವ ಕ್ಷೇತ್ರದಲ್ಲಿ ಹುಲಗೂರ ಹಾಗೂ ತಡಸ ಗ್ರಾಮಗಳು ಪಟ್ಟಣ ಪಂಚಾಯತ್‌ಗಳಾಗಲಿವೆ. ಈ ಗ್ರಾಮಗಳಲ್ಲಿನ ಬಸ್ ನಿಲ್ದಾಣ, ಸವಣೂರ ಬಸ್ ನಿಲ್ದಾಣ ಸೇರಿದಂತೆ ಗ್ರಾಮೀಣ ಹಾಗೂ ನಗರದ ಪ್ರದೇಶದಲ್ಲಿ ಬಸ್ ನಿಲ್ದಾಣಗಳು ಶಿಥಿಲಗೊಂಡಿದ್ದು, ಹೊಸ ಬಸ್ ನಿಲ್ದಾಣಕ್ಕೆ ನಿರ್ಮಾಣ ಮಾಡುವಂತೆ ಹಾಗೂ ವಿವಿಧ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಅನುದಾನ ಮಂಜೂರು ಮಾಡುವಂತೆ ಸಾರಿಗೆ ಸಚಿವರಿಗೆ ಮನವಿ ಮಾಡಿಕೊಂಡರು.

ಕರ್ನಾಟಕ ಗಡಿ ಪ್ರದೇಶದ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ, ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಶೇಖಪ್ಪ ಫಕ್ಕೀರಪ್ಪ ಮಣಕಟ್ಟಿ, ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಮತಿ ಯಶೋಧಾ ವಂಟಗೋಡಿ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕಿ ಶ್ರೀಮತಿ ಪ್ರಿಯಾಂಗಾ ಎಂ., ಮಾಜಿ ಸಂಸದ ಮಂಜುನಾಥ ಕುನ್ನೂರ ಇತರರು ಉಪಸ್ಥಿತರಿದ್ದರು.

ವಾ.ಕ.ರ.ಸಾ.ಸಂಸ್ಥೆ ಹಾವೇರಿ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿ ಜಿ.ವಿಜಯಕುಮಾರ ಪ್ರಾಸ್ತಾವಿಕವಾಗಿ ಮಾತನಾಡಿದರು.

ವಿಭಾಗೀಯ ಸಂಚಾರಿ ನಿಯಂತ್ರಣಾಧಿಕಾರಿ ಅಶೋಕ ಪಾಟೀಲ ಸ್ವಾಗತಿಸಿದರು. ಹಿಂಚಿಗೇರಿ ಅವರು ಕಾರ್ಯಕ್ರಮ ನಿರೂಪಿಸಿದರು.

# ಗ್ರಾಮೀಣ ವಿದ್ಯಾರ್ಥಿಗಳ ಸಾಧನೆಗಳನ್ನ ಬೆಳಕಿಗೆ ತರಬೇಕು

**ಚಿತ್ರದುರ್ಗ:** ವಿಶ್ವವಿದ್ಯಾಲಯ ಮಟ್ಟದಲ್ಲಿ ಗ್ರಾಮೀಣ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡುತ್ತಿದ್ದು, ಅದರಲ್ಲೂ ಕನ್ನಡ ವಿಭಾಗದಲ್ಲಿ ಮೊದಲನೇ ಶ್ರೇಯಾಂಕ್ ಗಳಿಸಿ, ಕನ್ನಡ ಭಾಷೆಯ ಅಭಿವೃದ್ಧಿಯ ಬಗ್ಗೆ, ಬೆಳವಣಿಗೆ ಬಗ್ಗೆ ಚಿಂತಿಸುವಂತ ವಿದ್ಯಾರ್ಥಿ ಸಮುದಾಯವನ್ನು ಪ್ರೋತ್ಸಾಹಿಸಿ ಉರಿದುಂಬಿಸಿದರೆ, ಕನ್ನಡ ಮಾಧ್ಯಮದಲ್ಲಿ, ಕನ್ನಡ ವಿಷಯದಲ್ಲಿ, ಅಧ್ಯಯನ ಮಾಡುವವರ ಸಂಖ್ಯಾ ಅಧಿಕವಾಗುತ್ತದೆ, ಮತ್ತು ಮಾತೃಭಾಷೆಯ ಬಗ್ಗೆ ಜನರಲ್ಲಿ ಅಭಿಮಾನ ಮೂಡುತ್ತದೆ ಎಂದು ಕರ್ನಾಟಕ ಜ್ಞಾನ-ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷರು ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ. ಎಚ್ ಕೆ ಎಸ್ ಸ್ವಾಮಿ ಅವರು ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ಕನ್ನಡ ಎಂ.ಎ. ವಿಭಾಗದಲ್ಲಿ ಮೊದಲನೆ ರಾಂಕ್ ಗಳಿಸಿ ಮತ್ತು ಕೆ ಸೆಟ್ ನಲ್ಲಿ 208 ಶ್ರೇಯಾಂಕ್ ಗಳಿಸಿ ಸಂಶೋಧನೆಗೆ ಮತ್ತು ಸಹಾಯಕ ಪ್ರಾಧ್ಯಾಪಕರು ಉದ್ಯೋಗಕ್ಕೆ ಆಯ್ಕೆಯಾದ ವಿದ್ಯಾರ್ಥಿನಿ ಭೂಮಿಕ. ಜಿ.ಎಂ. ರವರನ್ನೂ ಅಭಿನಂದಿಸುತ್ತ ಮಾತನಾಡುತ್ತಿದ್ದರು.

ಹಿಂದಸಕಟ್ಟೆ, ನಲಿಕೂಂಡ ಪೋಸ್ಟ್ ನ ಗ್ರಾಮೀಣ ವಿದ್ಯಾರ್ಥಿನಿ ಭೂಮಿಕ ಜಿ.ಎಂ, ದಾವಣಗೆರೆ ವಿಶ್ವವಿದ್ಯಾಲಯದ ಕನ್ನಡ ವಿಭಾಗದ ಎಂ.ಎ ಸ್ನಾತಕೋತ್ತರ ಪದವಿಯಲ್ಲಿ ಮೊದಲ ಶ್ರೇಯಾಂಕ್ ಗಳಿಸಿದ್ದು ಕೆ-ಸೆಟ್ ಪರೀಕ್ಷೆಯಲ್ಲಿ 208 ನೆ ಶ್ರೇಯಾಂಕ್ ಪಡೆದಿದ್ದು, ವಿಶ್ವವಿದ್ಯಾಲಯಕ್ಕೆ ಮತ್ತು ಗ್ರಾಮಕ್ಕೆ ಒಳ್ಳೆಯ ಹೆಸರು ತಂದುಕೊಟ್ಟಿದ್ದಾರೆ ಎಂದರು.

ಕರ್ನಾಟಕ ರಾಜ್ಯ ಸಹಾಯಕ ಪ್ರಾಧ್ಯಾಪಕರ ಪರೀಕ್ಷೆಯಲ್ಲಿ 208 ನೆ ಶ್ರೇಯಾಂಕ್ ಪಡೆದಿದ್ದು,(2025,) ಭೂಮಿಕಾ ರವರು ಕನ್ನಡ ವಿಭಾಗದ ಎಂ.ಎ.ಪದವಿಯಲ್ಲಿ ಮೊದಲ ಶ್ರೇಯಾಂಕ್ ಗಳಿಸಿದ್ದು, ಕೆ-ಸೆಟ್ ನಲ್ಲೂ ಸಹ ವಿಶಿಷ್ಟ ಶ್ರೇಣಿಯಲ್ಲಿ ಉತ್ತೀರ್ಣರಾಗಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗಾಗಿ ಆಯ್ಕೆಯಾಗಿದ್ದಾರೆ.

ಇವರು ಮಲ್ಲಿಕಾರ್ಜುನ್ ಜಿ.ಎನ್. ರವರು ಪುತ್ರಿಯಾಗಿದ್ದು ಗ್ರಾಮೀಣ ವಿಭಾಗದಿಂದ ಬಂದರೂ ಸಹ ಕಷ್ಟಪಟ್ಟು ಓದಿ, ಮುಂದೆ ಬಂದು , ಕೆ-ಸೆಟ್ ನಲ್ಲಿಯೂ ಸಹ ತೇರ್ಗಡೆ ಆಗಿರುವುದು ಎಲ್ಲರಿಗೂ ಸಂತೋಷ ತಂದಿದೆ ಎಂದು ದಾವಣಗೆರೆ ವಿಶ್ವವಿದ್ಯಾಲಯದ ಕನ್ನಡದ ವಿಭಾಗದ ಮುಖ್ಯಸ್ಥರು ಮತ್ತು ಪ್ರಾಧ್ಯಾಪಕರುಗಳು, ಮಿತ್ರರುಗಳು ಸಹ ಹಾರೈಸಿದ್ದಾರೆ ಮತ್ತು ಅಭಿನಂದಿಸಿದ್ದಾರೆ ಎಂದರು.

## ಆಕ್ಷೇಪಣೆಗೆ ಆಹ್ವಾನ

**ದಾವಣಗೆರೆ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ವತಿಯಿಂದ ಸಂಚಾರಿ ಆರೋಗ್ಯ ಘಟಕಗಳನ್ನು (ಎಂ.ಹೆಚ್.ಯು)ಅನುಷ್ಟಾನಗೊಳಿಸಲು ಮಂಜೂರಾದ ಶುಶ್ರೂಷಕಿಯರು, ಪ್ರಯೋಗ ಶಾಲಾ ತಂತ್ರಜ್ಞರ ಹುದ್ದೆಗಳಿಗೆ ಸೆಪ್ಟೆಂಬರ್ 19 ರಂದು ಸಂದರ್ಶನ ಏರ್ಪಾಡಿಸಿ ಆಯ್ಕೆಯಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಕಚೇರಿ ಸೂಚನಾ ಫಲಕದಲ್ಲಿ ಡಿಸೆಂಬರ್ 11 ರಂದು ಪ್ರಕಟಿಸಲಾಗಿದೆ. ಈ ಆಯ್ಕೆ ಪಟ್ಟಿಗೆ ಯಾವುದೇ ಆಕ್ಷೇಪಣೆಗಳಿದ್ದಲ್ಲ, ಸಮರ್ಥನಿಯ ದಾಖಲೆಗಳ ಜೊತೆಗೆ ಲಿಖಿತ ಆಕ್ಷೇಪಣೆಗಳನ್ನು ಪ್ರಕಟಣೆಗೊಂಡ 07 ದಿನಗಳೊಳಗೆ ಈ ಕಚೇರಿಯ ಎನ್ ಹೆಚ್ ಎಂ ವಿಭಾಗಕ್ಕೆ ಸಲ್ಲಿಸಲು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಷಣ್ಮುಖಪ್ಪ ತಿಳಿಸಿದ್ದಾರೆ.

## ಅವಧಿ ವಿಸ್ತರಣೆ

**ದಾವಣಗೆರೆ:** ಪ್ರಸಕ್ತ ಸಾಲಿಗೆ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಉದ್ಯೋಗಿನಿ, ಚೇತನಾ, ಧನಶ್ರೀ, ಲಿಂಗತ್ವ ಅಲ್ಪ ಸಂಖ್ಯಾತರ ಪುನರ್ವಸತಿ ಯೋಜನೆ ಹಾಗೂ ಮಾಜಿ ದೇವದಾಸಿ ಮಹಿಳೆಯರ ಪುನರ್ ವಸತಿ ಯೋಜನೆಗಳಿಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು 15 ಜನವರಿ 2026 ರವರೆಗೆ ವಿಸ್ತರಿಸಲಾಗಿದೆ ಎಂದು ಇಲಾಖೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

## ಸ್ವಯಂ ಘೋಷಣೆಗೆ ಅವಧಿ ವಿಸ್ತರಣೆ

**ಹಾಸನ:** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದಯುವನಿಧಿ ಯೋಜನೆಯಲ್ಲಿ ನೋಂದಣಿಯಾದಅಭ್ಯರ್ಥಿಗಳು ಕಡ್ಡಾಯವಾಗಿ ಸ್ವಯಂಘೋಷಣ 'ಯನ್ನುಕೊಡಲೇಬೇಕಾಗಿರುವುದರಿಂದ,

ಸ್ವಯಂಘೋಷಣೆಯನ್ನು ನೀಡುವ ಮೊದಲುಕೌಶಲ್ಯಕರ್ ಪೋರ್ಟಲ್‌ನಲ್ಲಿ (ಯುವನಿಧಿ ಪ್ಲಸ್) ನೋಂದಾಯಿಸಿಕೊಂಡ ನಂತರ ಫಲಾನುಭವಿಗಳು ಡಿಸೆಂಬರ್ ತಿಂಗಳಿಗೆ ಮಾತ್ರ ಸ್ವಯಂಘೋಷಣೆಯ ದಿನಾಂಕವನ್ನು 1 ರಿಂದ 31 ಡಿಸೆಂಬರ್ ಮಾಹೆಯ ದಿನಾಂಕದವರೆಗೂ ವಿಸ್ತರಿಸಿದ್ದು, ಸ್ವಯಂಘೋಷಣೆಯನ್ನುಕೊಡಲೇಬೇಕಾಗಿರುತ್ತದೆ.

ಆದುದ್ದರಿಂದ ಸ್ವಯಂಘೋಷಣೆಯನ್ನುಕೊಡಲೇಬೇಕೆಂದು ಈ ಮೂಲಕ ಕೋರಲಾಗಿದೆ ಹಾಗೂ ಹೆಚ್ಚಿನಮಾಹಿತಿಗಾಗಿಕಚೇರಿದೂರವಾಣಿ ಸಂಖ್ಯೆ: 08172-296374, ನ್ನು ಸಂಪರ್ಕಿಸುವಂತೆ ಹಾಸನ ಉದ್ಯೋಗ ವಿನಿಮಯಕಚೇರಿಯ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.

## ನಿಷೇಧಾಜ್ಞೆ ಜಾರಿ

**ಚಿಕ್ಕಮಗಳೂರು:** ಅಖಿಲ ಭಾರತ ವೃತ್ತಿ ಪರೀಕ್ಷೆಯು ಡಿಸೆಂಬರ್ 15 ರಿಂದ 19ರವರೆಗೆ ನಗರದ ಜ್ಯೋತಿನಗರ ಕೆ.ಎಂ.ರಸ್ತೆಯ ಕೈಗಾರಿಕಾ ವಸಾಹತು ಹಿಂಭಾಗದ ಸರ್ಕಾರಿ ಕೈಗಾರಿಕಾ ತರಬೇತಿ ಕೇಂದ್ರದಲ್ಲಿ ನಡೆಯಲಿದ್ದು,

ಪರೀಕ್ಷಾ ಪ್ರಕ್ರಿಯೆಯನ್ನು ಶಾಂತಿ ಮತ್ತು ಶಿಸ್ತುಪಾಲನೆಯೊಂದಿಗೆ ನಡೆಸುವ ದೃಷ್ಟಿಯಿಂದ ಪರೀಕ್ಷಾ ದಿನಗಳಲ್ಲಿ ಬೆಳಿಗ್ಗೆ 9 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಪರೀಕ್ಷಾ ಕೇಂದ್ರದ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿರುವುದಾಗಿ ಜಿಲ್ಲಾ ದಂಡಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳು ಆದ ಸಿ.ಎನ್.ಮೀನಾ ನಾಗರಾಜ್ ಅವರು ನಿಷೇಧಾಜ್ಞೆ ಜಾರಿಗೊಳಿಸಿ ಆದೇಶ ಹೊರಡಿಸಿದ್ದಾರೆ.

## ಪುರುಷರೇ ತುಂಬಿದ ರೈಲಿನ ಶೌಚಾಲಯದೊಳಗೆ ಸಿಕ್ಕಿ ಹಾಕಿಕೊಂಡ ಮಹಿಳೆ

**ಬಿಹಾರ:** ಒಂಟಿ ಮಹಿಳೆ ಪ್ರಯಾಣಿಸುತ್ತಿದ್ದ ರೈಲು ಬೋಗಿಯೊಳಗೆ ಏಕಕಾಲಕ್ಕೆ 30ರಿಂದ 40 ಪುರುಷರು ಬಂದಿದ್ದು ಇದರಿಂದ ಗಾಬರಿಯಾದ ಮಹಿಳೆ ರೈಲಿನ ಶೌಚಾಲಯದೊಳಗೆ ಪ್ರವೇಶಿಸಿ ಸಿಕ್ಕಿ ಹಾಕಿಕೊಂಡ ಘಟನೆ ಬಿಹಾರದಲ್ಲಿ ನಡೆದಿದೆ. ತಾನು ಗಾಬರಿಯಾಗಿರುವ ಕುರಿತು ವಿಡಿಯೊ ಮಾಡಿ ಸಾಮಾಜಿಕ ಮಾಧ್ಯಮದಲ್ಲಿ ಹರಿಯಬಿಟ್ಟಿದ್ದಾಳೆ. ಇದು ವೈರಲ್ ಆಗಿದ್ದು, ಮಾಹಿತಿ ತಿಳಿದ ಕೂಡಲೇ ರೈಲು ಅಧಿಕಾರಿಗಳು ಆಕೆಯ ರಕ್ಷಣೆಗೆ ಧಾವಿಸಿದರು. ಈ ಘಟನೆ ಬಿಹಾರದ ಕತಿಹಾರ್ ನಲ್ಲಿ ನಡೆದಿದೆ.

ಬಿಹಾರದ ಕತಿಹಾರ್ ಜಂಕ್ಷನ್ ನಿಂದ ಒಂಟಿಯಾಗಿ ರೈಲಿನಲ್ಲಿ ಪ್ರಯಾಣಿಸುತ್ತಿದ್ದ ಮಹಿಳೆಯೊಬ್ಬರು ಇದ್ದ ಬೋಗಿಯೊಳಗೆ 30ರಿಂದ 40 ಪುರುಷರು ಏಕಾಏಕಿ ಪ್ರವೇಶಿಸಿದ್ದಾರೆ. ಇದರಿಂದ ಗಾಬರಿಯಾದ ಮಹಿಳೆ ಈ ಸ್ಥಳ ತನಗೆ ಅಸುರಕ್ಷಿತವೆಂದು ಭಾವಿಸಿ ರೈಲು ಶೌಚಾಲಯದೊಳಗೆ ಪ್ರವೇಶಿಸಿದ್ದಾರೆ. ಬಳಿಕ ಇದರ ವಿಡಿಯೊ ರೆಕಾರ್ಡ್ ಮಾಡಿ ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಂಡರು. ರೈಲ್ವೆ ರಕ್ಷಣಾ ಪಡೆ ಬರುವವರೆಗೂ ಅವರು ಶೌಚಾಲಯದೊಳಗೆ ಇದ್ದರು ಎಂದು ಹೇಳಿದ್ದಾರೆ.

ಮಹಿಳೆ ವಿಡಿಯೊದಲ್ಲಿ ತನ್ನ ಭಯಾನಕ ಅನುಭವವನ್ನು ಹಂಚಿಕೊಂಡಿದ್ದಾರೆ. ತಾವು ನಿಗದಿತ ನಿಲ್ದಾಣದಲ್ಲಿ ಇಳಿಯಬೇಕಿತ್ತು. ಆದರೆ ಅಷ್ಟರಲ್ಲಿ ಯುವಕರ ಗುಂಪೊಂದು ಬೋಗಿಯೊಳಗೆ ನುಗ್ಗಿದ್ದು, ಜೋರಾಗಿ ಕೂಗುತ್ತಾ ಮತ್ತು ಪರಸ್ಪರ ತಳ್ಳುತ್ತಾ ಬಂದಿದ್ದಾರೆ. ಇದರಿಂದ ತಮಗೆ ಹೊರ ಹೋಗುವುದು ಅಸಾಧ್ಯವಾಗಿದೆ. ಕೂಡಲೇ ರೈಲು ಶೌಚಾಲಯದೊಳಗೆ ನುಗ್ಗಿದ ಆಕೆ ರೈಲ್ವೆ ಸಹಾಯವಾಣಿ ಸಂಖ್ಯೆ 139 ಕ್ಕೆ ಕರೆ ಮಾಡಿ ಸಹಾಯಕ್ಕಾಗಿ ವರದಿ ಮಾಡಿದರು. ತಕ್ಷಣ ಪ್ರತಿಕ್ರಿಯಿಸಿದ ಆರ್‌ಪಿಎಫ್ ತಂಡ ಬೋಗಿಗೆ ತೆರಳಿ ಜನರನ್ನು ಸರಿಸಿ ಮಹಿಳೆಯನ್ನು ಸುರಕ್ಷಿತವಾಗಿ ಹಿಂದಿರುಗಲು ಸಹಾಯ ಮಾಡಿದರು.

ಈ ಕುರಿತು ಮಹಿಳೆ ಹೇಳಿರುವುದು ಹೀಗೆ.. ಪ್ರಯಾಣದ ಸಮಯದಲ್ಲಿ ಸುರಕ್ಷತೆ ಬಗ್ಗೆ ಕಾಳಜಿ ವಹಿಸುವುದು ಏಕೆ ಮುಖ್ಯವೆಂದು ನನಗೆ ಈಗ ಅರ್ಥವಾಗಿದೆ. ನಾನು ಒಬ್ಬಂಟಿಯಾಗಿ ಪ್ರಯಾಣಿಸುತ್ತಿದ್ದೆ. ರೈಲು ಬಿಹಾರದ ಕತಿಹಾರ್ ಜಂಕ್ಷನ್‌ನಲ್ಲಿ ನಾನು ಇಳಿಯಬೇಕಿತ್ತು. ಆದ–ರೆ ಇದ್ದಕ್ಕಿದ್ದಂತೆ 30?40 ಯುವಕರು ಬೋಗಿಗೆ ನುಗ್ಗಿದ್ದು ಒಬ್ಬರನ್ನೊಬ್ಬರು ತಳ್ಳಿದರು. ಇದರಿಂದ ಗಾಬರಿಯಾಗಿ ನಾನು ಶೌಚಾಲಯದ ಒಳಗೆ ಸೇರಿದೆ. ಅಲ್ಲಿಂದ ಹೊರಗೆ ಹೆಜ್ಜೆ ಇಡಲೂ ಸಾಧ್ಯವಾಗಲಿಲ್ಲ. ಅವರೆಲ್ಲ ಬಾಗಿಲಲ್ಲಿ ನಿಂತಿದ್ದರು. ಕೂಡಲೇ ರೈಲ್ವೆ ಸಹಾಯವಾಣಿಗೆ ಕರೆ ಮಾಡಿದೆ. ಅದೃಷ್ಟವಶಾತ್ ಆರ್‌ಪಿಎಫ್ ಬಂದಿತು. ಅವರು ಬಂದು ನನಗೆ ಮರಳಲು ಸಹಾಯ ಮಾಡಿದರು. ಇದೊಂದು ಅತ್ಯಂತ ಭಯಾನಕ ಅನುಭವ ಎಂದು ಹೇಳಿದ್ದಾರೆ.

ಈ ಕುರಿತು ಅವರು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದು ಇದು ಭಾರಿ ವೈರಲ್ ಆಗಿದೆ. ರೈಲು ಪ್ರಯಾಣದ ವೇಳೆ ಮಹಿಳೆಯರು ಎದುರಿಸುವ ಸುರಕ್ಷತಾ ಕಾಳಜಿಗಳ ಕುರಿತು ವ್ಯಾಪಕ ಚರ್ಚೆಯನ್ನು ಹುಟ್ಟುಹಾಕಿದೆ. ತ್ವರಿತವಾಗಿ ರೈಲ್ವೇ ಸಿಬ್ಬಂದಿ ಪ್ರತಿಕ್ರಿಯಿಸಿರುವುದಕ್ಕೆ ಅನೇಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಗ್ರ್ಯಾಮಿ ಪ್ರಶಸ್ತಿ ವಿಜೇತ ರಿಕ್ಕಿ ಕೇಜ್ ಬೆಂಗಳೂರು ನಿವಾಸದಲ್ಲಿ ಕಳ್ಳತನ

**ನವದೆಹಲಿ:** ಗ್ರ್ಯಾಮಿ ಪ್ರಶಸ್ತಿ ವಿಜೇತ ರಿಕಿ ಕೇಜ್ ಅವರು ಜೊಮ್ಯಾಟೊ ಡೆಲಿವರಿ ವ್ಯಕ್ತಿಯೊಬ್ಬರು ಬೆಂಗಳೂರಿನ ತಮ್ಮ ಮನೆಗೆ ಅತಿಕ್ರಮಣ ಮಾಡಿ ಸಂಪ್ ಕವರ್ ಕದ್ದ ಆಘಾತಕಾರಿ ಘಟನೆಯನ್ನು ಇನ್‌ಸ್ಟಾಗ್ರಾಮ್‌ನಲ್ಲಿ ಹಂಚಿಕೊಂಡಿದ್ದಾರೆ.

"ನನ್ನನ್ನು ದರೋಡೆ ಮಾಡಲಾಯಿತು! ಪ್ರಿಯ ಜೊಮ್ಯಾಟೊ, ನಿಮ್ಮ ಚಾಲಕರಲ್ಲಿ ಒಬ್ಬರು ಗುರುವಾರ ನನ್ನ ಮನೆಗೆ ನುಗ್ಗಿ ನಮ್ಮ ಸಂಪ್ ಕವರ್ ಅನ್ನು ಕದ್ದಿದ್ದಾರೆಂದು ತೋರುತ್ತಿದೆ. ಇದು ಸಂಜೆ 6 ಗಂಟೆಗೆ. ಅವರು ತುಂಬಾ ಧೈರ್ಯಶಾಲಿ! ಇದು ಬಹುಶಃ ಅವರ ಮೊದಲ ಬಾರಿ ಅಲ್ಲ. ಅವರು ಕೇವಲ 15 ನಿಮಿಷಗಳ ಹಿಂದೆ ಪರಿಶೀಲನೆಗಾಗಿ ಬಂದರು, ಮತ್ತು ನಂತರ ಅತಿಕ್ರಮಣ ಮಾಡಿ ಅಪರಾಧ ಎಸಗಿದರು" ಎಂದು ರಿಕಿ ಕೇಜ್ ಬರೆದಿದ್ದಾರೆ.

"ನೀವು ಸಿಸಿಟಿವಿ ದೃಶ್ಯಾವಳಿಗಳನ್ನು ಎರಡು ಕೋನಗಳಿಂದ ನೋಡಬಹುದು. ಅವರ ಮುಖದ ಸ್ಕ್ರೀನ್‌ಶಾಟ್‌ಗಳು ಮತ್ತು ನಂಬರ್ ಪ್ಲೇಟ್ ಸಹ. ಕೆಂಪು ಹೋಂಡಾ ಆಕ್ಟಿವಾದಲ್ಲಿ ಸಂಖ್ಯೆ ಎಂ03ಊಜ8751 ಎಂದು ತೋರುತ್ತದೆ. ಈ ವ್ಯಕ್ತಿ ಯಾರು ಎಂದು ತಿಳಿಯಲು ನೀವು ಅಥವಾ ಪೊಲೀಸರು ಸಹಾಯ ಮಾಡುವ ಸಾಧ್ಯತೆ ಇದೆಯೇ ಅಲ್ಲದೆ, ಜನರೇ, ಜಾಗರೂಕರಾಗಿರಿ. ಇದು ನಿಮಗೂ ಆಗಬಹುದು!" ಎಂದು ಬರೆದುಕೊಂಡಿದ್ದಾರೆ.

ರಿಕಿ ಕೇಜ್ ನೀಡಿದ ದೂರಿಗೆ ಜೊಮಾಟಾ ಈಗ ಪ್ರತಿಕ್ರಿಯಿಸಿದ್ದು, ಈ ದುರದೃಷ್ಟಕರ ಘಟನೆಗೆ ತಕ್ಕ ಶಿಕ್ಷೆಯಾಗಬೇಕು ಎಂದು ಹೇಳಿದೆ.

ರಿಕಿ ಕೇಜ್ ಒಬ್ಬ ಭಾರತೀಯ ಸಂಗೀತ ಸಂಯೋಜ–ಕ, ಪರಿಸರವಾದಿ ಮತ್ತು ಮೂರು ಬಾರಿ ಗ್ರ್ಯಾಮಿ ಪ್ರಶಸ್ತಿ ವಿಜೇತರು. ರಿಕಿ ಕೇಜ್ 1981 ರಲ್ಲಿ ಅಮೆರಿಕದ ಉತ್ತರ ಕೆರೊಲಿನಾದಲ್ಲಿ ಜನಿಸಿದರು. ಅವರು ಎಂಟು ವರ್ಷದವರಾಗಿದ್ದಾಗ ಅವರ ಕುಟುಂಬ ಬೆಂಗಳೂರಿಗೆ ಸ್ಥಳಾಂತರಗೊಂಡಿತು. ಅವರು ಬೆಂಗಳೂರಿನ ಬಿಷಪ್ ಕಾಟನ್ ಶಾಲೆಯಲ್ಲಿ ವ್ಯಾಸಂಗ ಮಾಡಿದರು ಮತ್ತು ನಗರದ ಆಕ್ಸ್‌ಫರ್ಡ್ ದಂತ ಕಾಲೇಜಿನಿಂದ ದಂತವೈದ್ಯಶಾಸ್ತ್ರದಲ್ಲಿ ಪದವಿ ಪಡೆದರು, ನಂತರ ತಮ್ಮ ಸಂಗೀತ ವೃತ್ತಿಜೀವನದಲ್ಲಿ ಸಂಪೂರ್ಣವಾಗಿ ತೊಡಗಿಕೊಂಡರು.

## ಸಾಧುವಿನ ವೇಷದಲ್ಲಿ ತಲೆಮರೆಸಿಕೊಂಡಿದ್ದ ಜೀವಾವಧಿ ಶಿಕ್ಷೆಗೆ ಗುರಿಯಾಗಿದ್ದ ವ್ಯಕ್ತಿಯ ಬಂಧನ

**ಶಹಜಹಾನ್ಪುರ:** ಆಸಿಡ್ ದಾಳಿ ಪ್ರಕರಣದಲ್ಲಿ ಶಿಕ್ಷೆಗೆ ಗುರಿಯಾಗಿ ತಲೆ ಮರೆಸಿಕೊಂಡಿದ್ದ ವ್ಯಕ್ತಿಯೊಬ್ಬನನ್ನು ಶಿವಪುರಿ ಜಿಲ್ಲೆಯ ಗಾಯತ್ರಿ ಶಕ್ತಿಪೀಠದಲ್ಲಿ ಪೊಲೀಸರು ಬಂಧಿಸಿದ್ದಾರೆ. ಸಾಧುವಿನ ವೇಷದಲ್ಲಿದ್ದ ಆತನಿಗೆ 1986ರಲ್ಲಿ ಜೀವಾವಧಿ ಶಿಕ್ಷೆಗೆ ಗುರಿಪಡಿಸಲಾಗಿತ್ತು. ಸುಮಾರು 37 ವರ್ಷಗಳ ಹಿಂದೆ ಜಾಮೀನು ಪಡೆದಿದ್ದ ಆತ ಬಳಿಕ ತಲೆಮರೆಸಿಕೊಂಡಿದ್ದು, ಶಿವಪುರಿ ಜಿಲ್ಲೆಯ ಗಾಯತ್ರಿ ಶಕ್ತಿಪೀಠದಲ್ಲಿ ಸಾಧುವಿನ ವೇಷದಲ್ಲಿ ತಿರುಗಾಡುತ್ತಿದ್ದನು. ಬಂಧಿತ ಅಪರಾಧಿಯನ್ನು ರಾಜೇಶ್ ಅಲಿಯಾಸ್ ರಾಜು ಎಂದು ಗುರುತಿಸಲಾಗಿದೆ.1986 ಆಗಸ್ಟ್ ನಲ್ಲಿ ಈ ಘಟನೆ ನಡೆದಿದೆ. ಉತ್ತರ ಪ್ರದೇಶದ ಶಹಜಹಾನ್ಪುರ ಜಿಲ್ಲೆಯ ತಿಲ್ಹಾರ್ ಪೊಲೀಸ್ ಠಾಣೆ ಪ್ರದೇಶದಲ್ಲಿರುವ ತಮ್ಮ ಆಭರಣದ ಅಂಗಡಿಗೆ ಕ್ಯಾಶಿಯರ್ ಗಂಗಾದೀನ್ ಮತ್ತು ಓಂ ಪ್ರಕಾಶ್ ರಸ್ತೋಗಿ ಅವರು ಆಭರಣಗಳನ್ನು ಸ್ವಚ್ಛಗೊಳಿಸುವ ಆಸಿಡ್ ಬಾಟಲಿಯನ್ನು ಹಿಡಿದುಕೊಂಡು ಆಟೋದಲ್ಲಿ ಹೋಗುತ್ತಿದ್ದರು. ಈ ವೇಳೆ ರಾಜೇಶ್ ಎಂಬಾತ ಅವರನ್ನು ತಡೆದು ಥಳಿಸಿದ್ದಾನೆ. ಅಲ್ಲದೆ ಅವರ ಕೈಯಿಂದ ಆಸಿಡ್ ಬಾಟಲಿಯನ್ನು ಕಸಿದುಕೊಂಡು ಅವರಿಬ್ಬರ ಮೇಲೂ ಎಸೆದಿದ್ದಾನೆ. ಇದ–ರಿಂದ ಅವರಿಬ್ಬರು ತೀವ್ರವಾಗಿ ಗಾಯಗೊಂಡಿದ್ದರು.

ಈ ಬಳಿಕ ಗಂಗಾದೀನ್ ನೀಡಿದ ದೂರಿನಂತೆ ರಾಜೇಶ್ ವಿರುದ್ಧ ಐಪಿಸಿ ಸೆಕ್ಷನ್ 326 ಮತ್ತು 307ರ ಪ್ರಕರಣದ ಅಡಿಯಲ್ಲಿ ಪ್ರಕರಣ ದಾಖಲಿಸಲಾಯಿತು.

# ದೇಶದ 140 ಕೋಟಿ ಜನರ ಮತದಾನದ ಹಕ್ಕು ಉಳಿಸಲು ಹೋರಾಟ: ಡಿಸಿಎಂ ಡಿ.ಕೆ. ಶಿವಕುಮಾರ್

**ನವದೆಹಲಿ:** "ದೇಶದ 140 ಕೋಟಿ ಜನರ ಮತದಾನದ ಹಕ್ಕು ಉಳಿಸಲು ನಾವು ಮತಕಳ್ಳತನದ ವಿರುದ್ಧ ಹೋರಾಟ ಮಾಡುತ್ತಿದ್ದೇವೆ. ಇದರಲ್ಲಿ ಯಾವುದೇ ರಾಜಕೀಯ ಉದ್ದೇಶವಿಲ್ಲ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ದೆಹಲಿಯ ಕರ್ನಾಟಕ ಭವನದಲ್ಲಿ ಶಿವಕುಮಾರ್ ಅವರು ಮಾಧ್ಯಮಗಳಿಗೆ ಭಾನುವಾರ ಪ್ರತಿಕ್ರಿಯೆ ನೀಡಿ, ವೋಟ್ ಚೋರಿ ಪ್ರತಿಭಟನೆ ಬಗ್ಗೆ ಕೇಳಿದಾಗ, "ರಾಹುಲ್ ಗಾಂಧಿ ಹಾಗೂ ಮಲ್ಲಿಕಾರ್ಜುನ ಖರ್ಗೆ ಅವರ ನಾಯಕತ್ವದಲ್ಲಿ ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ನಾವು ಮತಕಳ್ಳತನ ವಿರುದ್ಧದ ಹೋರಾಟ ಆರಂಭಿಸಿದ್ದೆವು. ಈಗ ರಾಮಲೀಲಾ ಮೈದಾನದಲ್ಲಿ ಪ್ರತಿಭಟನೆ ಮಾಡುತ್ತಿದ್ದೇವೆ ಎಂದು ಹೇಳಿದರು.



ಈ ದೇಶದಲ್ಲಿ ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆ ನಡೆಸಬೇಕು ಎಂಬ ಸಂದೇಶ ನೀಡಲಾಗುತ್ತಿದೆ. ದೇಶದ ಚುನಾವಣೆಗಳು ಈಗ ನ್ಯಾಯಸಮ್ಮತವಾಗಿಲ್ಲ. ಮತಕಳ್ಳತನ ಮಾಡಲಾಗುತ್ತಿದೆ. ಇದಕ್ಕೆ ಸಾವಿರಾರು ಉದಾಹರಣೆಗಳಿವೆ. ರಾಹುಲ್ ಗಾಂಧಿ ಅವರು ಈ ವಿಚಾರವಾಗಿ ಸಂಸತ್ತಿನಲ್ಲಿ ಧ್ವನಿ ಎತ್ತಿದ್ದಾರೆ. ಇನ್ನು ಹಲವು ಬಾರಿ ಮಾಧ್ಯಮಗೋಷ್ಠಿ ಮೂಲಕ ದಾಖಲೆಗಳನ್ನು ಬಹಿರಂಗಗೊಳಿಸಿದ್ದಾರೆ. ಇಷ್ಟಾದರೂ ಚುನಾವಣಾ ಆಯೋಗದಿಂದ ಸರಿಯಾದ ಉತ್ತರ ಸಿಗುತ್ತಿಲ್ಲ. ಹೀಗಾಗಿ ಸಾಂವಿಧಾನಿಕ ಸಂಸ್ಥೆಗಳ ದುರ್ಬಳಕೆ ಬಗ್ಗೆ ಜನರಿಗೆ ಅರಿವು ಮೂಡಿಸಲು ನಾವು ಬೀದಿಗಿಳಿದು ಹೋರಾಟ ಮಾಡುತ್ತಿದ್ದೇವೆ" ಎಂದು ತಿಳಿಸಿದರು. ರಾಜ್ಯದ ಸುಮಾರು 4 ಸಾವಿರ ಕಾರ್ಯಕರ್ತರು ಭಾಗಿ

"ದೆಹಲಿಯ ಪ್ರತಿಭಟನೆಗೆ ರಾಜ್ಯದಿಂದ ಆಗಮಿಸುವ 1500 ಕಾರ್ಯಕರ್ತರಿಗೆ ನಾವು ವಾಸ್ತವ್ಯದ ವ್ಯವಸ್ಥೆ ಕಲ್ಪಿಸಿದ್ದೇವೆ. ಸುಮಾರು 2 ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಹಾಗೂ ನಾಯಕರು ತಮ್ಮ ವ್ಯವಸ್ಥೆ ತಾವೇ ಮಾಡಿಕೊಂಡಿದ್ದಾರೆ. ಕೆಲವರು ವಿಮಾನ, ಮತ್ತೆ ಕೆಲವರು ರೈಲಲ್ಲಿ ಆಗಮಿಸಿದ್ದಾರೆ. ಸುಮಾರು 3500 ರಿಂದ 4000 ಜನ ಪ್ರತಿಭಟನೆಗೆ ಬಂದಿದ್ದಾರೆ. ಮತಕಳ್ಳತನ ವಿರುದ್ಧ ರಾಜ್ಯದಲ್ಲಿ ನಡೆದ ಸಹಿ ಸಂಗ್ರಹ ಅಭಿಯಾನದಲ್ಲಿ 1.42 ಕೋಟಿ ಸಹಿ ಸಂಗ್ರಹ ಮಾಡಲಾಗಿದೆ. ಇಲ್ಲಿ ಸೇರಿರುವ ನಾಯಕರು, ಕಾರ್ಯಕರ್ತರೇ ಈ ಹೋರಾಟದ ಉತ್ಸಾಹಕ್ಕೆ ಸಾಕ್ಷಿ. ಇಲ್ಲಿರುವ ಪ್ರತಿಯೊಬ್ಬರೂ ದೇಶ ಹಾಗೂ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನು ಉಳಿಸಿಕೊಳ್ಳಬೇಕು, ಮತದಾನದ ಹಕ್ಕು ಕಾಪಾಡಬೇಕು ಎಂದು ಬಂದಿದ್ದಾರೆ" ಎಂದು ತಿಳಿಸಿದರು.

ಪ್ರಜಾಪ್ರಭುತ್ವ, ಸಂವಿಧಾನದ ಉಳಿವಿಗೆ ಮತಕಳ್ಳತನದ ವಿರುದ್ಧ ಹೋರಾಟ: ಡಿ.ಕೆ. ಶಿವಕುಮಾರ್

"ದೆಹಲಿಗೆ ಬರುವ ವಾಹನಗಳನ್ನು ಬಿಜೆಪಿ ಸರ್ಕಾರ ತಡೆ ಹಿಡಿದಿದೆಯಂತೆ. ವಾಹನ ದೆಹಲಿಯೊಳಗೆ ಪ್ರವೇಶ ಮಾಡಲು ಅವಕಾಶ ನೀಡುತ್ತಿಲ್ಲ. ಯಾ–ಕೆ ಈ ರೀತಿ ಮಾಡುತ್ತಿದ್ದಾರೆ ತಿಳಿಯುತ್ತಿಲ್ಲ. ಕೇಂದ್ರ ಸರ್ಕಾರ ಈ ವಿಚಾರದಲ್ಲಿ ಯಾಕೆ ಗಾಬರಿಯಾಗುತ್ತಿದೆ ಗೊತ್ತಿಲ್ಲ. ನಮ್ಮ ಧ್ವನಿಯನ್ನು ಅಡಗಿಸಲು ಯಾರಿಂದಲೂ ಸಾಧ್ಯವಿಲ್ಲ" ಎಂದು ಸ್ಪಷ್ಟಪಡಿಸಿದರು.

ಕಾಂಗ್ರೆಸ್ ಕಚೇರಿಗೆ ಭೇಟಿ ನೀಡುವ ಬಗ್ಗೆ ಕೇಳಿದಾಗ, "ಕಾಂಗ್ರೆಸ್ ಕಚೇರಿಗೆ ಬರುವಂತೆ ನಮಗೆ ಆಹ್ವಾನ ನೀಡಿದ್ದಾರೆ. ಸಂಚಾರ ದಟ್ಟಣೆ ಹಿನ್ನೆಲೆಯಲ್ಲಿ ಅಲ್ಲಿಂದ ನಾವು ಬಸ್ ಮೂಲಕ ರಾಮಲೀಲಾ ಮೈದಾನಕ್ಕೆ ತೆರಳುತ್ತೇವೆ. ಈ ಪ್ರತಿಭಟನೆಗಾಗಿ ನಾವು ನಮ್ಮ ಕಾರ್ಯಕರ್ತರಿಗೆ ವಿಶೇಷವಾಗಿ ಚಳಿ ವಾತಾವರಣಕ್ಕೆ ಅನುಕೂಲವಾಗುವಂತೆ ಟೀ ಶರ್ಟ್ ಮಾಡಿಸಲಾಗಿದೆ" ಎಂದು ತಿಳಿಸಿದರು.

ಸೋಲು, ಗೆಲುವಿಗೆ ಕಾಂಗ್ರೆಸಿಗರು ಯೋಚಿಸುವುದಿಲ್ಲ:

ಸೋಲಿನ ಹತಾಶೆಯಿಂದ ಕಾಂಗ್ರೆಸ್ ಈ ರೀತಿ ಸಮಾವೇಶ ಮಾಡುತ್ತಿದೆ ಎಂಬ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ಅವರು ತಮ್ಮ ಖುಷಿಗೆ ಏನು ಬೇಕಾದರೂ ಮಾತನಾಡುತ್ತಾರೆ.

ನಾವು ಕಾಂಗ್ರೆಸಿಗರು ಸೋಲು, ಗೆಲುವಿನ ಬಗ್ಗೆ ಯೋಚನೆ ಮಾಡುವುದಿಲ್ಲ. ಈ ದೇಶಕ್ಕೆ ಸ್ವಾತಂತ್ರ್ಯ ಹಾಗೂ ಸಂವಿಧಾನ ತಂದು ಕೊಟ್ಟಾಗ ನಮ್ಮ ಹಿರಿಯರು ಸಾಕಷ್ಟು ಪ್ರಾಣತ್ಯಾಗ ಮಾಡಿದ್ದಾರೆ. ಈ ದೇಶದ ಆರ್ಥಿಕ ತಜ್ಞನಿಗೆ ಸೋನಿಯಾ ಗಾಂಧಿ ಅವರು ಅಧಿಕಾರ ತ್ಯಾಗ ಮಾಡಿದರು. ಇಂದಿರಾ ಗಾಂಧಿ ಹಾಗೂ ರಾಜೀವ್ ಗಾಂಧಿ ಅವರು ದೇಶಕ್ಕಾಗಿ ಪ್ರಾಣವನ್ನೇ ಅರ್ಪಿಸಿದರು. ಜವಾಹರ್ ಲಾಲ್ ನೆಹರು, ಗಾಂಧೀಜಿ ಸೇರಿದಂತೆ ಅನೇಕ ಮಹನೀಯರು ಜೈಲುವಾಸ ಅನುಭವಿಸಿದರು.

ನೂರು ವರ್ಷಗಳ ಹಿಂದೆ ಮಹಾತ್ಮಾ ಗಾಂಧಿ ಅವರು ದೇಶದ ಸ್ವಾತಂತ್ರ್ಯ ಹೋರಾಟದ ನಾಯಕತ್ವ ವಹಿಸಿದರು. ಇಂದು ಪಕ್ಷ ಕಷ್ಟಕಾಲದಲ್ಲಿರುವಾಗ ಮಲ್ಲಿಕಾರ್ಜುನ ಖರ್ಗೆ ಅವರು ಪಕ್ಷದ ಅಧ್ಯಕ್ಷರಾಗಿದ್ದಾ–ರೆ" ಎಂದು ತಿಳಿಸಿದರು.

# ಮೆಕ್ಸಿಕೋಗೆ ತಿರುಗೇಟು ನೀಡಲು ಸಿದ್ಧ; ಸುಂಕ ಹೆಚ್ಚಳ ಬೆನ್ನಲ್ಲೇ ಸಿಡಿದೆದ್ದ ಭಾರತ

**ನವದೆಹಲಿ:** ಭಾರತದ ಮೇಲೆ ಶೇ. 50 ರಷ್ಟು ಸುಂಕ ಹೆಚ್ಚಳಕ್ಕೆ ಮೆಕ್ಸಿಕೋ ಅನುಮೋದನೆ ನೀಡಿದ ನಂತರ, ಭಾರತ ತನ್ನ ಹಿತಾಸಕ್ತಿಗಳನ್ನು ಕಾಪಾಡಿಕೊಳ್ಳಲು "ಸೂಕ್ತ ಕ್ರಮಗಳನ್ನು" ತೆಗೆದುಕೊಳ್ಳುವ ಎಚ್ಚರಿಕೆ ನೀಡಿದೆ ಎಂದು ಸರ್ಕಾರಿ ಮೂಲಗಳು ತಿಳಿಸಿವೆ. ಭಾರತೀಯ ರಫ್ತುದಾರರ ಹಿತಾಸಕ್ತಿಗಳನ್ನು ಕಾಪಾಡಲು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುವ ಹಕ್ಕನ್ನು ಭಾರತ ಕಾಯ್ದಿರಿಸಿದೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ . ಮಸೂದೆಯನ್ನು ಮಂಡಿಸುವ ಸಮಯದಲ್ಲಿ ಭಾರತವು ಮೆಕ್ಸಿಕೋ ಜೊತೆ ತೊಡಗಿಸಿಕೊಂಡಿತ್ತು ಎಂದು ಅಧಿಕಾರಿ ಹೇಳಿದ್ದಾರೆ.



ಭಾರತವು ಮೆಕ್ಸಿಕೋ ಜೊತೆಗಿನ ಪಾಲುದಾರಿಕೆಯನ್ನು ಗೌರವಿಸುತ್ತದೆ ಮತ್ತು ಎರಡೂ ದೇಶಗಳ ವ್ಯವಹಾರಗಳು ಮತ್ತು ಗ್ರಾಹಕರಿಗೆ ಪ್ರಯೋಜನಕಾರಿಯಾದ ಸ್ಥಿರ ಮತ್ತು ಸಮತೋಲಿತ ವ್ಯಾಪಾರ ವಾತಾವರಣದ ಕಡೆಗೆ ಸಹಯೋಗದೊಂದಿಗೆ ಕೆಲಸ ಮಾಡಲು ಸಿದ್ಧವಾಗಿದೆ" ಎಂದು ಅಧಿಕಾರಿ ಹೇಳಿದರು. ಮೆಕ್ಸಿಕೋದ ಬಿಡಿಭಾಗಗಳು, ಲಘು ಕಾರುಗಳು, ಬಟ್ಟೆ, ಪ್ಲಾಸ್ಟಿಕ್‌ಗಳು, ಉಕ್ಕು, ಗೃಹೋಪಯೋಗಿ ವಸ್ತುಗಳು, ಆಟಿಕೆಗಳು, ಜವಳಿ, ಪೀಠೋಪಕರಣಗಳು, ಪಾದರಕ್ಷೆಗಳು, ಚರ್ಮದ ವಸ್ತುಗಳು, ಕಾಗದ, ಕಾರ್ಡ್‌ಬೋರ್ಡ್, ಮೋಟಾರ್‌ಸೈಕಲ್‌ಗಳು, ಅಲ್ಯೂಮಿನಿಯಂ, ಟ್ರೇಲರ್‌ಗಳು, ಗಾಜು, ಸೋಪುಗಳು, ಸುಗಂಧ ದ್ರವ್ಯಗಳು ಮತ್ತು ಸೌಂದರ್ಯವರ್ಧಕಗಳಂತಹ ಸರಕುಗಳ ಮೇಲೆ ಮೆಕ್ಸಿಕೋ ಸುಂಕ ವಿಧಿಸಿದೆ.

ಟ್ರಂಪ್ ವಿಧಿಸಿದ ಶೇ. 50ರ ಸುಂಕ ಕೊನೆಗೊಳಿಸುವ ನಿರ್ಣಯ ಮಂಡಿಸಿದ ಅಮೆರಿಕ ಸಂಸದರು

ಮೆಕ್ಸಿಕೋದೊಂದಿಗೆ ವ್ಯಾಪಾರ ಒಪ್ಪಂದವನ್ನು ಹೊಂದಿರದ ಏಷ್ಯನ್ ದೇಶಗಳ 1,400 ಕ್ಕೂ ಹೆಚ್ಚು ಉತ್ಪನ್ನಗಳ ಮೇಲೆ 5% ರಿಂದ 50% ವರೆಗಿನ ಸುಂಕ ವಿಧಿಸುವ ಮಸೂದೆಗೆ ಬುಧವಾರ ದೇಶದ ಸೆನೆಟ್ ಅಂತಿಮ ಅನುಮೋದನೆ ನೀಡಿತು. ಕೆಳಮನೆಯಿಂದ ಮೊದಲೇ ಅಂಗೀಕರಿಸಲ್ಪಟ್ಟ ಈ ಮಸೂದೆ ಚೀನಾ, ಭಾರತ, ದಕ್ಷಿಣ ಕೊರಿಯಾ, ಥೈಲ್ಯಾಂಡ್ ಮತ್ತು ಇಂಡೋನೇಷ್ಯಾದಂತಹ ದೇಶಗಳಿಂದ ಬರುವ ಆಟೋ ಭಾಗಗಳು, ಜವಳಿ, ಪ್ಲಾಸ್ಟಿಕ್‌ಗಳು, ಬಟ್ಟೆ ಮತ್ತು ಉಕ್ಕಿನಂತಹ ಸರಕುಗಳ ಮೇಲೆ 50% ವರೆಗೆ ಸುಂಕ ಪರಿಣಾಮ ಬೀರುವ ಸಾಧ್ಯತೆಯಿದೆ.

ಮೆಕ್ಸಿಕೋದ ಈ ನಿರ್ಧಾರದಿಂದ ಅತಿ ಹೆಚ್ಚು ಪೆಟ್ಟು ಬೀಳುವುದು ಭಾರತದ 'ಆಟೋಮೊಬೈಲ್' ವಲಯಕ್ಕೆ. ಪ್ರಸ್ತುತ ಭಾರತದಿಂದ ಮೆಕ್ಸಿಕೋಗೆ ರಫ್ತಾಗುವ ಕಾರುಗಳ ಮೇಲೆ ಶೇ. 20ರಷ್ಟು ಆಮದು ಸುಂಕವಿದೆ. ಇದು ಜನವರಿಯಿಂದ ಶೇ. 50ಕ್ಕೆ ಏರಿಕೆಯಾಗಲಿದೆ. ರಾಯಿಟರ್ಸ್ ವರದಿಯ ಪ್ರಕಾರ, ಫೋಕ್ಸ್‌ವ್ಯಾಗನ್, ಹ್ಯುಂಡೈ, ನಿಸ್ಸಾನ್ ಮತ್ತು ಮಾರುತಿ ಸುಜುಕಿ ಸೇರಿದಂತೆ ಭಾರತದ ಪ್ರಮುಖ ಕಾರು ರಫ್ತುದಾರರ ಸುಮಾರು 1 ಬಿಲಿಯನ್ ಡಾಲರ್ ಅಂದರೆ ಸುಮಾರು 9,000 ಕೋಟಿ ರೂ. ಮೌಲ್ಯದ ರಫ್ತು ವಹಿವಾಟು ಅಪಾಯದಲ್ಲಿದೆ.

## ಜಮ್ಮುವಿನ ಜೈಲಿನಿಂದ ತಪ್ಪಿಸಿಕೊಳ್ಳಲು ಪ್ರಯತ್ನಿಸಿದ್ದೆ.. ನೆನಪಿಸಿಕೊಂಡ ಭಯೋತ್ಪಾದಕ ಮಸೂದ್ ಅಜರ್

**ನವದೆಹಲಿ:** ಜಮ್ಮುವಿನಲ್ಲಿ ಜೈಲಿನಲ್ಲಿದ್ದಾಗ ಅಲ್ಲಿಂದ ತಪ್ಪಿಸಿಕೊಳ್ಳಲು ಪ್ರಯತ್ನಿಸಿ ಸಿಕ್ಕಿ ಬಿದ್ದು, ಬಳಿಕ ತಾನು ಕಠಿಣ ಶಿಕ್ಷೆಗೆ ಒಳಗಿರುವುದಾಗಿ ನೆನಪಿಸಿಕೊಂಡಿದ್ದಾನೆ ಭಯೋತ್ಪಾದಕ ಪಾಕಿಸ್ತಾನ ಮೂಲದ ಭಯೋತ್ಪಾದಕ ಗುಂಪು ಜೈಶ್–ಎ–ಮೊಹಮ್ಮದ್ ಮುಖ್ಯಸ್ಥ ಮಸೂದ್ ಅಜರ್. ಪಾಕಿಸ್ತಾನದಲ್ಲಿ ನಡೆದ ಕಾರ್ಯಕ್ರಮವೊಂದರ ಆಡಿಯೊ ವೈರಲ್ ಆಗಿದ್ದು, ಇದರಲ್ಲಿ ಆತ ಜಮ್ಮುವಿನ ಜೈಲಿನಲ್ಲಿದ್ದಾಗ ಅಲ್ಲಿ ಸುರಂಗವನ್ನು ಅಗೆದು ತಪ್ಪಿಸಿಕೊಳ್ಳಲು ಪ್ರಯತ್ನಿಸಿದ್ದು, ಇದರ ಪರಿಣಾಮದಿಂದ ಹೆಚ್ಚು ಕಠಿಣ ಶಿಕ್ಷೆಗೆ ಒಳಗಾಗಬೇಕಾಯಿತು ಎಂದು ಹೇಳಿಕೊಂಡಿದ್ದಾನೆ.



1990 ರ ದಶಕದಲ್ಲಿ ಜಮ್ಮು ಮತ್ತು ಕಾಶ್ಮೀರದ ಜೈಲಿನಲ್ಲಿದ್ದ ಅಜರ್ ಪಾಕಿಸ್ತಾನದಲ್ಲಿ ಕಾರ್ಯಕ್ರಮವೊಂದರಲ್ಲಿ ಮಾಡಿರುವ ಭಾಷಣದ ಆಡಿಯೊ ಕ್ಲಿಪ್‌ನಲ್ಲಿ ಇಲ್ಲಿನ ಅನುಭವಗಳನ್ನು ಹಂಚಿಕೊಂಡಿದ್ದಾನೆ.

ಭಾರತದ ಸಂಸತ್ತಿನ ಮೇಲೆ 2001ರಲ್ಲಿ ನಡೆದ ದಾಳಿ ಹಾಗೂ ಮುಂಬೈನಲ್ಲಿ 2008ರಲ್ಲಿ ನಡೆದ ದಾಳಿ ಸೇರಿದಂತೆ ಹಲವು ಭಯೋತ್ಪಾದಕ ದಾಳಿಯಲ್ಲಿ ಭಾಗಿಯಾಗಿದ್ದ ಭಯೋತ್ಪಾದಕ ಅಜರ್ ನನ್ನು 1994ರಲ್ಲಿ ಬಂಧಿಸಲಾಗಿತ್ತು. ಬಳಿಕ ಜಮ್ಮು ಮತ್ತು ಕಾಶ್ಮೀರದ ಕೋಟ್ ಬಲ್ವಾಲ್ ಜೈಲಿನಲ್ಲಿದ್ದ ಅಜರ್ ಅಲ್ಲಿಂದ ತಪ್ಪಿಸಿಕೊಳ್ಳಲು ಸುರಂಗ ತೋಡಿದ್ದ. ಬಳಿಕ ಸಿಕ್ಕಿ ಬಿದ್ದು ತೀವ್ರ ಶಿಕ್ಷೆಗೆ ಗುರಿಯಾಗಿದ್ದನು.

ಕೋಟ್ ಬಲ್ವಾಲ್ ಜೈಲು ಮೋಸ್ಟ್ ವಾಂಟೆಡ್ ಭಯೋತ್ಪಾದಕರನ್ನು ಇರಿಸಿಕೊಳ್ಳಲು ಇರುವ ಭಾರತದ ಹೆಸರುವಾಸಿಯಾದ ಜೈಲಾಗಿದೆ. ಇಲ್ಲಿ ತಾನು ಸುರಂಗ ತೋಡಿರುವುದನ್ನು ನೋಡಿದ ಜೈಲು ಅಧಿಕಾರಿಗಳು ತೀವ್ರವಾಗಿ ತನ್ನನ್ನು ಥಳಿಸಿದ್ದಾರೆ. ಆ ಜೈಲು ಅಧಿಕಾರಿಗಳನ್ನು ಕಂಡರೆ ಈಗಲೂ ತನಗೆ ಭಯವಾಗುತ್ತದೆ ಎಂದು ಅಜರ್ ಹೇಳಿದ್ದಾನೆ.

ಜೈಲಿನಿಂದ ತಪ್ಪಿಸಿಕೊಳ್ಳಲು ನಾನು ಪ್ರಯತ್ನಿಸಿದ್ದಕ್ಕೆ ಇತರ ಭಯೋತ್ಪಾದಕರನ್ನು ಕೂಡ ಜೈಲು ಅಧಿಕಾರಿಗಳು ಥಳಿಸಿದ್ದಾರೆ. ನಾನು ಜೈಲಿನಿಂದ ತಪ್ಪಿಸಿಕೊಳ್ಳುವ ಕೊನೆಯ ದಿನ ಅವರು ಸುರಂಗವನ್ನು ನೋಡಿದರು. ಇದರಿಂದ ನನ್ನ ಯೋಜನೆ ವಿಫಲವಾಯಿತು ಎಂದು ಹೇಳಿದ್ದಾನೆ.

ಇದರ ಬಳಿಕ ತನಗೆ ಮತ್ತು ಇತರ ಕೈದಿಗಳಿಗೆ ಜೈಲಿನಲ್ಲಿರುವುದು ಮತ್ತಷ್ಟು ಕಠಿಣವಾಯಿತು. ಜೈಲಿನ ನಿಯಮ ಉಲ್ಲಂಘಿಸಿದ್ದಕ್ಕೆ ತನಕೆ ಮತ್ತು ಇತರರಿಗೆ ದೈಹಿಕ ಶಿಕ್ಷೆ ಸೇರಿದಂತೆ ಹಲವು ಕಠಿಣ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲಾಯಿತು. ನಮ್ಮನ್ನು ಸರಪಳಿಗಳಲ್ಲಿ ಬಂಧಿಸಲಾಗಿತ್ತು. ನಿತ್ಯದ ಚಟುವಟಿಕೆಗಳ ಮೇಲೆ ನಿರ್ಬಂಧ ಹೇರಲಾಯಿತು ಎಂದು ಹೇಳಿದ್ದಾನೆ.

# ಕೇಂದ್ರದಿಂದ ಮನರೇಗಾ ಯೋಜನೆಗೆ ಮರುನಾಮಕರಣ; ಕೆಲಸದ ಅವಧಿಯಲ್ಲೂ ಹೆಚ್ಚಳ: ಕನಿಷ್ಠ ವೇತನವೂ ಅಧಿಕ

**ದೆಹಲಿ:** ಕೋಟ್ಯಂತರ ಭಾರತೀಯರ ಪಾಲಿಗೆ ಆಶಾ ಕಿರಣವಾಗಿರುವ, 2005ರಲ್ಲಿ ಅಂದಿನ ಯುಪಿಎ ಸರ್ಕಾರ ಜಾರಿಗೆ ತಂದ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆಯ ಹೆಸರು ಬದಲಾಯಿಸಲಾಗಿದೆ.

ಈ ಯೋಜನೆಯ ಹೆಸರನ್ನು ಇದೀಗ ಪೂಜ್ಯ ಬಾಪು ಗ್ರಾಮೀಣ ರೋಜ್‌ಗಾರ್ ಯೋಜನೆ ಎಂದು ಬದಲಾಯಿಸಲಾಗಿದೆ. ಡಿಸೆಂಬರ್ 12ರಂದು ನಡೆದ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ಮರುನಾಮಕರಣಕ್ಕೆ ಒಪ್ಪಿಗೆ ನೀಡಲಾಯಿತು. ಜತೆಗೆ ಉದ್ಯೋಗ ನಿಯಮಗಳಲ್ಲಿ ಕೆಲವು ಬದಲಾವಣೆ ಮಾಡಲಾಗಿದೆ.



ಈ ಯೋಜನೆಯಡಿ ಒದಗಿಸುವ ಕೆಲಸದ ದಿನಗಳ ಸಂಖ್ಯೆಯನ್ನು 100 ದಿನಗಳಿಂದ 125 ದಿನಗಳಿಗೆ ಹೆಚ್ಚಿಸಲಾಗಿದೆ. ಈ ನಿರ್ಧಾರವು ಗ್ರಾಮೀಣ ಕಾರ್ಮಿಕರ ಜೀವನೋಪಾಯದ ಭದ್ರತೆಯನ್ನು ಗಣನೀಯವಾಗಿ ಹೆಚ್ಚಿಸುವ ನಿರೀಕ್ಷೆಯಿದೆ. ಇನ್ನು ಕಾರ್ಮಿಕರಿಗೆ ದೊರೆಯುವ ಕನಿಷ್ಠ ವೇತನವನ್ನು 240 ರೂ.ಗೆ ಹೆಚ್ಚಿಸಲಾಗಿದೆ. ಅದು ಬಿಟ್ಟು ಯೋಜನೆ ಮೊದಲಿನಂತೆಯೇ ಕಾರ್ಯ ನಿರ್ವಹಿಸಲಿದೆ ಎಂದು ಸರ್ಕಾರದ ಮೂಲಗಳು ತಿಳಿಸಿವೆ.

**2ನೇ ಬಾರಿ ಹೆಸರು ಬದಲಾವಣೆ**

ಹಾಗೆ ನೋಡಿದರೆ ಈ ಯೋಜನೆಯ ಹೆಸರು ಬದಲಾಯಿಸುತ್ತಿರುವುದು ಇದು 2ನೇ ಬಾರಿ. 2005ರಲ್ಲಿ ಅಂದಿನ ಯುಪಿಎ ಸರ್ಕಾರ ಈ ಯೋಜನೆಯನ್ನು ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆ (ನರೇಗಾ) ಎಂಬ ಹೆಸರಿನಲ್ಲಿ ಪ್ರಾರಂಭಿಸಿತು. ನಂತರ 2009ರಲ್ಲಿ ರಾಷ್ಟ್ರಪಿತ ಮಹಾತ್ಮಾ ಗಾಂಧಿ ಅವರ ಗೌರವಾರ್ಥ ಇದನ್ನು ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆ (ಮನರೇಗಾ) ಎಂದು ಮರುನಾಮಕರಣ ಮಾಡಲಾಯಿತು. 2024–25ರಲ್ಲಿ ಮನರೇಗಾ ಅಡಿಯಲ್ಲಿ ಪ್ರತಿ ಮನೆಗೆ ಒದಗಿಸಲಾದ ಸರಾಸರಿ ಉದ್ಯೋಗ ದಿನಗಳ ಸಂಖ್ಯೆ 50.24 ಎಂದು ಕೇಂದ್ರ ತಿಳಿಸಿದೆ.

**ಯಾಕಾಗಿ ಹೆಸರು ಬದಲಾವಣೆ?**

ಮರುನಾಮಕರಣವು ಯೋಜನೆಯ ಕಾನೂನು ಚೌಕಟ್ಟನ್ನು ನವೀಕರಿಸುವ ಮತ್ತು ಗ್ರಾಮೀಣ ಉದ್ಯೋಗಗಳಲ್ಲಿ ಏಕರೂಪತೆಯನ್ನು ತರುವ ಪ್ರಯತ್ನದ ಭಾಗ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಜತೆಗೆ ಇದರ ಹಿಂದಿನ ಪ್ರಮುಖ ಉದ್ದೇಶ ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿ ಅವರಿಗೆ ಮತ್ತಷ್ಟು ಗೌರವ ಸಮರ್ಪಿಸುವುದು ಎಂದಿದ್ದಾರೆ. ಪೂಜ್ಯ ಬಾಪು ಎಂಬ ಪದವು ಹೆಚ್ಚು ಆತ್ಮೀಯತೆ ಮತ್ತು ಪೂಜ್ಯನೀಯ ಭಾವವನ್ನು ವ್ಯಕ್ತಪಡಿಸುತ್ತದೆ ಎಂಬುದು ಸರ್ಕಾರದ ವಾದ.

ಈ ಹೆಸರು ಬದಲಾವಣೆಯು ಕೇವಲ ನಾಮಮಾತ್ರಕ್ಕೆ ಸೀಮಿತವಾಗಲಿದ್ದು, ಯೋಜನೆಯ ಮೂಲ ಉದ್ದೇಶ, ನಿಯಮಗಳು, ಅನುಷ್ಠಾನದ ರೀತಿ, ಫಲಾನಫಲಾನುಭವಿಗಳ ಆಯ್ಕೆ, ಅನುದಾನ ಹಂಚಿಕೆಯಲ್ಲಿ ಯಾವುದೇ ರೀತಿಯ ಬದಲಾವಣೆ ಇರುವುದಿಲ್ಲ ಎಂದು ಕೇಂದ್ರ ಸ್ಪಷ್ಟಪಡಿಸಿದೆ. ಈ ಯೋಜನೆಗಾಗಿ ಸರ್ಕಾರ 1.51 ಲಕ್ಷ ಕೋಟಿ ರೂ. ಹಂಚಿಕೆ ಮಾಡಲಿದೆ. ಅದಾಗ್ಯೂ ಕಾಂಗ್ರೆಸ್ ಈ ಹೆಸರು ಬದಲಾವಣೆಯನ್ನು ವಿರೋಧಿಸಿದೆ.

ಈ ಯೋಜನೆಯಡಿ ರಸ್ತೆ ನಿರ್ಮಾಣ, ಕೃಷಿ ಚಟುವಟಿಕೆ, ಜಲ ಸಂರಕ್ಷಣಾ ಚಟುವಟಿಕೆ, ಕೆರೆ ಅಗೆಯುವುದು, ಸಮುದಾಯ ಅಭಿವೃದ್ಧಿಗೆ ಸಂಬಂಧಿಸಿದ ಶ್ರಮದಾಯಕ ಕೆಲಸಗಳಿಗೆ ಅವಕಾಶವಿದೆ. ಫಲಾನುಭವಿಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರಿದ್ದಾರೆ.

## ಶ್ರೀಮಂಜುನಾಥೇಶ್ವರ ಪ್ರೌಢಶಾಲೆಯಲ್ಲಿ ಗುರುವಂದನೆ

## ಸದೃಢ ಸಮಾಜ ನಿರ್ಮಾಣದಲ್ಲಿ ಗುರುಗಳ ಪಾತ್ರ ಅನನ್ಯ: ಡಾ.ವೈ.ರಾಮಪ್ಪ



**ದಾವಣಗೆರೆ:** ಸದೃಢ ಸಮಾಜ ಮತ್ತು ಶಕ್ತಿಶಾಲಿ ದೇಶವನ್ನು ನಿರ್ಮಿಸುವಲ್ಲಿ ಗುರುಗಳ ಪಾತ್ರ ಅನನ್ಯವಾಗಿದ್ದು, ವಿದ್ಯಾರ್ಥಿಗಳಿಗೆ ಜ್ಞಾನ, ಶಿಸ್ತು, ಜೀವನದ ಮೌಲ್ಯಗಳನ್ನು ಸಮಾಜಕ್ಕೆ ನೀಡುವ ಶ್ರೇಷ್ಠ ಕೆಲಸಗಳನ್ನು ಶಿಕ್ಷಕರು ನಿಸ್ವಾರ್ಥವಾಗಿ ಮಾಡುತ್ತಿದ್ದಾರೆ ಎಂದು ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷರು ಮತ್ತು ಶ್ರೀ ಹೊಯ್ಸಳ ವಿದ್ಯಾಸಂಸ್ಥೆ ಸಂಸ್ಥಾಪಕ ಅಧ್ಯಕ್ಷರೂ ಆಗಿರುವ ಡಾ.ವೈರಾಮಪ್ಪ ಹೇಳಿದರು.

ಇಲ್ಲಿಗೆ ಸಮೀಪದ ಆವರಗೆರೆಯ ಶ್ರೀ ಮಂಜುನಾಥೇಶ್ವರ ಪ್ರೌಢಶಾಲೆಯಲ್ಲಿ 1998–99ನೇ ಸಾಲಿನಿಂದ 2024ರವರೆಗಿನ ಎಲ್ಲ ಹಿರಿಯ ವಿದ್ಯಾರ್ಥಿಗಳಿಂದ ಭಾನುವಾರ ಹಮ್ಮಿಕೊಂಡಿದ್ದ ಗುರುವಂದನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಹೊಯ್ಸಳ ಸಂಸ್ಥೆಯನ್ನು ನಿಸ್ವಾರ್ಥ ಮನೋಭಾವದಿಂದ ಸ್ಥಾಪಿಸಲಾಗಿದೆ. ಇದರಿಂದ ಬಡಜನರಿಗೆ ಶಿಕ್ಷಣ ಒದಗಿಸುವುದು ಕೂಡ ನಮ್ಮ ಉದ್ದೇಶ. ಅದೇ ರೀತಿಯಲ್ಲಿ ಇಲ್ಲಿನ ಶಿಕ್ಷಕರು ಕಾರ್ಯನಿರ್ವಹಿಸಿ 1991–92ರಲ್ಲಿ ಆರಂಭವಾದ ಶಾಲೆಯಲ್ಲಿ ಈವರೆಗೆ ಸಹಸ್ರಾರು ವಿದ್ಯಾರ್ಥಿಗಳನ್ನು ಈ ಸಮಾಜಕ್ಕೆ ಕೊಡುಗ–'ಯಾಗಿ ನೀಡಿದ್ದಾರೆ. ಇಲ್ಲಿ ಕಲಿತ ವಿದ್ಯಾರ್ಥಗಳು ನಾನಾ ವಲಯದಲ್ಲಿ ನಾನಾ ವೃತ್ತಿಗಳಲ್ಲಿ ಬದುಕು ರೂಪಿಸಿಕೊಂಡಿದ್ದಾರೆ. ಇದು ನಮ್ಮ ಸಂಸ್ಥೆಗೆ ಹೆಮ್ಮೆಯ ವಿಷಯ. ನಿಜವಾಗಿಯೂ ಬಡತನದಿಂದ ಶಿಕ್ಷಣ ಮೊಟಕುಗೊಳಿಸುವ ಆತಂಕದಲ್ಲಿದ್ದ ವಿದ್ಯಾರ್ಥಿಗಳಿಗೆ ನಮ್ಮ ಶಾಲೆ ಆಸರೆಯಾಗಿರುವುದು ಇಲ್ಲಿನ ಶಿಕ್ಷಕರ ಕಾರ್ಯವೈಖರಿಗೆ ಹಿಡಿದ ಕೈಗನ್ನಡಿ ಎಂದರು.

ಭಾರತೀಯ ಪರಂಪರೆಯಲ್ಲಿ ಗುರುವಿನ ಸ್ಥಾನ ಅತ್ಯಂತ ಉನ್ನತ, ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಕೆಲಸವನ್ನು ಗುರುಗಳು ನಿಸ್ವಾರ್ಥವಾಗಿ ಮಾಡುತ್ತಿದ್ದಾರೆ. ಯಾರದ್ದೇ ಸ್ಥಾನ, ಆಸ್ತಿ, ಅಧಿಕಾರ ಕೊನೆಯವರೆಗೂ ನಮ್ಮೊಡನೆ ಇರದೇ ಇರಬಹುದು; ಆದರೆ ಗುರುಗಳಿಂದ ಪಡೆದ ವಿದ್ಯೆ, ಸಂಸ್ಕಾರ ಮಾತ್ರ ಜೀವಿತಾವಧಿಯವರೆಗೆ ನಮ್ಮೊಡನೆ ಇರುತ್ತದೆ ಎಂದರು.

ಮಹಾನಗರ ಪಾಲಿಕೆ ಮಾಜಿ ಮೇಯರ್ ಜಯಮ್ಮ ಗೋಪಿನಾಯ್ಕ, ಮಾಜಿ ಸದಸ್ಯ ಎಚ್.ಜಿ.ಉಮೇಶ್, ವಿಶ್ವಮಾನವ ಮಂಟಪದ ಸಂಸ್ಥಾಪಕ ಅಧ್ಯಕ್ಷ ಕೆ.ರುದ್ರಮುನಿ ಶಾಲೆಯ ಆರಂಭದ ದಿನಗಳಿಂದಲೂ ಈವರೆಗೆ ಬೆಳವಣಿಗೆಯ ಕುರಿತು ಮಾತನಾಡಿದರು.

ಇದೇ ವೇಳೆ ಮುಖ್ಯಶಿಕ್ಷಕ ಎಂ.ಬಿ.ಪ್ರಕಾಶ್, ಸಹಶಿಕ್ಷಕರಾದ ಲೋಕೇಶ್ವರಾಚಾರಿ, ಜಗದೀಶ್, ಕಲ್ಲೇಶ್, ದಯಾನಂದ, ಬಸವರಾಜಪ್ಪ, ಬಿ.ವಿರೂಪಾಕ್ಷಪ್ಪ, ಕೆಂಚಪ್ಪ, ದೊಡ್ಡಯ್ಯ ಅವರನ್ನು ಎಲ್ಲ ವಿದ್ಯಾರ್ಥಿಗಳಿಂದ ಸನ್ಮಾನಿಸಿ, ಗೌರವಿಸಲಾಯಿತು. ಇದಕ್ಕೂ ಮುನ್ನ ಶ್ರೀಮಂಜುನಾಥೇಶ್ವರ ದೇವಸ್ಥಾನದಿಂದ ಶಾಲೆವರೆಗೆ ಅದ್ದೂರಿ ಮೆರವಣಿಗೆ ನಡೆಯಿತು.

# ಭಾರತೀಯ ಸೇನೆಗೆ ಮತ್ತಷ್ಟು ಬಲ; 2,500 ಕೋಟಿ ರೂ. ಮೌಲ್ಯದ ಪಿನಾಕಾ ರಾಕೆಟ್ ಖರೀದಿಗೆ ಪ್ರಸ್ತಾವನೆ: ಪಾಕಿಸ್ತಾನಕ್ಕೆ ನಡುಕು ಶುರು

**ನವದೆಹಲಿ:** ಭಾರತೀಯ ಸೇನೆಗೆ ಮತ್ತಷ್ಟು ಬಲ ತರುವ ನಿಟ್ಟಿನಲ್ಲಿ, 2,500 ಕೋಟಿ ರೂ. ಮೌಲ್ಯದ 120 ಕಿ.ಮೀ. ವ್ಯಾಪ್ತಿಯ ಪಿನಾಕಾ ರಾಕೆಟ್‌ಗಳ ಖರೀದಿಯ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರದ ಮುಂದಿಡಲಾಗಿದೆ.



ಭಾರತದ ದೀರ್ಘ ವ್ಯಾಪ್ತಿ ದಾಳಿ ಸಾಮರ್ಥ್ಯವನ್ನು ಬಲಪಡಿಸುವ ಮತ್ತು ಶಸ್ತ್ರಾಸ್ತ್ರ ಸಂಗ್ರಹವನ್ನು ವಿಸ್ತರಿಸುವ ಮಹತ್ವದ ಕ್ರಮವಾಗಿ ಈ ಪ್ರಸ್ತಾಪವನ್ನು ಮುಂದಿಡಲಾಗಿದೆ.

ದೇಶೀಯವಾಗಿ ಅಭಿವೃದ್ಧಿಪಡಿಸಲಾದ ಪಿನಾಕಾ ಮಲ್ಟಿ ಬ್ಯಾರೆಲ್ ರಾಕೆಟ್ ಲಾಂಚರ್ ವ್ಯವಸ್ಥೆಯ ವ್ಯಾಪ್ತಿ ಮತ್ತು ಮಾರಕ ಶಕ್ತಿಯನ್ನು ಗಣನೀಯವಾಗಿ ಹೆಚ್ಚಿಸುವುದೇ ಈ ಯೋಜನೆಯ ಉದ್ದೇಶ. ಹಿರಿಯ ರಕ್ಷಣಾ ಅಧಿಕಾರಿಗಳ ಪ್ರಕಾರ, ಈ ಪ್ರಸ್ತಾವನೆಯನ್ನು ಶೀಘ್ರದಲ್ಲೇ ರಕ್ಷಣಾ ಖರೀದಿ ಮಂಡಳಿ ಅನುಮೋದನೆಗಾಗಿ ಮುಂದಿಡಲಾಗುವ ಸಾಧ್ಯತೆ ಇದೆ.

ಭಾರತೀಯ ಸೇನೆ ಮೇಲೆ ಕೇಂದ್ರ ಸರ್ಕಾರದಿಂದ ಒತ್ತಡ; ರೇಣುಕಾ ಚೌಧರಿ ವಿವಾದಾತ್ಮಕ ಹೇಳಿಕೆ

ಈ ಹೊಸ ರಾಕೆಟ್‌ಗಳನ್ನು ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ಅಭಿವೃದ್ಧಿಪಡಿಸಲಿದೆ. ಈಗಾಗಲೇ ವಿಸ್ತೃತ ವ್ಯಾಪ್ತಿಯ ಈ ರೂಪಾಂತರವನ್ನು ಅಭಿವೃದ್ಧಿಪಡಿಸುವಲ್ಲಿ ಆಖಆಔ ಮುಂದುವರಿದ ಹಂತದಲ್ಲಿದೆ ಎಂದು ತಿಳಿದುಬಂದಿದೆ.

120 ಕಿ.ಮೀ. ವ್ಯಾಪ್ತಿಯ ರಾಕೆಟ್‌ಗಳು ಈಗಾಗಲೇ ಬಳಕೆಯಲ್ಲಿರುವ ಪಿನಾಕಾ ಲಾಂಚರ್‌ಗಳೊಂದಿಗೆ ಹೊಂದಾಣಿಕೆಯಾಗುತ್ತವೆ. ಪ್ರಸ್ತುತ, 40 ಕಿ.ಮೀ. ಮತ್ತು 75 ಕಿ.ಮೀ.ಗಿಂತ ಹೆಚ್ಚಿನ ವ್ಯಾಪ್ತಿಯ ರಾಕೆಟ್‌ಗಳನ್ನು ಹಾರಿಸುತ್ತವೆ. ಇದು ಯುದ್ಧದ ಸಂದರ್ಭದಲ್ಲಿ ಭಾರತೀಯ ಸೇನೆಗೆ ನೆರವಾಗಲಿದೆ ಎಂದು ಮೂಲಗಳು ತಿಳಿಸಿವೆ. ಆಪರೇಷನ್ ಸಿಂದೂರ್ ಕಾರ್ಯಾಚರಣೆಯ ನಂತರ ಸೇನೆ ತನ್ನ ಸಾಮರ್ಥ್ಯವನ್ನು ವಿಸ್ತರಿಸುವ ದೊಡ್ಡ ಪ್ರಯತ್ನದ ನಡುವೆಯೇ ದೀರ್ಘವ್ಯಾಪ್ತಿ ಪಿನಾಕಾ ಅಭಿವೃದ್ಧಿಗೆ ಮುಂದಾಗಿದೆ.

ಆಪರೇಷನ್ ಸಿಂದೂರ್ ನಂತರ ಸೇನೆಯು ತನ್ನ ಫಿರಂಗಿ ಬಲವನ್ನು ಹೆಚ್ಚಿಸಿಕೊಳ್ಳುವ ವ್ಯಾಪಕ ಪ್ರಯತ್ನದ ಮಧ್ಯೆ, ದೀರ್ಘ–ಶ್ರೇಣಿಯ ಪಿನಾಕಾಗೆ ಒತ್ತು ನೀಡಲಾಗಿದೆ. ಸೇನೆ ಈಗಾಗಲೇ ತನ್ನ ಪಿನಾಕಾ ರೆಜಿಮೆಂಟ್‌ಗಳನ್ನು ಬಲಪಡಿಸುವ ಪ್ರಕ್ರಿಯೆಯನ್ನು ಆರಂಭಿಸಿದೆ. ಇತ್ತೀಚೆಗೆ ಏರಿಯಾ ಡಿನೈಯಲ್ ಶಸ್ತ್ರಾಸ್ತ್ರಗಳು ಹಾಗೂ ಹೆಚ್ಚುವರಿ ಸಾಮರ್ಥ್ಯದ ಹೈಎಕ್ಸ್‌ಪ್ಲೋಸಿವ್ ರಾಕೆಟ್‌ಗಳಿಗಾಗಿ ಆದೇಶಗಳನ್ನು ನೀಡಿರುವುದಾಗಿ ತಿಳಿದುಬಂದಿದೆ. ಈ ವರ್ಷದ ಆರಂಭದಲ್ಲಿ, ರಕ್ಷಣಾ ಸಚಿವಾಲಯವು ಡಿಪಿಐಸಿಎಂ ಏರಿಯಾ ಡಿನೈಯಲ್ ಮ್ಯುನಿಷನ್ ಟೈಪ್ 1 ಹಾಗೂ ಹೈ ಎಕ್ಸ್‌ಪ್ಲೋಸಿವ್ ಪ್ರೀಫ್ರಾಗ್ಮೆಂಟೆಡ್ 1 (ಎನ್‌ಹಾನ್ಸ್ಡ್) ರಾಕೆಟ್‌ಗಳ ಖರೀದಿಗಾಗಿ ಇಕನಾಮಿಕ್ ಎಕ್ಸ್‌ಪ್ಲೋಸಿವ್ಸ್ ಲಿಮಿಟೆಡ್ (ಇಇಐ) ಮತ್ತು ಮ್ಯುನಿಷನ್ಸ್ ಇಂಡಿಯಾ ಲಿಮಿಟೆ–ಡ್ ಸಂಸ್ಥೆಗಳೊಂದಿಗೆ ಒಟ್ಟು 10,147 ಕೋಟಿ ರೂ. ಮೌಲ್ಯದ ಒಪ್ಪಂದಗಳಿಗೆ ಸಹಿ ಹಾಕಿತ್ತು.

"ಭಾರತೀಯ ಸೇನೆಯು ಮೇಲ್ಜಾತಿಯವರ ಕೈಯಲ್ಲಿದೆ"; ಮತ್ತೆ ಸಶಸ್ತ್ರ ಪಡೆ ಕುರಿತು ನಾಲಿಗೆ ಹರಿಬಿಟ್ಟ ರಾಹುಲ್



ರಕ್ಷಣಾ ಸಚಿವಾಲಯವು ಶಕ್ತಿ ಫೈರ್ ಕಂಟ್ರೋಲ್ ಸಾಫ್ಟ್‌ವೇರ್ ನವೀಕರಣಕ್ಕಾಗಿ ಭಾರತ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ (ಃಇಐ) ಜತೆಗೆ ಒಪ್ಪಂದವನ್ನು ಮುಕ್ತಾಯಗೊಳಿಸಿದೆ.

ಇದರಿಂದ ಈ ವ್ಯವಸ್ಥೆಯ ಕಾರ್ಯಾತ್ಮಕ ಪರಿಣಾಮಕಾರಿತ್ವ ಮತ್ತಷ್ಟು ಹೆಚ್ಚಾಗಲಿದೆ. ಒಪ್ಪಂದಗಳ ಸಹಿಯ ಸಂದರ್ಭದಲ್ಲಿ ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಉಪಸ್ಥಿತರಿದ್ದರು.

120 ಕಿ.ಮೀ. ವ್ಯಾಪ್ತಿಯ ಪಿನಾಕಾ ರೂಪಾಂತರವನ್ನು ಮುಂದಿನ ಹಣಕಾಸು ವರ್ಷದಲ್ಲಿ ಮೊದಲ ಬಾರಿ ಪರೀಕ್ಷೆ ನಡೆಸಲು ಯೋಜಿಸಲಾಗಿದೆ ಎಂದು ಆಖಆಔ ಅಧಿಕಾರಿ ದೃಢಪಡಿಸಿದ್ದಾರೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**